ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫೬

**ಪಟ್ಟಿ – ೯**

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತಮೂರನೆಯ ಅಧಿವೇಶನ
(ಮುಂದುವರೆದ ಉಪವೇಶನ)

ಬುಧವಾರ, ದಿನಾಂಕ : ೨೨ನೇ ಮಾರ್ಚ್, ೨೦೧೭

---

## ಸಮೂಹ – III

೧. ಅರಣ್ಯ ಸಚಿವರು.

೨. ಕಂದಾಯ ಸಚಿವರು.

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು.

೪. ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು.

೫. ಕಾರ್ಮಿಕ ಸಚಿವರು.

೬. ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು.

೭. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು.

---

## ಸರ್ವೆ ಕಾರ್ಯದ ಬಗ್ಗೆ

**ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೨೧ (೧೧೮೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ವೇಯರ್‌ಗಳ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು;

(ಆ) ರಾಜ್ಯದಲ್ಲಿ ಸರ್ವೇಯರ್ ಹುದ್ದೆಗಳು ಖಾಲಿ ಇವೆಯೇ; ಹಾಗಿದ್ದಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ; (ವಿವರ ನೀಡುವುದು)

(ಇ) ಸಾರ್ವಜನಿಕರು ರೈತರು ತಮ್ಮ ತಮ್ಮ ಜಮೀನಿನ ಸರ್ವೆಗಾಗಿ ಸರ್ವೆ ಇಲಾಖೆಯನ್ನು ಸಂಪರ್ಕಿಸಿದ್ದಲ್ಲಿ ತೊಂದರೆ ಮತ್ತು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ವಿವರ ನೀಡುವುದು;

(ಈ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಸರ್ವೆ ಇಲಾಖೆಗೆ ಸಾರ್ವಜನಿಕರು, ರೈತರು ಜಮೀನು ಹದ್ದುಬಸ್ತಿಗಾಗಿ ಸಲ್ಲಿಸಿದ ಅರ್ಜಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಉ) ಈ ಅರ್ಜಿಗಳಲ್ಲಿ ಎಷ್ಟು ಅರ್ಜಿಗಳ ಸರ್ವೆ ಕಾರ್ಯ ಪೂರ್ಣಗೊಂಡಿದೆ ಹಾಗೂ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; ಬಾಕಿ ಇದ್ದಲ್ಲಿ ಕಾರಣಗಳೇನು; ತಪ್ಪಿತಸ್ಥರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಊ) ಸರ್ವೆ ಇಲಾಖೆಯಲ್ಲಿ ಸರ್ವೇಯರು ಹಾಗೂ ಇತರೆ ಅಧಿಕಾರಿಗಳು ಹಣ ನೀಡಿದ್ದಲ್ಲಿ ಮಾತ್ರ ಸರ್ವೆ ಕಾರ್ಯ ಪೂರೈಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳಾವುವು? (ಜಿಲ್ಲಾವಾರು ವಿವರ ನೀಡುವುದು)

## ಕೆರೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೨೨ (೧೧೯೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿರುವ ಕೆರೆಗಳ ಒಟ್ಟು ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಕೆರೆಗಳಲ್ಲಿ ಎಷ್ಟು ಕೆರೆಗಳು ರೈತರಿಗೆ ನೀರಾವರಿಗೆ ಸಹಾಯಕಾರಿಯಾಗಿವೆ; (ವಿವರ ನೀಡುವುದು)

(ಇ) ಈ ಕೆರೆಗಳಲ್ಲಿ ಎಷ್ಟು ಕೆರೆಗಳಲ್ಲಿ ನೀರಿದೆ; ನೀರಿಲ್ಲದ ಕೆರೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ಈ ಕೆರೆಗಳಲ್ಲಿ ಹೂಳು ತುಂಬಿರುವ ಕೆರೆಗಳೆಷ್ಟು; ಹೂಳು ತೆಗೆಯಲಾಗಿರುವ ಕೆರೆಗಳೆಷ್ಟು; ಇದಕ್ಕಾಗಿ ಖರ್ಚು ಮಾಡಿರುವ ಅನುದಾನದ ಮೊತ್ತವೆಷ್ಟು;

(ಉ) ಮಂಡ್ಯ ಜಿಲ್ಲೆಯಲ್ಲಿನ ಕೆರೆಗಳ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು? (ತಾಲ್ಲೂಕುವಾರು ವಿವರ ನೀಡುವುದು)

## ಶಿಂಷಾನದಿಗೆ "ಏತ ನೀರಾವರಿ ಯೋಜನೆ ಅಳವಡಿಸುವ ಬಗ್ಗೆ"

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೨೩ (೧೧೯೧) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) "ಶ್ರೀ ಶಿಂಷಾ ನಾಲ ರೈತ ಹಿತರಕ್ಷಣ ಸಮಿತಿ" ಯವರು, ಏತ ನೀರಾವರಿ ಬಗ್ಗೆ ಮನವಿ ಸಲ್ಲಿದ್ದಾರೆಯೆ; ಹಾಗಿದ್ದರೆ ಸದರಿ ಯೋಜನೆ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಶಿಂಷಾ ನದಿಗೆ ಕೊಪ್ಪ ಹೋಬಳಿಯಲ್ಲಿ ಹರಿಯುವ ಕೌಡ್ಲೆ ಸೇತುವೆಯಿಂದ "ಕುಡುಗೂ ಬಾಳು" ಬಳಿ ಶಿಂಷಾ ನದಿಗೆ ಚೆಕ್ ಡ್ಯಾಂ ನಿರ್ಮಿಸಿ ಬೋಳಾರೆ ಕೆರೆಗೆ ಏತ ನೀರಾವರಿ ಮುಖಾಂತರ ಸಂಪರ್ಕ ಕಲ್ಪಿಸಿ ಮತ್ತೆ ಬೋಳಾರೆ ಕೆರೆಯಿಂದ ವಿಶ್ವೇಶ್ವರಯ್ಯ (V.C) ನಾಲೆ ಮಲ್ಲಿಗೆರೆ ಗ್ರಾಮದ ಬಳಿ ಸಂಪರ್ಕ ಕಲ್ಪಿಸುವುದು ಸರಕಾರದ ಗಮನಕ್ಕೆ ಬಂದಿದೆಯೇ; ಹಾಗಾದರೆ, ಈ ಯೋಜನೆ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಶಿಂಷಾ ನದಿಗೆ "ಯಡವನಹಳ್ಳಿ" ಹತ್ತಿರ ಚೆಕ್ ಡ್ಯಾಂ ನಿರ್ಮಿಸಿ "A" ಬಿಂದುವಿನಿಂದ ಸೋಮನಹಳ್ಳಿ ಏತಾ ನೀರಾವರಿ ಮೂಲಕ (V.C) ನಾಲೆ ರೆಗ್ಯೂಲೇಟರ್ ಸಂಪರ್ಕ ಕಲ್ಪಿಸುವ ಕಾಮಗಾರಿಗೆ ಹಾಗೂ "A" ಬಿಂದುವಿನಿಂದ ತರಿಕೆರೆ ಕಾಲೋನಿ (V.C) ನಾಲಾ ರೆಗ್ಯೂಲೇಟರಿಗೆ" ಏತಾ ನೀರಾವರಿ ಯೋಜನೆ ಮುಖಾಂತರ ಕಾಮಗಾರಿಗೆ ಮಂಜೂರಾತಿ ನೀಡಲಾಗಿದೆಯೇ; ನೀಡಿದ್ದಲ್ಲಿ ಈ ಬಗ್ಗೆ ವಿವರ ನೀಡುವುದು;

(ಈ) ಶಿಂಷಾ ನದಿಗೆ ಮೂಡ್ಯದ ಬಳಿಯಿಂದ, ಹರಳಕೆರೆ–ಕೆರೆಗೆ ಏತಾ ನೀರಾವರಿ ಯೋಜನೆ ಮುಖಾಂತರ ಹಾಗೂ ತರಿಕೆರೆ, ಕಾಲೋನಿ, (V.C) ನಾಲೆ ರೆಗ್ಯೂಲೇಟರ್ ಸಂಪರ್ಕ ಕಲ್ಪಿಸುವ ಈ ಯೋಜನೆಯ ಕಾಮಗಾರಿಗಳಿಗೆ ಮಂಜೂರಾತಿ ನೀಡಲಾಗಿದೆಯೇ; ನೀಡಿದ್ದಲ್ಲಿ, ಈ ಬಗ್ಗೆ ವಿವರ ನೀಡುವುದು;

(ಉ) ಸರ್ಕಾರ ಸದರಿ ಕಾಮಗಾರಿಗಳನ್ನು ಯಾವಾಗ ಕೈಗೊಳ್ಳುವುದು? (ವಿವರ ನೀಡುವುದು)

## ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿನ ಪ್ರಥಮ ದರ್ಜೆ/ ದ್ವಿತೀಯ ದರ್ಜೆ ಸಹಾಯಕ ಸಿಬ್ಬಂದಿಗಳ ಜ್ಯೇಷ್ಠತೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೩೨೪ (೧೧೭೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಪ್ರಥಮ ದರ್ಜೆ/ ದ್ವಿತೀಯ ದರ್ಜೆ ಸಹಾಯಕರು/ಉಪನೋಂದಣಾಧಿಕಾರಿಗಳ ಜ್ಯೇಷ್ಠತಾ ಪಟ್ಟಿಯನ್ನು ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆಯೇ;

(ಆ) ಹಾಗಿದ್ದಲ್ಲಿ, ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮದ ಸಂಪೂರ್ಣ ವಿವರ ನೀಡುವುದು?

## ರೆವಿನ್ಯೂ ನಿವೇಶನಗಳ ನೋಂದಣಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೩೨೫ (೧೧೭೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಇಲಾಖೆಯಲ್ಲಿ ರೆವಿನ್ಯೂ ನಿವೇಶನಗಳನ್ನು ನೋಂದಣಿ ಮಾಡಬಾರದೆಂದು ಸರ್ಕಾರ ಆದೇಶ ಹೊರಡಿಸಿದ್ದರೂ, ಆದೇಶದ ಉಲ್ಲಂಘನೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರೆವಿನ್ಯೂ ನಿವೇಶನಗಳನ್ನು ನೋಂದಣಿ ಮಾಡಲು ಸರ್ಕಾರದಿಂದ ಅಧಿಕೃತ ಆದೇಶವೇನಾದರೂ ಹೊಸದಾಗಿ ಆಗಿದೆಯೇ;

(ಇ) ಈ ರೀತಿ ನಿಯಮ ಉಲ್ಲಂಘಿಸಿ ನೋಂದಣಿ ಮಾಡಿದ ಉಪ ನೋಂದಾಣಾಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದೇ; ಕ್ರಮ ಕೈಗೊಂಡಿದ್ದಲ್ಲಿ, ಅಧಿಕಾರಿಗಳ ವಿವರ ನೀಡುವುದು?

## ಸರ್ಕಾರಿ ಜಮೀನುಗಳ ರಕ್ಷಣೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೩೨೬ (೧೧೭೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಇಲಾಖೆಯಲ್ಲಿ ಸರ್ಕಾರಿ ಜಮೀನುಗಳು ಅಂದರೆ ದೇವಸ್ಥಾನ, ಕಟ್ಟಡ ನಿರ್ಮಾಣಕ್ಕಾಗಿ, ಗೋಮಾಳ ಹಾಗೂ ಗ್ರಾಮಠಾಣ ಜಮೀನುಗಳ ರಕ್ಷಣೆಗೆ ಸರ್ಕಾರ ಇದುವರೆಗೆ ಯಾವ ಕ್ರಮಗಳನ್ನು ಕೈಗೊಂಡಿದೆ; (ಸಂಪೂರ್ಣ ವಿವರ ನೀಡುವುದು)

(ಆ) ಸರ್ಕಾರಿ ಜಮೀನನ್ನು ಖಾಸಗಿಯವರು ಒತ್ತುವರಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಒತ್ತುವರಿಯಾಗಿರುವ ಜಮೀನು ಎಷ್ಟು, ಒತ್ತುವರಿದಾರರನ್ನು ತೆರವುಗೊಳಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ;

(ಇ) ಗೋಮಾಳ ಜಮೀನುಗಳನ್ನು ಉಪನೋಂದಣಾಧಿಕಾರಿಗಳು ರಿಜಿಸ್ಟರ್ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ರಾಜ್ಯದಲ್ಲಿನ ಉಪನೋಂದಣಾಧಿಕಾರಿಗಳ ಕಟ್ಟಡಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೩೨೭ (೧೧೭೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹಾಲಿ ಇರುವ ಉಪನೋಂದಣಾಧಿಕಾರಿಗಳ ಕಛೇರಿಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಎಷ್ಟು ಕಛೇರಿಗಳು ಸರ್ಕಾರಿ ಕಟ್ಟಡದಲ್ಲಿ ಹಾಗೂ ಎಷ್ಟು ಕಛೇರಿಗಳು ಖಾಸಗಿ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ;

(ಆ) ಈ ಖಾಸಗಿ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಛೇರಿಗಳಿಗೆ ಸರ್ಕಾರಿ ಕಟ್ಟಡಗಳು ಮಂಜೂರಾಗಿವೆಯೇ; ಇಲ್ಲದಿದ್ದಲ್ಲಿ ಮಂಜೂರು ಮಾಡಲಾಗುವುದು ಯಾವಾಗ; ಯಾವ ಕಾಲಮಿತಿಯೊಳಗೆ ಮಂಜೂರು ಮಾಡಲಾಗುವುದು? (ವಿವರ ನೀಡುವುದು)

## ವಕೀಲರ ಸಂಘಗಳಿಗೆ ಮೂಲಭೂತ ಸೌಲಭ್ಯಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೩೨೮ (೧೧೮೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾನೂನು ಇಲಾಖೆಯಲ್ಲಿ ವಕೀಲರ ಸಂಘಗಳಿಗೆ ಒದಗಿಸುವ ಸೌಲಭ್ಯಗಳು ಯಾವುವು ಹಾಗೂ ಇಲ್ಲಿಯವರೆಗೂ ಒದಗಿಸಿರುವ ಸೌಲಭ್ಯಗಳೇನು; ಈಶಾನ್ಯ ಪದವೀಧರ ಕ್ಷೇತ್ರದ ಅಡಿಯಲ್ಲಿ ಬರುವ ವಕೀಲರ ಸಂಘಗಳೆಷ್ಟು; (ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಸದರಿ ಕ್ಷೇತ್ರದಲ್ಲಿ ವಕೀಲರ ಸಂಘಕ್ಕೆ ಮೂಲಭೂತ ಸೌಲಭ್ಯಗಳು ಹಾಗೂ ಕಾನೂನಾತ್ಮಕ ವಿಷಯಗಳನ್ನು ದಕ್ಷತೆಯಿಂದ ನ್ಯಾಯಾಲಯಗಳಲ್ಲಿ ಕಾರ್ಯನಿರ್ವಹಿಸುವ ದೃಷ್ಟಿಯಿಂದ ಸೌಲಭ್ಯಗಳ ಕೊರತೆ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಂಪೂರ್ಣ ವಿವರ ನೀಡುವುದು)

(ಇ) ಈ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ನ್ಯಾಯವಾದಿಗಳಿಗೆ ಇರುವ ಸೌಲಭ್ಯಗಳೇನು ಹಾಗೂ ಕಳೆದ ಮೂರು ವರ್ಷಗಳಲ್ಲಿ ಈಶಾನ್ಯ ಪದವೀಧರ ಕ್ಷೇತ್ರಗಳಲ್ಲಿ ಸೌಲಭ್ಯಗಳನ್ನು ಪಡೆದ ನ್ಯಾಯವಾದಿಗಳೆಷ್ಟು? (ಸಂಘವಾರು ವಿವರ ನೀಡುವುದು)

## ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿ "ಬಗರ್‌ಹುಕುಂ ಸಾಗುವಳಿ" ಸಕ್ರಮದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೩೨೯ (೧೨೦೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕದ ೦೬ ಜಿಲ್ಲೆಗಳು ಹಾಗೂ ಹರಪನಹಳ್ಳಿಯಲ್ಲಿ ಬಗರ್‌ಹುಕುಂ ಸಾಗುವಳಿ ರೈತರ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಬಗರ್‌ಹುಕುಂ ಸಾಗುವಳಿ ಮೂಲಕ ಇಲ್ಲಿಯವರೆಗೆ ಸಕ್ರಮಗೊಂಡ ಪ್ರಕರಣಗಳು ಎಷ್ಟು; ಹಾಗೂ ವಿಲೇವಾರಿಯಾಗದೆ ಬಾಕಿ ಇರುವ ಅರ್ಜಿಗಳು ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಬಗರ್‌ಹುಕುಂ ಸಾಗುವಳಿ ಸಮಸ್ಯೆ ಪರಿಹಾರಕ್ಕಾಗಿ ಭೂ ಮಂಜೂರಾತಿ ಕಾಯ್ದೆಗೆ ತಿದ್ದುಪಡಿ ತರಲಾಗಿದೆಯೇ? ಇದ್ದರೆ, ಸಂಪೂರ್ಣ ವಿವರ ನೀಡುವುದು.

## ಹೈದ್ರಾಬಾದ್–ಕರ್ನಾಟಕ ಭಾಗದ ನೀರಾವರಿ ಯೋಜನೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೩೩೦ (೧೨೦೩) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶದ ೦೬ ಜಿಲ್ಲೆಗಳಲ್ಲಿ ಕಳೆದ ೨ ವರ್ಷಗಳ ನೀರಾವರಿ ಯೋಜನೆಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಯೋಜನೆಗಳ ಅಡಿಯಲ್ಲಿ ಇಲ್ಲಿಯವರೆಗೆ ಪುನಶ್ಚೇತನ, ನವೀಕರಣ ಕಾಮಗಾರಿ ಕೈಗೊಳ್ಳಲಾಗಿದೆಯೇ; (ಜಿಲ್ಲಾವಾರು, ಮಾಹಿತಿ ನೀಡುವುದು)

(ಇ) ಸದರಿ ಯೋಜನೆಗಳ ಅಡಿಯಲ್ಲಿ ಪುನಶ್ಚೇತನ, ನವೀಕರಣ ಕಾಮಗಾರಿ ಕೈಗೊಳ್ಳುವ ಸಲುವಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು? (ಮಾಹಿತಿ ನೀಡುವುದು)

## ರೈತರು/ಭೂಮಾಲೀಕರ ನಕ್ಷೆ, ಪೋಡಿ, ಸರ್ವೆ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೩೩೧ (೧೨೦೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೈತರ/ಭೂಮಾಲೀಕರುಗಳಿಗೆ ನಕ್ಷೆ, ಪೋಡಿ, ಸರ್ವೆ ಕಾರ್ಯಗಳಿಗಾಗಿ ಸರ್ಕಾರದಿಂದ ನಿಗದಿಯಾದ ಶುಲ್ಕ ಎಷ್ಟು; ಸದರಿ ಕಾರ್ಯಗಳು ಪೂರ್ಣಗೊಳಿಸಲು ಇರುವ ಕಾಲಾವಧಿ ಎಷ್ಟು; (ಗ್ರಾಮೀಣ ಹಾಗೂ ನಗರಗಳ ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಸರ್ವೆಗಾಗಿ ಭೂಮಾಪಕರು ರೈತರಿಂದ ಹಣ ಸುಲಿಗೆ ಮಾಡುತ್ತಿರುವ ದೂರುಗಳೇನಾದರು ಬಂದಿವೆಯೇ; ಬಂದಿದ್ದರೆ, ಜಿಲ್ಲಾವಾರು ಮಾಹಿತಿ ನೀಡುವುದು; ಇದನ್ನು ತಡೆಗಟ್ಟಲು ಇಲಾಖೆಯು ಕೈಗೊಂಡಿರುವ ಕ್ರಮವೇನು; (ಮಾಹಿತಿ ನೀಡುವುದು)

(ಇ) ೧೧೩ ಹಾಗೂ ತತ್ಕಾಲ ಪೋಡಿಗಳಿಗಾಗಿ ಸಲ್ಲಿಸಿದ ಅರ್ಜಿಗಳು ನಿಗದಿತ ಅವಧಿಯೊಳಗೆ ಆಗದೆ ರೈತರು ತಿಂಗಳುಗಟ್ಟಲೆ ಕಾಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದರೆ, ಈ ನಿಟ್ಟಿನಲ್ಲಿ ಇದನ್ನು ಸರಿಪಡಿಸಲು ಸರ್ಕಾರದ ಮುಂದಿರುವ ಕ್ರಮಗಳೇನು? (ಮಾಹಿತಿ ನೀಡುವುದು)

## ಈಶಾನ್ಯ ಪದವೀಧರ ಕ್ಷೇತ್ರದಡಿಯಲ್ಲಿ ತಾಲ್ಲೂಕು ಮಟ್ಟದ ಕ್ರೀಡಾಂಗಣಗಳ ನಿರ್ಮಾಣದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೩೩೨ (೧೧೮೫) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈಶಾನ್ಯ ಪದವೀಧರ ಕ್ಷೇತ್ರದಡಿಯಲ್ಲಿ ತಾಲ್ಲೂಕು ಮಟ್ಟದ ಕ್ರೀಡಾಂಗಣಗಳು ನಿರ್ಮಾಣಗೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ತಾಲ್ಲೂಕುವಾರು ಮತ್ತು ಯೋಜನಾ ವೆಚ್ಚವಾರು ವಿವರ ನೀಡುವುದು)

(ಆ) ಸದರಿ ತಾಲ್ಲೂಕು ಕ್ರೀಡಾಂಗಣಗಳ ಕಾಮಗಾರಿಗಳಲ್ಲಿ ಕಳಪೆ ಮಟ್ಟದ ಕಾಮಗಾರಿಗಳಲ್ಲಿ ಹಣಕಾಸಿನ ಅವ್ಯವಹಾರದ ಬಗ್ಗೆ ಅಥವಾ CAG ವರದಿಗಳ ಆಧಾರಿತ ದೂರುಗಳು ಬಂದಿದೆಯೇ; ಬಂದಿದ್ದರೆ, ಕ್ರೀಡಾಂಗಣವಾರು ಸಂಪೂರ್ಣ ಮಾಹಿತಿ ನೀಡುವುದು;

(ಇ) ಈ ನಿಟ್ಟಿನಲ್ಲಿ ಸರ್ಕಾರದ ಕೈಗೊಂಡಿರುವ ಕ್ರಮ ಹಾಗೂ ಹಣಕಾಸಿನಲ್ಲಿ ಆದಂತಹ ಅವ್ಯವಹಾರದ ನಷ್ಟದ ಹಣವನ್ನು ವಸೂಲಿ ಮಾಡಲಾಗಿದೆಯೇ? (ವಿವರ ನೀಡುವುದು)

## ನೀರಾವರಿ ಪ್ರದೇಶದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೩೩ (೧೦೬೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನೀರಾವರಿಗೆ ಯೋಗ್ಯವಾದ ಒಟ್ಟು ಭೂಮಿ ಎಷ್ಟು; ನೀರಾವರಿಗಾಗಿ ಇಲ್ಲಿಯವರೆಗೆ ಎಷ್ಟು ಹಣ ಖರ್ಚು ಮಾಡಲಾಗಿದೆ; ಎಷ್ಟು ಪ್ರದೇಶ ನೀರಾವರಿಗೆ ಒಳಪಟ್ಟಿದೆ; ಇನ್ನೂ ಎಷ್ಟು ಪ್ರದೇಶ ನೀರಾವರಿ ಆಗಬೇಕಾಗಿದೆ; ಇದಕ್ಕಾಗಿ ಸರ್ಕಾರದ ಯೋಜನೆಗಳಾವುವು; (ವಿವರ ನೀಡುವುದು)

(ಆ) ಕಾವೇರಿ ನದಿ ನೀರು ಬಳಕೆಗೆ ಹಾಗೂ ನೀರಾವರಿಗಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ; (ವಿವರ ನೀಡುವುದು)

(ಇ) ಕೃಷ್ಣಾ ನದಿ ನೀರು ಬಳಕೆಗೆ ಹಾಗೂ ನೀರಾವರಿಗಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ? (ವಿವರ ನೀಡುವುದು)

## ಮಿನಿ ವಿಧಾನಸೌಧ ನಿರ್ಮಾಣದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೩೪ (೧೦೬೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಮಿನಿ ವಿಧಾನಸೌಧ ನಿರ್ಮಾಣಗೊಂಡಿವೆ; ಸರ್ಕಾರದ ಮಾರ್ಗಸೂಚಿಗಳನ್ವಯ ಇವುಗಳ ನಿರ್ಮಾಣದ ಉದ್ದೇಶವೇನು; (ವಿವರ ನೀಡುವುದು)

(ಆ) ವಿಜಯಪುರ ನಗರದಲ್ಲಿ ಜಿಲ್ಲಾ ಕೇಂದ್ರ ಸ್ಥಾನವಾದ ನಗರದಲ್ಲಿ ಮಿನಿ ವಿಧಾನಸೌಧ ನಿರ್ಮಾಣಕ್ಕೆ ಮಂಜೂರಾದ ಅನುದಾನವೆಷ್ಟು; ಈಗ ಎಷ್ಟು ಇಲಾಖೆಗಳು ಈ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ; (ಇಲಾಖೆಯ ಹೆಸರು ಸಹಿತ ವಿವರ ನೀಡುವುದು)

(ಇ) ವಿಜಯಪುರದಲ್ಲಿ ಮಿನಿ ವಿಧಾನಸೌಧ ಕಟ್ಟಡ ನಿರ್ಮಾಣದಿಂದ ಸರ್ಕಾರದ ಮೂಲ ಉದ್ದೇಶ ಈಡೇರಿದೆಯೇ? (ಸಂಪೂರ್ಣ ವಿವರ ನೀಡುವುದು)

## ಗೋಮಾಳಕ್ಕಾಗಿ ಕಾಯ್ದಿರಿಸಿದ ಜಾಗದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೩೫ (೧೦೬೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ–ಬಾಗಲಕೋಟೆ ಜಿಲ್ಲೆಗಳಲ್ಲಿರುವ ಗೋಮಾಳಕ್ಕಾಗಿ ಕಾಯ್ದಿರಿಸಿರುವ ಜಾಗವೆಷ್ಟು; (ಪ್ರತಿ ಗ್ರಾಮವಾರು ವಿವರ ನೀಡುವುದು)

(ಆ) ಗೋಮಾಳವನ್ನು ಸಧ್ಯಕ್ಕೆ ಯಾವ ಉದ್ದೇಶಕ್ಕೆ ಉಪಯೋಗಿಸಲಾಗುತ್ತಿದೆ; ಇದರ ನಿರ್ವಹಣೆಯನ್ನು ಯಾರಿಗೆ ವಹಿಸಲಾಗಿದೆ; ಸಮರ್ಪಕವಾಗಿ ನಿರ್ವಹಣೆಯಾಗುತ್ತಿದೆಯೇ; (ವಿವರ ನೀಡುವುದು)

(ಇ) ಈ ಗೋಮಾಳವನ್ನು ಅತಿಕ್ರಮವಾಗದಂತೆ ಅವುಗಳಲ್ಲಿ ಮೇವು ಬೆಳೆದು ಗ್ರಾಮದ ದನಕರುಗಳಿಗೆ ಉಚಿತವಾಗಿ ಮೇವು ನೀಡುವಂತಹ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವ ಕ್ರಮ ತೆಗೆದುಕೊಂಡಿದೆ? (ವಿವರ ನೀಡುವುದು)

## ಬರಪೀಡಿತ ಜಿಲ್ಲೆಗಳಲ್ಲಿ ಮರ ಕಡಿಯುತ್ತಿರುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೩೬ (೧೦೫೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬರಪೀಡಿತ ಜಿಲ್ಲೆಗಳಲ್ಲಿ ಮರ ಕಡಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬರಪೀಡಿತ ಜಿಲ್ಲೆಗಳಲ್ಲಿ ಮರ ನೆಡುವುದು ಮತ್ತು ಮರ ಕಡಿಯುವುದಕ್ಕೆ ಸರ್ಕಾರವು ಮಾರ್ಗಸೂಚಿಯನ್ನು ಕಟ್ಟುನಿಟ್ಟಾಗಿ ಪಾಲಿಸುತ್ತಿದೆಯೇ;

(ಇ) ಮರ ಕಡಿಯುವಂತಹ ಚಟುವಟಿಕೆಗೆ ಸರ್ಕಾರದಿಂದಲೇ ನೇರವಾಗಿ ದರ ನಿಗಧಿಗೊಳಿಸಿ, ಮಾರಾಟ ಮಾಡಲು ಸರ್ಕಾರ ಉದ್ದೇಶಿಸಿದೆಯೇ; ಮತ್ತು ಅಕ್ರಮವಾಗಿ ಮರ ಕಡಿಯುವರ ಮೇಲೆ ಕಠಿಣ ಶಿಕ್ಷೆ ವಿಧಿಸುವ ಬಗ್ಗೆ ಗಂಭೀರವಾಗಿ ಚಿಂತನೆ ಮಾಡಲಾಗಿದೆಯೇ;

(ಈ) ಬರ ಜಿಲ್ಲೆಗಳಲ್ಲಿ ಬೇಕಾಬಿಟ್ಟಿಯಾಗಿ ನಿರಂತರವಾಗಿ ಮರ ಕಡಿಯುವುದರಿಂದ ಪರಿಸರ ತಾಪಮಾನ, ಮಳೆ ಮೇಲೆ ಪರಿಣಾಮವಾಗುವುದನ್ನು ಸರ್ಕಾರವು ಗಮನಿಸಿದೆಯೇ; ಗಮನಿಸಿದಲ್ಲಿ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು)

## ಸಣ್ಣ ನೀರಾವರಿ ಇಲಾಖೆಯಿಂದ ಕೆರೆಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೩೭ (೧೯೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನಲ್ಲಿ ೨೦೧೪ ರಿಂದ ೨೦೧೭ರ ಸಾಲಿನಲ್ಲಿ ಎಷ್ಟು ಕೆರೆಗಳ ಅಭಿವೃದ್ಧಿಗೆ ಹಣ ಬಿಡುಗಡೆಗೊಳಿಸಲಾಗಿದೆ; (ಪ್ರತಿ ಕೆರೆಗಳವಾರು ಹಣದ ವಿವರ ನೀಡುವುದು)

(ಆ) ಕೆರೆಗಳಲ್ಲಿನ ಹೂಳು ತೆಗೆಯುವ ಯೋಜನೆ ಸರ್ಕಾರಕ್ಕಿದೆಯೇ;

(ಇ) ಎನ್.ಆರ್.ಬಿ.ಸಿ. ಯಿಂದ ಕೆರೆಗಳಿಗೆ ನೀರು ತುಂಬುವ ಯೋಜನೆ ಸರಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ತೆಗೆದುಕೊಳ್ಳುವ ಕ್ರಮವೇನು?

## ದೇವಸ್ಥಾನಕ್ಕೆ ಅನುದಾನ ನೀಡುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೩೮ (೧೯೪) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗೆ ೨೦೧೬–೧೭ನೇ ಸಾಲ್ಲಿನಲ್ಲಿ ಗುಡಿಗಳ ಜೀರ್ಣೋದ್ದಾರಕ್ಕೆ ಬಿಡುಗಡೆ ಮಾಡಿದ ಹಣವೆಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ದೇವದುರ್ಗ ತಾಲ್ಲೂಕಿಗೆ ಗುಡಿಗಳ ಜೀರ್ಣೋದ್ಧಾರಕ್ಕೆ ಪ್ರಸ್ತಾವನೆಗಳು ಬಂದಿದೆಯೇ;

(ಇ) ೨೦೧೫–೧೬, ೨೦೧೬–೧೭ರಲ್ಲಿ ದೇವದುರ್ಗ ತಾಲ್ಲೂಕಿಗೆ ಜೀರ್ಣೋದ್ಧಾರಕ್ಕಾಗಿ ಮಂಜೂರಾದ ಹಣವೆಷ್ಟು? (ಗ್ರಾಮವಾರು, ಗುಡಿವಾರು ವಿವರ ನೀಡುವುದು)

## ಬ್ಯಾರೇಜ್ ಗೇಟ್ ನಿರ್ವಾಹಣೆ ಬಗ್ಗೆ

**ಶ್ರೀ ಬಸವರಾಜ  ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೩೯ (೧೦೯೩) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆ, ದೇವದುರ್ಗ ತಾಲ್ಲೂಕಿನ ಗೂಗಲ್ ಬ್ಯಾರೇಜಿನ ಗೇಟುಗಳು ನಿರ್ವಹಣೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ತೆಗೆದುಕೊಂಡ ಕ್ರಮವೇನು;

(ಇ) ಗೇಟ್‌ಗಳ ವಾರ್ಷಿಕ ನಿರ್ವಹಣೆ ಯಾರಿಗೆ ವಹಿಸಲಾಗಿದೆ?

## ಕಚ್ಚಾ ಸಾಮಗ್ರಿ ಬೆಳೆಯಲು ಅರಣ್ಯ ಭೂಮಿ ನೀಡುವ ಬಗ್ಗೆ

**ಶ್ರೀ ಬಸವರಾಜ್ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೩೪೦ (೧೨೨೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅರಣ್ಯ ಇಲಾಖೆಯಿಂದ ಮೈಸೂರು ಕಾಗದ ಕಾರ್ಖಾನೆ (M.P.M) ಭದ್ರಾವತಿ, ಇವರಿಗೆ ಕಚ್ಚಾ ಸಾಮಗ್ರಿ ಬೆಳೆಯುವ ಸಂಬಂಧ ಎಷ್ಟು ಅರಣ್ಯ ಭೂಮಿಯನ್ನು ನೀಡಲಾಗಿದೆ; (ವಿವರವಾಗಿ ಗ್ರಾಮ ಸರ್ವೆ ನಂ. ವಿಸ್ತೀರ್ಣ ಒಳಗೊಂಡಂತೆ ಮಾಹಿತಿ ನೀಡುವುದು)

(ಆ) ಈ ಭೂಮಿಯನ್ನು ಕ್ರಯಕ್ಕೆ ನೀಡಲಾಗಿದೆಯೇ; ಅಥವಾ ಗುತ್ತಿಗೆ ನೀಡಲಾಗಿದೆಯೇ;  ಇದರ ನಿಯಮ ನಿಬಂಧನೆಗಳೇನು; (ವಿವರವಾದ ಮಾಹಿತಿ ಕೊಡುವುದು)

(ಇ) ಸದರಿ ಭೂಮಿಯನ್ನು ಯಾರಾದರೂ ಒತ್ತುವರಿ ಮಾಡಿದ್ದಾರೆಯೇ; (ಮಾಡಿದ್ದರೆ, ವಿವರವಾದ ಮಾಹಿತಿ ಕೊಡುವುದು) ಇದರ ಸಂಬಂಧ ಸರ್ಕಾರ ಏನು ಕ್ರಮ ಕೈಗೊಂಡಿದೆ;

(ಈ) ಸದರಿ ಭೂಮಿಯಲ್ಲಿ ಕಾರ್ಖಾನೆಯವರು ಯಾವ ಯಾವ ಮರಗಳನ್ನು ಬೆಳೆದಿರುತ್ತಾರೆ; ಬೆಳೆದ ಮರಗಳನ್ನು ಕಾರ್ಖಾನೆಯವರು ಉಪಯೋಗಿಸಿದ್ದಾರೆಯೇ; ಅಥವಾ ಬೇರೆಯವರಿಗೆ ನೀಡಿದ್ದಾರೆಯೇ? (ವಿವರವಾದ ಮಾಹಿತಿ ಕೊಡುವುದು)

## ಗುತ್ತಿಗೆ, ಸಂಚಿತ ವೇತನ, ಹೊರಗುತ್ತಿಗೆ ಹಾಗೂ ಇತರೆ ವಿಧಾನಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಯನ್ನು ವಿಲೀನಗೊಳಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೩೪೧ (೧೨೨೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದಲ್ಲಿ ಗುತ್ತಿಗೆ, ಸಂಚಿತ ವೇತನ, ಹೊರಗುತ್ತಿಗೆ ಹಾಗೂ ಇತರೆ ವಿಧಾನಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಆ) ಈ ಸಿಬ್ಬಂದಿಗಳು ಎಷ್ಟು ವರ್ಷಗಳಿಂದ ಕೆಲಸ ನಿರ್ವಹಿಸುತ್ತಿದ್ದಾರೆ; (ವಿವರವಾದ ಮಾಹಿತಿ ನೀಡುವುದು)

(ಇ) ಇವರನ್ನು ವಿಶ್ವವಿದ್ಯಾಲಯದ ಸೇವೆಯಲ್ಲಿ ವಿಲೀನಗೊಳಿಸಲು ಉದ್ದೇಶಿಸಲಾಗಿದೆಯೇ;

(ಈ) ಈಗಾಗಲೇ ಲೋಕೋಪಯೋಗಿ, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಇತರೆ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ದಿನಗೂಲಿ ನೌಕರರನ್ನು ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ನಿಯಮಗಳನ್ನು ರೂಪಿಸಿ ವಿಲೀನಗೊಳಿಸಿದಂತೆ, ಸದರಿ ಸಿಬ್ಬಂದಿಗಳನ್ನು ವಿಲೀನಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ;

(ಉ) ಹಾಗಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು?

## ಕಾರ್ಮಿಕ ಅಸಂಘಟಿತ ವಲಯ

**ಶ್ರೀ ಬಸವರಾಜ್ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೩೪೨ (೧೨೨೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರ್ಮಿಕ ಇಲಾಖೆಯ ವ್ಯಾಖ್ಯೆಯಲ್ಲಿ ಬರುವ 'ಕಾರ್ಮಿಕ' ಅಂದರೆ ಯಾರು; ಸ್ಪಷ್ಟೀಕರಣದೊಂದಿಗೆ ಮಾಹಿತಿ ಕೊಡುವುದು;

(ಆ) ಅಸಂಘಟಿತ ವಲಯ ಅಂದರೇನು; ಇದರಲ್ಲಿ ಬರುವ ಕಾರ್ಮಿಕ ವರ್ಗ ಯಾವುದು;

(ಇ) ಸದರಿ ವಲಯಕ್ಕೆ ಕಳೆದ ೧೦ ವರ್ಷಗಳಿಂದ ಸೆಸ್ ರೂಪದಲ್ಲಿ ಸಂಗ್ರಹವಾದ ಹಣ ಎಷ್ಟು; ಈ ಹಣವನ್ನು ಸರ್ಕಾರ ಯಾವ ಯೋಜನೆಗಳಿಗೆ ಬಳಸಿಕೊಂಡಿದೆ;

(ಈ) ಅಸಂಘಟಿತ ವಲಯದ ಕಾರ್ಮಿಕರಿಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳಾವುವು; ಈ ಯೋಜನೆಗಳಿಗೆ ಕಳೆದ ೩ ವರ್ಷಗಳಲ್ಲಿ ಒದಗಿಸಿದ ಅನುದಾನವೆಷ್ಟು; ಖರ್ಚು ಮಾಡಿದ ಅನುದಾನವೆಷ್ಟು; ಉಳಿದ ಅನುದಾನವೆಷ್ಟು? (ಯೋಜನೆವಾರು ಮತ್ತು ವರ್ಷವಾರು ವಿವರವಾದ ಮಾಹಿತಿ ನೀಡುವುದು)

## ರಾಯಚೂರು ಜಿಲ್ಲೆಯ ಕಾಲುವೆಗಳ ಸರ್ವೀಸ್ ರಸ್ತೆಗಳು, ಹಾಗೂ ಕೆರೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೪೩ (೧೨೦೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಂಗಾಭದ್ರಾ ಅಚ್ಚುಕಟ್ಟು ಪ್ರದೇಶದಲ್ಲಿ ಬರುವ ಕಾಲುವೆಗಳ ಸರ್ವೀಸ್ ರಸ್ತೆಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) NRBC-( ನಾರಾಯಣಪುರ ಬಲದಂಡೆ ಕಾಲುವೆ)–೯೫ಕಿ.ಮೀ ದಿಂದ ೧೮೬ ಕಿ.ಮೀ ವರೆಗೂ (ಕೊನೆಯ ಭಾಗ) ಕಾಲುವೆ ನಿರ್ಮಾಣಕ್ಕೆ ಆಗಿರುವ ವೆಚ್ಚ ಎಷ್ಟು;

(ಇ) ರಾಯಚೂರು ತಾಲ್ಲೂಕಿನಲ್ಲಿ ಬರುವ ಕೆರೆಗಳನ್ನು ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ (KBSNL) ನಿಂದ ಅಭಿವೃದ್ಧಿ ಮಾಡಿ NRBC ಮುಖಾಂತರ ಕೆರಗಳಿಗೆ ನೀರು ತುಂಬಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ತುಂಗಾಭದ್ರಾ ರಸರ್ವಾಯರ್‌ನಲ್ಲಿ ೩೩ ಟಿಎಂಸಿ ಹೂಳು ತುಂಬಿರುವುದರಿಂದಾಗಿರುವ ನೀರಿನ ಸಾಮರ್ಥ್ಯವನ್ನು ಸರಿಪಡಿಸಲು ನವಳಿ ಗ್ರಾಮದ ಹತ್ತಿರ ಗುರುತಿಸಿರುವ ಸಮತೋಲನ ಜಲಶಕ್ತಿಯ ನಿರ್ಮಾಣದ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಮಾನ್ವಿ ಪಟ್ಟಣದಲ್ಲಿ ಮಿನಿ ವಿಧಾನಸೌಧದ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೪೪ (೧೨೦೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ವಿ ಪಟ್ಟಣದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ಜಿಲ್ಲೆಯಲ್ಲಿ ಅಕ್ರಮ–ಸಕ್ರಮ ವಾಡಲು ಸಾರ್ವಜನಿಕರಿಂದ ಸ್ವೀಕೃತಗೊಂಡಿರುವ ಅರ್ಜಿಗಳ ಸಂಖ್ಯೆ ಎಷ್ಟು; ಮಂಜೂರಾತಿ ನೀಡಿರುವ ಅರ್ಜಿಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ರಾಯಚೂರು ಜಿಲ್ಲೆಯ ಮಾನ್ವಿಯಲ್ಲಿ ನ್ಯಾಯಾಲಯಗಳ ಸಂಕೀರ್ಣ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೪೫ (೧೨೦೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲಾ ನ್ಯಾಯಾಲಯ ಸಂಕೀರ್ಣ ನಿರ್ಮಾಣ ಮಾಡಲು ಸರ್ಕಾರ ತೆಗದುಕೊಂಡ ಕ್ರಮಗಳೇನು;

(ಆ) ಮಾನ್ವಿ ತಾಲ್ಲೂಕು ಮ್ಯಾಜಿಸ್ಟ್ರೇಟ್ ನ್ಯಾಯಾಲಯದ ನೂತನ ಕಟ್ಟದ ನಿರ್ವಾಣ ವಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಮಾನ್ವಿ ತಾಲ್ಲೂಕಿನ ಏತ ನೀರಾವರಿ ಯೋಜನೆಗಳ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೪೬ (೧೨೮೯) ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ವಿ ತಾಲ್ಲೂಕಿನಲ್ಲಿ ಬರುವ ದದ್ದಲಾ ಹಾಗೂ ಮೊದಲಾಪುರ ಏತ ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಸದರಿ ಏತ ನೀರಾವರಿ ಯೋಜನೆಗಳ ಕಾಮಗಾರಿಯು ಬಹಳ ದಿನಗಳಿಂದ ಮಂದಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ತ್ವರಿತಗತಿಯಲ್ಲಿ ಏತ ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯಲ್ಲಿರುವ ಅರಣ್ಯ ಪ್ರದೇಶಗಳ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೪೭ (೧೨೦೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಅರಣ್ಯ ಪ್ರದೇಶವನ್ನು ಅಭಿವೃದ್ಧಿ ಮಾಡಲು ಸರಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ೨೦೧೬–೧೭ನೇ ಸಾಲಿನಲ್ಲಿ ಅರಣ್ಯ ಪ್ರದೇಶವನ್ನು ಅಭಿವೃದ್ಧಿ ಮಾಡಲು ಖರ್ಚು ಮಾಡಿರುವ ವೆಚ್ಚ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಯಚೂರು, ಮಾನ್ವಿ ತಾಲ್ಲೂಕುಗಳಲ್ಲಿ 'Tree park' ನಿರ್ಮಾಣ ಮಾಡಲು ಸರಕಾರ ತೆಗೆದುಕೊಂಡ ಕ್ರಮಗಳೇನು ?

## ಮುಜರಾಯೇತರ ದೇವಸ್ಥಾನಗಳ ಅಭಿವೃದ್ಧಿ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೩೪೮ (೧೨೧೭) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಮುಜರಾಯಿ ಹಾಗೂ ಮುಜರಾಯೇತರ ದೇವಸ್ಥಾನಗಳ ಸಂಖ್ಯೆ ಎಷ್ಟು ; ಇವುಗಳನ್ನು ಯಾವ ರೀತಿ ವಿಂಗಡಿಸಲಾಗಿದೆ ; (ವಿವರವಾದ ಮಾಹಿತಿ ಕೊಡುವುದು)

(ಆ) ೨೦೧೬–೧೭ನೇ ಸಾಲಿನಲ್ಲಿ ಮುಜರಾಯಿ ಹಾಗೂ ಮುಜರಾಯೇತರ ದೇವಸ್ಥಾನಗಳ ಅಭಿವೃದ್ಧಿ ದುರಸ್ಥಿ ಹಾಗೂ ಇತರೆ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾದ ಹಣ ಎಷ್ಟು ;

(ಇ) ಬಿಡುಗಡೆ ಮಾಡಲಾದ ಹಣದಲ್ಲಿ ಹಾಲಿ ಖರ್ಚಾಗಿರುವ ಹಣವೆಷ್ಟು; ಉಳಿದಿರುವ ಹಣವೆಷ್ಟು ; (ಜಿಲ್ಲಾವಾರು ಮಾಹಿತಿ ಕೊಡುವುದು)

(ಈ) ೨೦೧೬–೧೭ನೇ ಸಾಲಿನಲ್ಲಿ ತುಮಕೂರು ಹಾಗೂ ಕೋಲಾರ ಜಿಲ್ಲೆಯ ಮುಜರಾಯೇತರ ದೇವಸ್ಥಾನಗಳಿಗೆ ಬಿಡುಗಡೆ ಮಾಡಲಾದ ಹಣ ಎಷ್ಟು ? (ದೇವಸ್ಥಾನದ ಹೆಸರು ಹಾಗೂ ವಿಳಾಸದೊಂದಿಗೆ ಮಾಹಿತಿ ನೀಡುವುದು)

## ಗ್ರಾಮ ಸಹಾಯಕರ ಮಾಸಿಕ ವೇತನ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೩೪೯ (೧೨೧೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಂದಾಯ ಇಲಾಖೆಯಡಿಯಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮ ಸಹಾಯಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ನೌಕರರಿಗೆ ನೀಡುತ್ತಿರುವ ಮಾಸಿಕ ವೇತನ ಎಷ್ಟು ; ಇವರು ೩೮ ವರ್ಷಗಳಿಂದ ಕಡಿಮೆ ವೇತನಕ್ಕೆ ಕೆಲಸ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದರೆ, ಇವರನ್ನು ಸರ್ಕಾರವು ಗ್ರೂಪ್ ಡಿ ದರ್ಜೆ ನೌಕರರೆಂದು ಪರಿಗಣಿಸುವುದೇ ; ಹಾಗಿದ್ದಲ್ಲಿ, ಆದೇಶ ಹೊರಡಿಸಲಾಗುವುದು ಯಾವಾಗ ;

(ಈ) ಈಗಾಗಲೇ ಲೋಕೋಪಯೋಗಿ, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಇತರೆ ಇಲಾಖೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ದಿನಗೂಲಿ ನೌಕರರನ್ನು ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ನಿಯಮಗಳನ್ನು ರೂಪಿಸಿ ವಿಲೀನಗೊಳಿಸಿದಂತೆ, ಸದರಿ ಸಿಬ್ಬಂದಿಗಳನ್ನು ವಿಲೀನಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಉ) ಹಾಗಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು ?

## ಎತ್ತಿನ ಹೊಳೆ ಯೋಜನೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೩೫೦ (೧೨೧೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬರಪೀಡಿತ ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾವಾಂತರ, ತುಮಕೂರು, ಚಿತ್ರದುರ್ಗ ಜಿಲ್ಲೆಗಳು ಡಾ॥ ನಂಜುಂಡಪ್ಪ ವರದಿಯಂತೆ ಅತಿ ಹಿಂದುಳಿದಿದ್ದು, ಈಗಾಗಲೇ ಅಂತರ್ಜಲ ಅತಿಬಳಕೆ ವಲಯ ಎಂದು ಘೋಷಿಸಲಾಗಿದ್ದು, ಈ ಭಾಗದ ಅಂತರ್ಜಲ ಅಭಿವೃದ್ಧಿ ಹಾಗೂ ಸರ್ವತೋಮುಖ ಅಭಿವೃದ್ಧಿಗೆ ಸರ್ಕಾರವು ಯಾವ ಯಾವ ಯೋಜನೆಗಳನ್ನು ರೂಪಿಸಿದೆ ; (ವಿವರವಾಗಿ ಆ ಯೋಜನೆಗಳ ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಎತ್ತಿನ ಹೊಳೆ ಯೋಜನೆಯಿಂದ ದೊರೆಯಬಹುದಾದ ನೀರನ್ನು ಜನ ಕುಡಿಯುವುದಕ್ಕೆ ಮಾತ್ರ ಉಪಯೋಗಿಸಬೇಕೇ ಅಥವಾ ಕೃಷಿ ನೀರಾವರಿ ಬೇಸಾಯಕ್ಕೆ ಉಪಯೋಗಿಸಬಹುದೇ ; (ಸ್ಪಷ್ಟೀಕರಣದೊಂದಿಗೆ ಮಾಹಿತಿ ಕೊಡುವುದು)

(ಇ) ಎತ್ತಿನ ಹೊಳೆ ಯೋಜನೆಯು ಹಾದು ಹೋಗುವ ಜಿಲ್ಲೆ/ತಾಲ್ಲೂಕು ಪ್ರದೇಶಗಳಿಗೆ ಎಷ್ಟು ಪ್ರಮಾಣದ ನೀರನ್ನು ನಿಗಧಿಪಡಿಸಲಾಗಿದೆ; (ಜಿಲ್ಲಾವಾರು, ತಾಲ್ಲೂಕುವಾರು, ವಿವರವಾದ ಮಾಹಿತಿ ನೀಡುವುದು)

(ಈ) ಎತ್ತಿನ ಹೊಳೆ ಯೋಜನೆಯ ಕಾಮಗಾರಿಗಳು ಯಾವ ಹಂತದಲ್ಲಿವೆ; ಯಾವ ಕಾಲಮಿತಿಯೊಳಗೆ ಈ ಯೋಜನೆಯನ್ನು ಪೂರ್ಣಗೊಳಿಸಲಾಗುವುದು ; ಈ ಯೋಜನೆಗೆ ಖರ್ಚಾಗುವ ಹಣವೆಷ್ಟು?

## ಆನೆ ಕಾರಿಡಾರ್ ವ್ಯಾಪ್ತಿಯ ಗ್ರಾಮಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೩೫೧ (೧೨೧೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಕಲೇಶಪುರ ತಾಲ್ಲೂಕು ಪಶ್ಚಿಮ ಘಟ್ಟದ ಅಂಚಿನಲ್ಲಿರುವ ಬಿಸಲೆ ರಕ್ಷಿತಾರಣ್ಯ ಮತ್ತು ಕಾಗಿನೆರೆ ಅರಣ್ಯ ಪಕ್ಕದ ಆನೆ ಕಾರಿಡಾರ್ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳ ಸಂಖ್ಯೆ ಎಷ್ಟು ; ಯಾವುವು ;

(ಆ) ಸದರಿ ಗ್ರಾಮಗಳ ರೈತರು ಆನೆಗಳ ಹಾವಳಿಯಿಂದ ತೀವ್ರ ತೊಂದರೆಗೊಳಗಾಗಿ ತಮ್ಮ ಬದುಕು ಸಾಧ್ಯವಿಲ್ಲವೆಂದು ಮುಖ್ಯಮಂತ್ರಿಗಳ ಗಮನಕ್ಕೆ ತಂದಿರುವುದು ನಿಜವೇ ;

(ಇ) ಹಾಗಿದ್ದರೆ, ಮಾನ್ಯ ಮುಖ್ಯಮಂತ್ರಿಗಳು ಇದರ ಸಂಬಂಧ ಕೈಗೊಂಡ ಕ್ರಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಈ) ಈ ವಿಷಯಕ್ಕೆ ಸಂಬಂಧಪಟ್ಟಂತೆ ತಾತ್ಕಾಲಿಕ ಪರಿಹಾರ ಅಲ್ಲದೆ, ಶಾಶ್ವತ ಪರಿಹಾರದ ಬಗ್ಗೆ ಸರ್ಕಾರದ ನಿಲುವೇನು ;

(ಉ) ಕಾಡು ಪ್ರಾಣಿಗಳ ಹಾವಳಿಯಿಂದ ತತ್ತರಿಸುವ ರೈತರು ಹೇಗೆ ಜೀವಿಸಬೇಕೆಂದು ಸರ್ಕಾರ ಭಾವಿಸುತ್ತದೆ ;

(ಊ) ರಕ್ಷಿತಾರಣ್ಯಗಳ ಪಕ್ಕದಲ್ಲಿರುವ ರೈತರ ಜಮೀನುಗಳನ್ನು ವಶಪಡಿಸಿಕೊಳ್ಳಲು ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನ ಏನಿದೆ ; ಇದಕ್ಕೆ ಸರ್ಕಾರದ ನಿಲುವೇನು ;

(ಋ) ಇದರ ಸಂಬಂಧ ಸರ್ಕಾರವು ಈ ಸಮಸ್ಯೆಗೆ ಯಾವ ಕಾಲಮಿತಿಯೊಳಗೆ ಪರಿಹಾರ ಮಾಡುವುದು ?

## ಮೀನುಗಾರಿಕಾ ಅಭಿವೃದ್ಧಿ ಯೋಜನೆಗಳು

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೫೨ (೧೧೭೧) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೀನುಗಾರಿಕೆ ಅಭಿವೃದ್ಧಿಗೆ ಸರ್ಕಾರ ಹಾಕಿಕೊಂಡಿರುವ ಯೋಜನೆಗಳಾವುವು ;

(ಆ) ಮೀನುಗಾರಿಕೆ ಉದ್ಯಮದಲ್ಲಿ ತೊಡಗಿರುವ ಕಾರ್ಮಿಕರ ಕಲ್ಯಾಣಕ್ಕೆ ಯಾವ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ ;

(ಇ) ಮೀನುಗಾರರಿಗೆ ವಸತಿ ಸೌಕರ್ಯಗಳನ್ನು ಕಲ್ಪಿಸಲು ರೂಪಿಸಿರುವ ಯೋಜನೆಗಳಾವುವು ?

## ಬಾಲ ಕಾರ್ಮಿಕರ ನೇಮಕಾತಿ ವಿರುದ್ಧ ಕ್ರಮ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೫೩ (೧೧೭೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೋಟೆಲ್‌ಗಳಲ್ಲಿ, ವ್ಯಾಪಾರಿ ಮಳಿಗೆಗಳಲ್ಲಿ ಹಾಗೂ ಗುಡಿ ಕೈಗಾರಿಕೆಗಳಲ್ಲಿ ಬಾಲ ಕಾರ್ಮಿಕರು ಕೆಲಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದು ಕಾನೂನು ಬಾಹಿರ ಅಲ್ಲವೆ ;

(ಆ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ; ಎಷ್ಟು ಜನರ ಮೇಲೆ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಬಾಲ ಕಾರ್ಮಿಕ ಪದ್ಧತಿಯ ನಿರ್ಮೂಲನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಗೊಲ್ಲರ ಹಟ್ಟಿ, ಲಂಬಾಣಿ ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೪ (೧೧೧೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗೊಲ್ಲರ ಹಟ್ಟಿಗಳು ಮತ್ತು ಲಂಬಾಣಿ ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಇದ್ದಲ್ಲಿ, ಪ್ರಕ್ರಿಯೆ ಯಾವ ಹಂತದಲ್ಲಿದೆ ?

## ಭದ್ರಾ ಮೇಲ್ದಂಡೆ ಯೋಜನೆ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೫ (೧೧೧೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭದ್ರಾ ಮೇಲ್ದಂಡೆ ಯೋಜನೆಯಿಂದ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕು, ಮೊಳಕಾಲ್ಮೂರು ತಾಲ್ಲೂಕುಗಳಿಗೆ ನೀರು ಒದಗಿಸುವ ಕಾಲುವೆಗಳ ಕಾಮಗಾರಿ ಆರಂಭಿಸಲಾಗಿದೆಯೇ ;

(ಆ) ಕಾಮಗಾರಿ ಯಾವ ಹಂತದಲ್ಲಿ ಇದೆ ;

(ಇ) ಯಾವ ಯಾವ ಗ್ರಾಮಗಳ ಮುಖಾಂತರ ಸದರಿ ಕಾಮಗಾರಿ ಹಾದು ಹೋಗಲಿದೆ ? (ಗ್ರಾಮಗಳ ವಿವರ ನೀಡುವುದು)

## ಅಂತರ್‌ಜಲ ಕುಸಿದಿರುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೬ (೧೧೧೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಜಿಲ್ಲೆ, ಚಳ್ಳಕೆರೆ ತಾಲ್ಲೂಕಿನ ನಾಯಕನ ಹಟ್ಟಿ ಮತ್ತು ತಳಕು ಹೋಬಳಿಗಳಲ್ಲಿ ತೀವ್ರವಾಗಿ ಅಂತರ್‌ಜಲ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಚೆಕ್‌ಡ್ಯಾಂಗಳನ್ನು ನಿರ್ಮಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) ಇದ್ದಲ್ಲಿ, ೨೦೧೭–೨೦೧೮ನೇ ಸಾಲಿನಲ್ಲಿ ಈ ಭಾಗಕ್ಕೆ ಚೆಕ್‌ಡ್ಯಾಂಗಳ ನಿರ್ಮಾಣಕ್ಕೆ ಅನುದಾನವನ್ನು ಮೀಸಲಿಡಲಾಗುವುದೇ ?

## ಜೋಯಿಡಾ ತಾಲ್ಲೂಕು ಪರಿಸರ ಸೂಕ್ಷ್ಮ ವಲಯವೆಂದು ಘೋಷಣೆ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೫೭ (೧೧೩೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕನ್ನು ಕೇಂದ್ರ ಪರಿಸರ ಮಂತ್ರಾಲಯ ಪರಿಸರ ಸೂಕ್ಷ್ಮ ವಲಯವೆಂದು ಘೋಷಿಸಿರುತ್ತಾರೆಯೇ ; (ವಿವರ ನೀಡುವುದು)

(ಆ) ಸದರಿ ತಾಲ್ಲೂಕು ಪರಿಸರ ಸೂಕ್ಷ್ಮ ವಲಯುವೆಂದು ಘೋಷಣೆಯಾದ್ದಲ್ಲಿ ಈಗಾಗಲೇ ಹುಲಿ ಯೋಜನೆ ಪ್ರಾರಂಭವಾಗಿರವುದರಿಂದ ಅದರ ಸುತ್ತಲು ಪರಿಸರ ಸೂಕ್ಷ್ಮ ವಲಯ ಜಾರಿ ಮಾಡುವ ಮೂಲಕ ತಾಲ್ಲೂಕಿನ ಜನ ಜೀವನಕ್ಕೆ ಮಾರಕವಾಗುತ್ತದೆಂದು ತಿಳಿದು ಜೋಯಿಡಾ ತಾಲ್ಲೂಕಿನ ಜನರು ಬೃಹತ್ ಪ್ರತಿಭಟನೆ ಹಮ್ಮಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ತೀರ್ಮಾನವೇನು?

## ತುಂಗಭದ್ರಾ ಜಲಾಶಯದಿಂದ ಶಾಶ್ವತ ಕುಡಿಯುವ ನೀರಿನ ಯೋಜನೆ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೫೮ (೧೦೫೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಾಂತೀಯ ಕುಡಿಯುವ ನೀರು ಸರಬರಾಜು ಯೋಜನೆಯಡಿ ಪಾವಗಡ ತಾಲ್ಲೂಕಿಗೆ ತುಂಗಭದ್ರಾ ಜಲಾಶಯದಿಂದ ಶಾಶ್ವತ ಕುಡಿಯುವ ನೀರಿನ ಯೋಜನೆಯನ್ನು ಯಾವ ವರ್ಷದಲ್ಲಿ ರೂಪಿಸಲಾಗಿತ್ತು ;

(ಆ) ಸದರಿ ಯೋಜನೆಯನ್ನು ರೂಪಿಸಿದ್ದಲ್ಲಿ ಸರ್ಕಾರ ಈ ಯೋಜನೆಗೆ ಬಿಡುಗಡೆ ಮಾಡಿರುವ ಹಣ ಎಷ್ಟು ;

(ಇ) ಈ ಯೋಜನೆಗೆ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ ಅನುಮೋದನೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ; (ವಿವರ ನೀಡುವುದು)

(ಈ) ೨೦೧೫ರ ರಾಜ್ಯ ಆಯವ್ಯಯದಲ್ಲಿ ಈ ಯೋಜನೆಯನ್ನು ಕೈಗೊಳ್ಳುವುದಾಗಿ ಪ್ರಕಟಿಸಿದ್ದರೂ ಸಹ ಈವರೆಗೆ ಯಾವುದೇ ಕ್ರಮ ತೆಗೆದುಕೊಂಡಿಲ್ಲದಿರುವುದಕ್ಕೆ ಕಾರಣವೇನು ; (ವಿವರ ನೀಡುವುದು)

(ಉ) ಈ ಯೋಜನೆಯ ಬಗ್ಗೆ ಕ್ರಮ ವಹಿಸದಿದ್ದಲ್ಲಿ ಬಿಡುಗಡೆಯಾಗಿರುವ ಈ ಯೋಜನೆಯನ್ನು ಕಾರ್ಯಗತಗೊಳಿಸುವುದು ಯಾವಾಗ? (ವಿವರ ನೀಡುವುದು)

## ರಾಜ್ಯದಲ್ಲಿರುವ ಸರ್ಕಾರಿ ಜಮೀನಿನ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೪೫ (೧೦೫೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಜಮೀನಿನ ವಿಸ್ತೀರ್ಣ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡಿರುವವರ ಸಂಖ್ಯೆ ಎಷ್ಟು ; ಎಷ್ಟು ಎಕರೆ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಳ್ಳಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಸರ್ಕಾರಿ ಜಮೀನನ್ನು ಒತ್ತುವರಿದಾರರಿಂದ ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ತುಮಕೂರು ಜಿಲ್ಲೆಯಲ್ಲಿರುವ ಸರ್ಕಾರಿ ಜಮೀನಿನ ವಿಸ್ತೀರ್ಣವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಉ) ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಸರ್ಕಾರಿ ಜಮೀನಿನ ವಿಸ್ತೀರ್ಣವೆಷ್ಟು ; ಇದರಲ್ಲಿ ಒತ್ತುವರಿಯಾಗಿರುವ ಪ್ರಮಾಣವೆಷ್ಟು;

ಒತ್ತುವರಿಯನ್ನು ತೆರವುಗೊಳಿಸಿ ಸರ್ಕಾರದ ವಶಕ್ಕೆ ಪಡೆಯಲಾಗಿದೆಯೇ ? (ತಾಲ್ಲೂಕುವಾರು ಹೋಬಳಿವಾರು, ಗ್ರಾಮವಾರು ಸರ್ವೆ ನಂಬರ್‌ಗಳ ಸಮೇತ ವಿವರ ನೀಡುವುದು)

(ಊ) ಈ ಜಮೀನನ್ನು ಸರ್ಕಾರ ಯಾವ ಉದ್ದೇಶಕ್ಕೆ ಬಳಸಿಕೊಳ್ಳಲು ತೀರ್ಮಾನಿಸಿದೆ ; (ವಿವರ ನೀಡುವುದು)

(ಋ) ಕಳೆದ ೩ ವರ್ಷಗಳಿಂದ ಇಲ್ಲಿಯತನಕ ಎಷ್ಟು ಎಕರೆ ಜಮೀನನ್ನು ಯಾವ ಯಾವ ಸಂಸ್ಥೆಗಳಿಗೆ ಯಾವ ಯಾವ ಸ್ಥಳದಲ್ಲಿ ಮಂಜೂರು ಮಾಡಿದೆ ; ಇದರಲ್ಲಿ ಗುತ್ತಿಗೆಗೆ ನೀಡಿರುವ ಸಂಸ್ಥೆಗಳಾವುವು ? (ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ತುಮಕೂರು ಜಿಲ್ಲೆಯನ್ನೊಳಗೊಂಡಂತೆ ಪ್ರತ್ಯೇಕ ವಿವರ ನೀಡುವುದು)

## ಭದ್ರಾ ಮೇಲ್ದಂಡೆ ಮತ್ತು ಎತ್ತಿನ ಹೊಳೆ ಯೋಜನೆ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೦ (೧೦೫೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಧ್ಯ ಕರ್ನಾಟಕ, ಭದ್ರಾ ಮೇಲ್ದಂಡೆ ಹಾಗೂ ಎತ್ತಿನಹೊಳೆ ಯೋಜನೆಯ ಅನುಷ್ಠಾನಕ್ಕೆ ವಿಶ್ವೇಶ್ವರಯ್ಯ ಜಲ ನಿಗಮ ಎನ್ನುವ ಪ್ರತ್ಯೇಕ ನೀರಾವರಿ ನಿಗಮವನ್ನು ಸ್ಥಾಪಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಈ ನಿಗಮದ ವ್ಯಾಪ್ತಿಗೆ ಬರುವ ಜಿಲ್ಲೆಗಳು ಯಾವುವು ಹಾಗೂ ಈ ನಿಗಮದ ವ್ಯಾಪ್ತಿಯಲ್ಲಿ ತೆಗೆದುಕೊಳ್ಳಲಾಗುವ ನೀರಾವರಿ ಕಾಮಗಾರಿಗಳಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ೨೦೧೬–೧೭ನೇ ಸಾಲಿನಲ್ಲಿ ಈ ನಿಗಮದ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳಲ್ಲಿ ಕೈಗೊಳ್ಳುವ ಕಾಮಗಾರಿಗಾಗಿ ಬಿಡುಗಡೆ ಮಾಡಿರುವ ಹಣವೆಷ್ಟು ; ಇಲ್ಲಿಯತನಕ ಖರ್ಚು ಮಾಡಿರುವ ಹಣವೆಷ್ಟು ; (ವಿವರ ನೀಡುವುದು)

(ಈ) ಅದೇ ರೀತಿಯಾಗಿ ತುಮಕೂರು ಜಿಲ್ಲೆಯಲ್ಲಿ ಸದರಿ ನಿಗಮದ ವ್ಯಾಪ್ತಿಗೆ ಬರುವ ಯಾವ ಯಾವ ಕಾಮಗಾರಿಗಳನ್ನು ಇಲ್ಲಿಯತನಕ ಕೈಗೊಳ್ಳಲಾಗಿದೆ ಹಾಗೂ ಇದಕ್ಕಾಗಿ ಬಿಡುಗಡೆ ಮಾಡಿ ಖರ್ಚು ಮಾಡಿರುವ ಹಣವೆಷ್ಟು ; (ವಿವರವಾದ ಮಾಹಿತಿಯನ್ನು ನೀಡುವುದು)

(ಉ) ಎತ್ತಿನಹೊಳೆ ಯೋಜನೆಯ ಕಾಮಗಾರಿಗಳನ್ನು ಸದರಿ ನಿಗಮದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆಯೇ ;

(ಊ) ಬಿಡುಗಡೆ ಮಾಡಿದ ಅನುದಾನದಲ್ಲಿ ಇಲ್ಲಿಯವರೆಗೆ ವೆಚ್ಚವಾದ ಹಣದಿಂದ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಗೆ ಬರುವ ಕೆರೆಗಳು

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೧ (೧೦೫೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಗೆ ಬರುವ ಕೆರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲೆ ವ್ಯಾಪ್ತಿಗೆ ಬರುವ ಕೆರೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು ತಾಲ್ಲೂಕಿನಲ್ಲಿ ಬರುವ ಪ್ರತಿಯೊಂದು ಕೆರೆಯ ಹೆಸರು ವಿಳಾಸ ಸೇರಿದಂತೆ)

(ಇ) ಈ ತಾಲ್ಲೂಕಿನಲ್ಲಿ ಬರುವ ಕೆರೆಗಳ ವಿಸ್ತೀರ್ಣವೆಷ್ಟು ; ಒತ್ತುವರಿಯಾಗಿರುವ ಪ್ರದೇಶವೆಷ್ಟು ; (ವಿವರ ನೀಡುವುದು)

(ಈ) ಕೆರೆಯ ಒತ್ತುವರಿಯನ್ನು ತೆರವುಗೊಳಿಸಲು ಇಲ್ಲಿಯವರೆಗೆ ತೆಗೆದು ಕೊಂಡಿರುವ ಕ್ರಮಗಳಾವುವು ಎಷ್ಟು ಎಕರೆ ಪ್ರದೇಶವನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದೆ ; (ತಾಲ್ಲೂಕಿನ ಪ್ರತಿಯೊಂದು ಕೆರೆಗಳ ವಿವರ ನೀಡುವುದು)

(ಉ) ೨೦೧೬–೧೭ನೇ ಸಾಲಿನಲ್ಲಿ ತುಮಕೂರು ಜಿಲ್ಲೆಯಲ್ಲಿ ಬರುವ ಕೆರೆಗಳ ದುರಸ್ಥಿಗಾಗಿ ಕೆರೆಗಳನ್ನು ಅಭಿವೃದ್ಧಿಪಡಿಸುವುದಕ್ಕಾಗಿ ನೀಡಿರುವ ಅನುದಾನ ಎಷ್ಟು ; (ತಾಲ್ಲೂಕುವಾರು ಪ್ರತಿ ಕೆರೆಯ ವಿವರ ನೀಡುವುದು)

(ಊ) ಈ ಅನುದಾನವನ್ನು ಯಾವ ಯಾವ ಕೆರೆಗಳ ಅಭಿವೃದ್ಧಿಗಾಗಿ/ ದುರಸ್ಥಿಗಾಗಿ ಇನ್ನಿತರೆ ಕಾಮಗಾರಿಗಾಗಿ ಉಪಯೋಗಿಸಲಾಗಿದೆ; (ಪ್ರತಿ ಕೆರೆಯ ವಿವರ ನೀಡುವುದು)

(ಋ) ತುಮಕೂರು ಗ್ರಾಮಾಂತರ ಮಲ್ಲಸಂದ್ರ ಗ್ರಾಮಕ್ಕೆ ಸೇರಿದ ಕೆಂಪಯ್ಯಕಟ್ಟೆ ಕೆರೆ ಏರಿ ಮತ್ತು ಕೋಡಿ ಕಳೆದ ೧೦ ವರ್ಷಗಳಿಂದ ಅವ್ಯವಸ್ಥೆಯಿಂದ ಕೂಡಿದ್ದು, ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಎ) ಲಕ್ಷಾಂತರ ಎಕರೆಗೆ ನೀರು ಒದಗಿಸುವ ಈ ಕೆರೆ ತೂಬನ್ನು ದುರಸ್ಥಿ ಪಡಿಸಲು ಸರ್ಕಾರ ಕ್ರಮ ವಹಿಸುವುದೇ ?

## ಬೆಳಗಾವಿ ಜಿಲ್ಲೆಯ ಮಂಗೋತ್ರಿ ತೊರೆಯ ಕಿಣಯೆ ಡ್ಯಾಂ ನ ಕಾಮಗಾರಿ ಕುಂಟುತ್ತಾ ಸಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೬೨ (೧೧೮೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಮಂಗೋತ್ರಿ ತೋರೆಗೆ ನಿರ್ಮಿಸುತ್ತಿರುವ ಕಿಣಯೆ ಡ್ಯಾಂ ಮಂಜೂರಾತಿ ದೊರೆತು ಹತ್ತು ವರ್ಷಗಳೇ ಕಳೆದರೂ ಅನುದಾನದ ಕೊರತೆಯಿಂದ ಇನ್ನೂ ಪೂರ್ಣಗೊಳ್ಳದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ ನಿಗಧಿತ ಸಮಯದಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರವು ಏನು ಕ್ರಮ ಕೈಗೊಳ್ಳುವುದು ;

(ಇ) ಸದರಿ ಕಿಣಯೆ ಡ್ಯಾಂ ನಿರ್ಮಾಣದ ಒಟ್ಟು ಅಂದಾಜು ಮೊತ್ತವೆಷ್ಟು; ಈಗಾಗಲೇ ಸರ್ಕಾರವು ಬಿಡುಗಡೆಗೊಳಿಸಿರುವ ಅನುದಾನವೆಷ್ಟು ; ಬಾಕಿ ಇರುವ ಅನುದಾನವೆಷ್ಟು ;

(ಈ) ಯಾವ ಕಾಲಮಿತಿಯೊಳಗೆ ಸದರಿ ಡ್ಯಾಂ ಕಾಮಗಾರಿ ಪೂರ್ಣ ಗೊಂಡು ರೈತರ ಜಮೀನುಗಳಿಗೆ ನೀರೊದಗಿಸಲಾಗುವುದು ?

## ಬೆಳಗಾವಿ ಜಿಲ್ಲೆಯ ಭೀಮಗಡ ಅಭಯಾರಣ್ಯದ ಬಳಿ ಅಕ್ರಮ ರೆಸಾರ್ಟ್ ಹೋಟೆಲ್ ತಲೆ ಎತ್ತಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೬೩ (೧೧೫೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಭೀಮಗಡ ಅಭಯಾರಣ್ಯದ ಬಳಿ ಅಕ್ರಮ ರೆಸಾರ್ಟ್ ತಲೆ ಎತ್ತಿರುವುದು, ಜಿಲ್ಲಾಡಳಿತ ಕಂಡರೂ ಕಾಣದಂತೆ ಜಾಣಕುರುಡು ಪ್ರದರ್ಶಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಾನೂನು ಬಾಹಿರವಾಗಿ ನಿರ್ಮಿಸಿರುವ ವಾಣಿಜ್ಯ ರೆಸಾರ್ಟ್ ಹೋಟೆಲ್ ತೆರವಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ರಾಜ್ಯದ ಇತರೆ ಅಭಯಾರಣ್ಯಗಳಲ್ಲಿ, ಅರಣ್ಯ ಪ್ರದೇಶಗಳಲ್ಲಿ ಇದೇ ರೀತಿ ಹಲವು ಕಡೆ ಅಕ್ರಮವಾಗಿ ವಾಣಿಜ್ಯ ರೆಸಾರ್ಟ್ ಹೋಟೆಲ್‌ಗಳು ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅವು ಯಾವುವು ; ಎಲ್ಲೆಲ್ಲಿ ನಿರ್ಮಿಸಲಾಗಿದೆ ; (ವಿವರ ನೀಡುವುದು)

(ಈ) ಅರಣ್ಯ ಪ್ರದೇಶಗಳ ಅಂಚಿನಲ್ಲಿ, ರಕ್ಷಿತಾರಣ್ಯ ಪ್ರದೇಶಗಳಲ್ಲಿ, ಅರಣ್ಯದೊಳಗೆ ಹಾದು ಹೋಗುವ ಮುಖ್ಯ ರಸ್ತೆಗಳ ಬದಿಯಲ್ಲಿ ವಾಣಿಜ್ಯ ರೆಸಾರ್ಟ್ ಹೋಟೆಲ್‌ಗಳನ್ನು ತೆರೆಯಲು ಇರುವ ಮಾನದಂಡಗಳೇನು ; ಅನುಸರಿಸಬೇಕಾದ ಸರ್ಕಾರದ ನಿಯಮಾವಳಿಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿ ನಿಷೇಧಿತ ಅಕೇಷಿಯಾ ಹಾಗೂ ನೀಲಗಿರಿಯನ್ನು ಬೆಳೆಸಲು ಅರಣ್ಯ ಅಭಿವೃದ್ಧಿ ನಿಗಮವು ಆದೇಶಿಸಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೬೪ (೧೧೫೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಕೇಷಿಯಾ ಮತ್ತು ನೀಲಗಿರಿಯನ್ನು ನಿಷೇಧಿಸಿದ್ದರೂ, ಸರ್ಕಾರಿ ಹಾಗೂ ಟಿಂಬರ್ ಲಾಬಿಗೆ ಮಣಿದ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮವು ಇವುಗಳ ನರ್ಸರಿ ಬೆಳೆಸಲು ಆದೇಶ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಅಕೇಷಿಯಾ ಮತ್ತು ನೀಲಗಿರಿಯನ್ನು ನಿಷೇಧಿಸಲು ಇರುವ ವೈಜ್ಞಾನಿಕ ಕಾರಣಗಳೇನು ; ರಾಜ್ಯದ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಅಕೇಷಿಯಾ ಮತ್ತು ನೀಲಗಿರಿಯನ್ನು ಬೆಳೆಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಅಂತರ್ಜಲವನ್ನು ಬರಿದು ಮಾಡಿ, ಅರಣ್ಯ ಆರೋಗ್ಯಕ್ಕೆ ಮಾರಕವಾದ ಅಕೇಷಿಯಾ ಮತ್ತು ನೀಲಗಿರಿ ನೆಡುತೋಪುಗಳ ಹಿಂದೆ ಟಿಂಬರ್ ದಂಧೆಯು ಕೆಲಸ ಮಾಡುತ್ತಿರುವುದು ನಿಜವೇ; ಇದರ ಹಿಂದೆ ಕೆಲವು ಸರ್ಕಾರಿ ಅಧಿಕಾರಿಗಳು ಕದ್ದು ಮುಚ್ಚಿ ಸಹಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಮಲೆನಾಡಿನ ಈ ಅರಣ್ಯರೋಧನ ತಪ್ಪಿಸಲು ಸರ್ಕಾರ ಏನು ಕ್ರಮಗಳನ್ನು ತೆಗೆದುಕೊಂಡಿದೆ ; ಅಕೇಷಿಯಾ ಮತ್ತು ನೀಲಗಿರಿ ಬದಲಾಗಿ ನೈಸರ್ಗಿಕ ಅರಣ್ಯ ಪೂರಕ ಸಸ್ಯ ಸಂಕುಲ ಬೆಳೆಸಲು ಸರ್ಕಾರ ತೆಗೆದುಕೊಂಡ ಪರ್ಯಾಯ ಯೋಜನೆಗಳೇನು? (ವಿವರ ನೀಡುವುದು)

## ಗ್ರಾಮ ಪಂಚಾಯತ್‌ಗಳಿಗೆ ನಿವೇಶನ ಹಸ್ತಾಂತರದಲ್ಲಿ ವಿಳಂಬವಾಗುತ್ತಿರುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೫ (೧೦೭೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಯಾವ ಯಾವ ಗ್ರಾಮ ಪಂಚಾಯತ್‌ಗಳಿಂದ ಘನ ತ್ಯಾಜ್ಯ ವಿಲೇವಾರಿ ಘಟಕ/ ಸ್ಮಶಾನ ಮತ್ತು ವಸತಿ ನಿವೇಶನ, ಕಛೇರಿ ಕಟ್ಟಡದಂತಹ ಸಾರ್ವಜನಿಕ ಉದ್ದೇಶಗಳಿಗೆ ನಿವೇಶನ–ಭೂಮಿಗಾಗಿ ಪ್ರಸ್ತಾವನೆ ಸ್ವೀಕರಿಸಲಾಗಿದೆ ; (ಕಳೆದ ೫ ವರ್ಷದ ಮಾಹಿತಿ ಜಿಲ್ಲಾವಾರು–ತಾಲ್ಲೂಕುವಾರು–ಗ್ರಾಮ ಪಂಚಾಯತ್‌ವಾರು ವಿವರ ಒದಗಿಸುವುದು)

(ಆ) ಯಾವ ಯಾವ ಗ್ರಾಮ ಪಂಚಾಯತ್‌ಗಳಿಗೆ ಒಟ್ಟು ಎಷ್ಟು ಭೂಮಿಯನ್ನು ಮೇಲಿನ ಉದ್ದೇಶಕ್ಕಾಗಿ ಹಸ್ತಾಂತರಿಸಲಾಗಿದೆ ; (ಕಳೆದ ೫ ವರ್ಷದ ವಿವರ ಒದಗಿಸುವುದು)

(ಇ) ಗ್ರಾಮದ ಗೋಮಾಳ ವಿರಹಿತಪಡಿಸಿ ನಿವೇಶನ ಮಂಜೂರು ಮಾಡಲು ಅವಕಾಶವಿದೆಯೇ ; ಈ ಕುರಿತು ಯಾವ ರೀತಿಯ ಕ್ರಮ ಕೈಗೊಳ್ಳಲಾಗುತ್ತಿದೆ ;

(ಈ) ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಸರ್ಕಾರಿ ಭೂಮಿ ಲಭ್ಯವಿದ್ದಾಗಿಯೂ ಗ್ರಾಮ ಪಂಚಾಯತ್‌ಗಳು ಸಾರ್ವಜನಿಕ ಉದ್ದೇಶಗಳಿಗೆ ನಿವೇಶನ ಕೋರಿ ಬೇಡಿಕೆ ಸಲ್ಲಿಸಿದಾಗ, ತ್ವರಿತ ಹಸ್ತಾಂತರಕ್ಕೆ ಇರುವ ತೊಡಕುಗಳೇನು ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ವಿವರ ಒದಗಿಸುವುದು)

## ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಡೀಮ್ಡ್ ಫಾರೆಸ್ಟ್ ವಿರಹಿತಪಡಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೬ (೧೦೭೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಎಕರೆ ಡೀಮ್ಡ್ ಫಾರೆಸ್ಟ್, ರಕ್ಷಿತಾರಣ್ಯ, ಅಭಯಾರಣ್ಯ ಮತ್ತು ವನ್ಯಜೀವಿ ಅರಣ್ಯ ಪ್ರದೇಶವಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಡೀಮ್ಡ್ ಫಾರೆಸ್ಟ್ ವಿರಹಿತಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಇ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಡೀಮ್ಡ್ ಫಾರೆಸ್ಟ್ ವಿರಹಿತಪಡಿಸುವ ಕುರಿತು ಒಟ್ಟು ಎಷ್ಟು ಎಕರೆ ಜಂಟಿ ಸಮೀಕ್ಷೆ ಮಾಡಲಾಗಿದೆ ; ಸಮೀಕ್ಷೆಗೆ ಬಾಕಿಯಿರುವ ಪ್ರದೇಶವೆಷ್ಟು ;

(ಈ) ಡೀಮ್ಡ್ ಫಾರೆಸ್ಟ್ ವಿರಹಿತಪಡಿಸಿ, ಭೂ ರಹಿತರಿಗೆ ನೀಡುವ ಕುರಿತು, ಸಚಿವ ಸಂಪುಟದ ಅನುಮೋದನೆ ಪಡೆದು, ಮಾನ್ಯ ಸುಪ್ರಿಂಕೋರ್ಟ್‌ನಲ್ಲಿ ಅಫಿಡವಿಟ್ ಸಲ್ಲಿಸಲಾಗಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಉ) ಶೀಘ್ರವಾಗಿ ಡೀಮ್ಡ್ ಫಾರೆಸ್ಟ್ ವಿರಹಿತಪಡಿಸುವ ಕುರಿತು ಸರ್ಕಾರದ ನಿಲುವೇನು ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ೯೪(ಸಿ), ೯೪(ಸಿಸಿ) ಯೋಜನೆಯಲ್ಲಿನ ವಿಳಂಬದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೭ (೧೦೭೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೯೪(ಸಿ), ೯೪(ಸಿಸಿ) ಯೋಜನೆಯಂತೆ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು–ತಾಲ್ಲೂಕುವಾರು ವಿವರ ನೀಡುವುದು)

(ಆ) ೯೪(ಸಿ), ೯೪(ಸಿಸಿ) ಯೋಜನೆಯಡಿ ವಿಲೇವಾರಿಗೆ ಬಾಕಿ ಇರುವ ಮತ್ತು ತಿರಸ್ಕೃರಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು ; ವಿತರಿಸಲಾದ ಹಕ್ಕು ಪತ್ರಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಸರ್ಕಾರದ ಪರಿಷ್ಕೃತ ಆದೇಶದಂತೆ, ೯೪-ಸಿ, ೯೪-ಸಿಸಿ ಯೋಜನೆಯಡಿ ನಿವೇಶನ ಹಕ್ಕು ಪತ್ರ ನೀಡಲು ನಿಗಧಿಪಡಿಸಿದ ಶುಲ್ಕ ಎಷ್ಟು ; (ಆದೇಶ ಪ್ರತಿ ಒದಗಿಸುವುದು) ಈಗಾಗಲೇ ಹೆಚ್ಚುವರಿ ಮೊತ್ತ ಪಾವತಿಸಿಕೊಂಡಿರುವ ಪ್ರಕರಣಗಳಲ್ಲಿ ಶುಲ್ಕದ ಹೆಚ್ಚವರಿ ಬಾಬ್ತು ಫಲಾನುಭವಿಗಳಿಗೆ ಹಿಂದಿರುಗಿಸಲಾಗುವುದೇ; ಈ ಕುರಿತು ಸ್ಪಷ್ಟ ನಿರ್ದೇಶನ ಹೊರಡಿಸಲಾಗಿದೆಯೇ ;

(ಈ) ಯೋಜನೆ ಅನುಷ್ಠಾನದಲ್ಲಿ ಅನಗತ್ಯ ವಿಳಂಬ ಮಾಡುವ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ೯೪-ಸಿ, ೯೪-ಸಿಸಿ ಯೋಜನೆಯಡಿ ಅರ್ಜಿ ವಿಲೇವಾರಿ ವಿಳಂಬವಾಗುತ್ತಿದ್ದು ; ಸಕಾರಣವಿಲ್ಲದೆ ಸಾವಿರಾರು ಅರ್ಜಿಗಳನ್ನು ತಿರಸ್ಕರಿಸಿರುವುದು ಯೋಜನೆ ಆಶಯಕ್ಕೆ ಧಕ್ಕೆಯಾಗಿರುವುದರ ಕುರಿತು ಮತ್ತು ಬಡ ನಿವೇಶನ ರಹಿತರಿಗೆ ಶೀಘ್ರವಾಗಿ ಹಕ್ಕುಪತ್ರ ನೀಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ಸಂಪೂರ್ಣ ವಿವರ ನೀಡುವುದು)

## ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕುಮ್ಕಿ ಭೂಮಿಯನ್ನು ರೈತರಿಗೆ ನೀಡುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೬೮ (೧೦೮೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರೈತರು ಕೃಷಿಗಾಗಿ ಪೂರಕವಾಗಿ ಬಳಸಿಕೊಂಡಿರುವ ಕುಮ್ಕಿ ಜಮೀನಿನ ಒಟ್ಟು ವಿಸ್ತೀರ್ಣವೆಷ್ಟು ;

(ಆ) ಈ ಹಿಂದಿನ ಸರ್ಕಾರದ ಸಚಿವ ಸಂಪುಟದ ನಿರ್ಣಯದಂತೆ, ಕುಮ್ಕಿ ಜಮೀನನ್ನು ರೈತರಿಗೆ ನೀಡುವ ಕುರಿತು ಸರ್ಕಾರದ ನಿಲುವೇನು; ಸಚಿವ ಸಂಪುಟ ನಿರ್ಣಯದ ಅಂಶಗಳೇನು ;

(ಇ) ಕುಮ್ಕಿ ಜಮೀನನ್ನು ರೈತರಿಗೆ ನೀಡುವ ಯೋಜನೆ ಅನುಷ್ಠಾನ ಮಾಡಲು ಸರ್ಕಾರಕ್ಕಿರುವ ತೊಡಕುಗಳೇನು ;

(ಈ) ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ನಿಯಮಾವಳಿಗಳನ್ನು ಯಾವಾಗ ರೂಪಿಸಲಾಗುವುದು ; ಅನುಷ್ಠಾನಗೊಳಿಸಲಾಗುವುದು ಯಾವಾಗ ? (ಸಂಪೂರ್ಣ ವಿವರ ನೀಡುವುದು)

## ಕಂದಾಯ ಇಲಾಖೆಯಲ್ಲಿನ ಖಾಲಿ ಹುದ್ದೆ ಮತ್ತು ಹುದ್ದೆಗಳ ಭರ್ತಿಯ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೯ (೧೦೭೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಇಲಾಖೆಯಲ್ಲಿ ಮಂಜೂರಾಗಿರುವ ಖಾಲಿ ಇರುವ ಗ್ರಾಮ ಲೆಕ್ಕಿಗರ, ಕಂದಾಯ ನಿರೀಕ್ಷಕರು, ಪ್ರಥಮ ದರ್ಜೆ ಮತ್ತು ದ್ವಿತೀಯ ದರ್ಜೆಯ ಸಹಾಯಕರು, ಉಪ ತಹಶೀಲ್ದಾರರ ಹುದ್ದೆಗಳು ಎಷ್ಟು ; (ತಾಲ್ಲೂಕು, ಜಿಲ್ಲಾವಾರು ವಿವರ ಒದಗಿಸುವುದು)

(ಆ) ತಹಶೀಲ್ದಾರರ ಹುದ್ದೆಗಳು ನೇರ ನೇಮಕಾತಿಯಲ್ಲಿ ಭರ್ತಿ ಮಾಡದೆ, ಇತರೆ ಅಧಿಕಾರಿಗಳನ್ನು ಪ್ರಭಾರದಲ್ಲಿಟ್ಟಿರುವುದು ನಿಜವೆ ; ಎಷ್ಟು ತಾಲ್ಲೂಕಿನಲ್ಲಿ ನೇರ ನೇಮಕಾತಿಯಿಂದ ಆಯ್ಕೆಯಾದ ತಹಶೀಲ್ದಾರರು ಕಾರ್ಯನಿರ್ವಹಿಸುತ್ತಿದ್ದಾರೆ ; ಪ್ರಭಾರದಲ್ಲಿರುವವರ ಸಂಖ್ಯೆಯೆಷ್ಟು ;

(ಇ) ಗ್ರಾಮ ಲೆಕ್ಕಿಗರನ್ನು ತಾಲ್ಲೂಕು ಕಛೇರಿಗಳಲ್ಲಿ ನಿಯೋಜನೆ ಮಾಡುವುದು ಮತ್ತು ಮೂರು-ನಾಲ್ಕು ಗ್ರಾಮಗಳಿಗೆ ನಿಯೋಜನೆ ಮಾಡುತ್ತಿರುವುದರಿಂದ, ಗ್ರಾಮದ ಕಛೇರಿಯಲ್ಲಿ ಸಾರ್ವಜನಿಕರ ಕೆಲಸಕ್ಕೆ ಲಭ್ಯರಿಲ್ಲದಿರುವುದರಿಂದ ಸಾರ್ವಜನಿಕರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕಿದೆಯೇ ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಈ) ಖಾಲಿ ಹುದ್ದೆ ಮತ್ತು ನಿಯೋಜನೆಯಿಂದಾಗಿ ಸರ್ಕಾರದ ಯೋಜನೆಗಳು ಜನರನ್ನು ತಲುಪುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಖಾಲಿ ಹುದ್ದೆಯ ಭರ್ತಿಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ; ಕಂದಾಯ ಇಲಾಖೆಯಲ್ಲಿ ತಹಶೀಲ್ದಾರರು ಸೇರಿದಂತೆ, ವಿವಿಧ ಸ್ತರಗಳ ಹುದ್ದೆಗಳನ್ನು ನೇರ ನೇಮಕಾತಿ ಮಾಡುವ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ; ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಿದೆ ?

## ಅರಣ್ಯ ಪ್ರದೇಶದಲ್ಲಿ ಕಾಡ್ಗಿಚ್ಚಿನಿಂದಾಗುವ ಹಾನಿಯನ್ನು ತಡೆಗಟ್ಟಲು ತೆಗೆದುಕೊಂಡ ಕ್ರಮದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೩೭೦ (೧೧೮೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರತಿ ವರ್ಷ ಬೇಸಿಕೆ ಕಾಲದಲ್ಲಿ ಅರಣ್ಯ ಪ್ರದೇಶದಲ್ಲಿ ಬೆಂಕಿ ಹತ್ತಿಕೊಳ್ಳುತ್ತಿರುವುದಕ್ಕೆ ಕಾರಣಗಳೇನು ;

(ಆ) ಅಸ್ವಾಭಾವಿಕ ಕಾರಣಗಳಿಂದ ಹುಟ್ಟಿಕೊಳ್ಳುವ ಬೆಂಕಿಗೆ ಕಾರಣರಾಗಿರುವವರ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಂಡಿದೆ;

(ಇ) ರಾಜ್ಯದಲ್ಲಿ ಕಳೆದ ೩ ವರ್ಷಗಳ ಅವಧಿಗಳಲ್ಲಿ ಇಂತಹ ಎಷ್ಟು ಪ್ರಕರಣಗಳು ನಡೆದಿವೆ ಹಾಗೂ ಈ ಪ್ರಕರಣಗಳಿಗೆ ಸಂಬಂಧಪಟ್ಟಂತೆ ಎಷ್ಟು ಜನರನ್ನು ಬಂಧಿಸಲಾಗಿದೆ ;

(ಈ) ಈ ಸ್ವಾಭಾವಿಕ ಮತ್ತು ಅಸ್ವಾಭಾವಿಕ ಕಾಡ್ಗಿಚ್ಚಿನಿಂದಾಗುವ ಹಾನಿಯನ್ನು ತಡೆಗಟ್ಟಲು ಸರ್ಕಾರ ಯಾವ ತರಹದ ಯೋಜನೆಯನ್ನು ಹಾಕಿಕೊಂಡಿದೆ ?

## ಗದಗ ಜಿಲ್ಲೆಯ ಕಪ್ಪತಗುಡ್ಡ ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಗಣಿಗಾರಿಕೆ ನಡೆಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೩೭೧ (೧೧೬೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗದಗ ಜಿಲ್ಲೆಯ ಕಪ್ಪತಗುಡ್ಡ ಅರಣ್ಯ ಪ್ರದೇಶವು ಔಷಧಿ ಸಸಿಗಳು, ಅರಣ್ಯ ಸಂಪತ್ತು, ವನ್ಯಜೀವಿ ಹಾಗೂ ಖನಿಜ ಸಂಪತ್ತಿಗೆ ಹೆಸರುವಾಸಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಅರಣ್ಯ ಪ್ರದೇಶವನ್ನು ಸಂರಕ್ಷಿತ ಅರಣ್ಯ ಪ್ರದೇಶವೆಂದು ಸರ್ಕಾರ ಘೋಷಿಸಿರುವುದು ನಿಜವೇ ; ಹಾಗಿದ್ದಲ್ಲಿ, ಯಾವಾಗ ಘೋಷಿಸಲಾಯಿತು ;

(ಇ) ಈ ಸಂರಕ್ಷಿತ ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಗಣಿಗಾರಿಕೆಯನ್ನು ನಡೆಸಲು ಅವಕಾಶ ಕೊಡುವ ಪ್ರಕ್ರಿಯೆ ನಡೆದಿದೆಯೇ ;

(ಈ) ಒಂದು ಸ್ಥಳ ಸುರಕ್ಷಿತ ಅರಣ್ಯವೆಂದು ಘೋಷಿಸಿದ ನಂತರ, ಆ ಆದೇಶವನ್ನು ಹಿಂಪಡೆಯಲು ಇರುವ ಮಾನದಂಡಗಳೇನು ; ಇದನ್ನು ಸರ್ಕಾರ ಸಂಪೂರ್ಣವಾಗಿ ಪಾಲಿಸಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿ ಮೇಕೆದಾಟು ಯೋಜನೆಯ ಅನುಷ್ಠಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೩೭೨ (೧೧೬೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಮೇಕೆದಾಟು ಯೋಜನೆಯನ್ನು ಅನುಷ್ಠಾನಗೊಳಿಸಲು ನಿರ್ಧರಿಸಿದೆಯೇ;

(ಆ) ಈ ಯೋಜನೆಯಿಂದ ರಾಜ್ಯದ ಜನತೆಗೆ ಯಾವ ರೀತಿಯಿಂದ ಅನುಕೂಲತೆ ಆಗಲಿದೆ ; (ವಿವರ ನೀಡುವುದು)

(ಇ) ಈ ಯೋಜನೆಗೆ ತಗಲುವ ಒಟ್ಟು ವೆಚ್ಚವೆಷ್ಟು ; ಇದರ ರೂಪುರೇಷೆಗಳೇನು ; (ವಿವರ ನೀಡುವುದು)

(ಈ) ಈ ಯೋಜನೆಯನ್ನು ಪ್ರಾರಂಭ ಮಾಡಲಾಗುವುದು ಯಾವಾಗ; ಯಾವ ಕಾಲಾವಧಿಯೊಳಗೆ ಮುಕ್ತಾಯಗೊಳಿಸಲಾಗುವುದು?

## ಕೆರೆಗಳ ಹೂಳೆತ್ತುವ ಯೋಜನೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೩೭೩ (೧೧೬೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೪ ವರ್ಷಗಳ ಅವಧಿಯಲ್ಲಿ ಕೆರೆಗಳ ಹೂಳೆತ್ತುವ ಯೋಜನೆಗೆ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ; (ವಿವರ ನೀಡುವುದು)

(ಆ) ವೆಚ್ಚ ಮಾಡಿದ ಹಣದಲ್ಲಿ ಅನುಷ್ಠಾನಗೊಳಿಸಲಾದ ಕಾಮಗಾರಿಗಳಿಂದ ದೊರೆತಂತಹ ಫಲಿತಾಂಶವೇನು ; (ವಿವರವನ್ನು ನೀಡುವುದು)

(ಇ) ಈ ಯೋಜನೆಗೆ ಸಾವಿರಾರು ಕೋಟಿ ವೆಚ್ಚ ಮಾಡಿದರೂ, ಏನು ಪ್ರಯೋಜನವಾಗದ ಹಿನ್ನೆಲೆಯಲ್ಲಿ ಗ್ರಾಮಕ್ಕೊಂದು ಕೆರೆ ನಿರ್ಮಿಸುವ ಕಾರ್ಯಕ್ರಮ ಜಾರಿಗೊಳಿಸಲು ಸರ್ಕಾರ ಯೋಚಿಸಿದೆಯೇ; ಹಾಗಿದ್ದಲ್ಲಿ, ಈ ಯೋಜನೆಯ ರೂಪುರೇಷೆಗಳ ಬಗ್ಗೆ ವಿವರ ನೀಡುವುದು ;

(ಈ) ಊರಿಗೊಂದು ಕೆರೆ ನಿರ್ಮಾಣ ಮಾಡುವುದಾದರೆ ಕಾಡಂಚಿನಲ್ಲಿ ಇವುಗಳನ್ನು ನಿರ್ಮಾಣ ಮಾಡಿದರೆ ವನ್ಯಜೀವಿಗಳಿಗೆ ಆಗುವ ಅನುಕೂಲ ಹಾಗೂ ಪ್ರಾಣಿಗಳೊಂದಿಗೆ ನಡೆಯುವ ಮಾನವ ಸಂಘರ್ಷಕ್ಕೆ ಕಡಿವಾಣ ಹಾಕುವುದರ ಬಗ್ಗೆ ಸರ್ಕಾರ ಯೋಚಿಸಿದೆಯೇ?

## ದನಕರುಗಳಿಗೆ ನೀರು ಹಾಗೂ ಮೇವು ಸಿಗದೆ ಇರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೩೭೪ (೧೧೬೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿಪರೀತ ಬರ ಪರಿಸ್ಥಿತಿ ಇದ್ದು, ದನಕರುಗಳಿಗೆ ನೀರು ಹಾಗೂ ಮೇವು ಸಿಗದೆ ಇರುವುದರಿಂದ, ದನಕರುಗಳ ರಕ್ಷಣೆಗಾಗಿ ಜನರು ವಲಸೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಎಷ್ಟು ಜನರು ದನಕರುಗಳ ರಕ್ಷಣೆಗಾಗಿ ವಲಸೆ ಹೋಗಿರುತ್ತಾರೆ; ಈ ಪರಿಸ್ಥಿತಿಯನ್ನು ತಪ್ಪಿಸಲು ರಾಜ್ಯದಲ್ಲಿ ಎಷ್ಟು ಗೋಶಾಲೆ ಹಾಗೂ ಮೇವು ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ;

(ಇ) ಇವುಗಳಲ್ಲಿ ಎಷ್ಟು ಸುವ್ಯವಸ್ಥಿತವಾಗಿರುತ್ತವೆ; ಹಾಗೂ ಎಷ್ಟು ದನಕರುಗಳಿಗೆ ಸ್ಥಳಾವಕಾಶ ಕಲ್ಪಿಸಲಾಗಿದೆ; ಮತ್ತು ಇಲಾಖಾ ವತಿಯಿಂದ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಮೇವನ್ನು ಬೆಳೆಯಲಾಗುತ್ತಿದೆ;

(ಈ) ಈ ಯೋಜನೆಗೆ ಇದುವರೆವಿಗೂ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಹಾಗೂ ಮಾಡಲಾದ ವೆಚ್ಚವೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಬೆಂಗಳೂರಿನ ವಿಬ್‌ಗಯಾರ್ ಶಾಲೆಗೆ ಚಿರತೆ ದಾಳಿ ಮಾಡಿದ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೭೫ (೧೧೫೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ವೈಟ್‌ಫೀಲ್ಡ್‌ನಲ್ಲಿ ಇರುವ ವಿಬ್‌ಗಯಾರ್ ಶಾಲೆಯಲ್ಲಿ ಕಳೆದ ಫೆಬ್ರವರಿಯಲ್ಲಿ ನಡೆದ ಚಿರತೆ ದಾಳಿಯಿಂದಾಗಿ ಉಂಟಾದ ನಷ್ಟವೆಷ್ಟು ;

(ಆ) ಸದರಿ ಶಾಲೆಗೆ ನುಗ್ಗಿದ ಚಿರತೆ ಹಿಡಿಯಲು ಅರಣ್ಯ ಇಲಾಖೆಯು ಯಾವ ಯಾವ ವನ್ಯಜೀವಿ ಮತ್ತು ಪಶುವೈದ್ಯ ತಜ್ಞರ ಸಹಕಾರ ಕೋರಲಾಗಿತ್ತು ; (ಸಂಪೂರ್ಣ ವಿವರ ನೀಡುವುದು)

(ಇ) ಗಾಬರಿಗೊಂಡಿದ್ದ ಚಿರತೆಯನ್ನು ಹಿಡಿಯಲು ಅರಣ್ಯ ಇಲಾಖೆ ಮಾಡಿದ ಖರ್ಚು ಎಷ್ಟು ; (ವಿವರ ನೀಡುವುದು)

(ಈ) ಚಿರತೆ ಹಿಡಿಯುವ ಪ್ರಯತ್ನದಲ್ಲಿ ವನ್ಯಜೀವಿ ತಜ್ಞರು (ಸಂಜಯ್ ಗುಬ್ಬಿ) ತೀವ್ರವಾಗಿ ಗಾಯಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಉ) ಗಾಯಾಳುವಿನ ಚಿಕಿತ್ಸಾ ವೆಚ್ಚವನ್ನು ಸರ್ಕಾರ ಭರಿಸದಿರಲು ಕಾರಣವೇನು;

(ಊ) ವನ್ಯಜೀವಿ ದಾಳಿಗೊಳಗಾಗಿ ಇತರೆ ಸಾಮಾನ್ಯ ಗಾಯಾಳುಗಳಂತೆ ಸರ್ಕಾರಕ್ಕೆ ಪರಿಹಾರಕ್ಕಾಗಿ ಅರ್ಜಿ ಸಲ್ಲಿಸಿದ್ದರೂ, ಇದುವರೆವಿಗೂ ಪರಿಹಾರ ನೀಡದಿರಲು ಕಾರಣವೇನು ?

## ಅರಣ್ಯ ಇಲಾಖೆಯಲ್ಲಿ ವನ್ಯಜೀವಿ ಪರಿಪಾಲಕರನ್ನು ನೇಮಿಸುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೭೬ (೧೧೫೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರತಿ ಜಿಲ್ಲೆಗಳಲ್ಲಿ ಗೌರವ ವನ್ಯಜೀವಿ ಪರಿಪಾಲಕರನ್ನು ನೇಮಿಸುವ ಪರಿಪಾಠವಿದೆಯೇ; (ವಿವರ ನೀಡುವುದು)

(ಆ) ಗೌರವ ವನ್ಯಜೀವಿ ಪರಿಪಾಲಕರ ನೇಮಕಕ್ಕೆ ಇರುವ ಅರ್ಹತೆ, ಮಾನದಂಡಗಳೇನು ; ಇವರುಗಳ ಕಾರ್ಯಾವಧಿ ಎಷ್ಟು ;

(ಇ) ಕಳೆದ ಐದು ವರ್ಷಗಳಲ್ಲಿ ಗೌರವ ವನ್ಯಜೀವಿ ಪರಿಪಾಲಕರು ಮಾಡಿರುವ ಸಾಧನೆಯೇನು ; (ಜಿಲ್ಲಾವಾರು ವಿವರ ನೀಡುವುದು)

(ಈ) ಕಳೆದ ಐದು ವರ್ಷಗಳಲ್ಲಿ ಗೌರವ ವನ್ಯಜೀವಿ ಪರಿಪಾಲಕರ ವಿರುದ್ಧ ದಾಖಲಾದ ಪ್ರಕರಣಗಳೆಷ್ಟು ? (ಜಿಲ್ಲಾವಾರು, ಪ್ರಕರಣವಾರು ವಿವರ ನೀಡುವುದು)

## ರಾಜ್ಯದಲ್ಲಿರುವ ಅಣೆಕಟ್ಟುಗಳ ಮಾಹಿತಿ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೭೭ (೧೧೫೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅಣೆಕಟ್ಟುಗಳ ಸಂಖ್ಯೆ ಎಷ್ಟು ; ಹಾಗೂ ಅವುಗಳ ಅಚ್ಚುಕಟ್ಟು ಪ್ರದೇಶ ವಿಸ್ತೀರ್ಣವೆಷ್ಟು ; (ಅಣೆಕಟ್ಟುವಾರು ವಿವರ ನೀಡುವುದು)

(ಆ) ರಾಜ್ಯದ ಎಷ್ಟು ಹೆಕ್ಟೇರ್ ಅಚ್ಚುಕಟ್ಟು ಪ್ರದೇಶದಲ್ಲಿ ರೈತರಿಗೆ ಕಬ್ಬು ಮತ್ತು ಭತ್ತ ಬೆಳೆಯಲು ಅನುಮತಿ ನೀಡಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಅನುಮತಿ ನೀಡಿದಕ್ಕಿಂತ ಹೆಚ್ಚು ಪ್ರದೇಶದಲ್ಲಿ ಕಬ್ಬು ಮತ್ತು ಭತ್ತ ಬೆಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಹೆಚ್ಚು ಪ್ರದೇಶದಲ್ಲಿ ಕಬ್ಬು ಮತ್ತು ಭತ್ತ ಬೆಳೆಯುತ್ತಿರುವ ಪ್ರದೇಶದ ವಿಸ್ತೀರ್ಣವೆಷ್ಟು ; (ವಿವರ ನೀಡುವುದು)

(ಈ) ಈ ರೀತಿ ಅನುಮತಿ ನೀಡಿದ್ದಕ್ಕಿಂತ ಹೆಚ್ಚು ಪ್ರದೇಶದಲ್ಲಿ ಕಬ್ಬು ಮತ್ತು ಭತ್ತ ಬೆಳೆಯುತ್ತಿರುವುದರಿಂದ, ಅಣೆಕಟ್ಟುಗಳಲ್ಲಿ ಪೋಲಾಗುತ್ತಿರುವ ನೀರಿನ ಪ್ರಮಾಣವೆಷ್ಟು ; (ಅಣೆಕಟ್ಟುವಾರು/ ಅಚ್ಚುಕಟ್ಟುವಾರು ವಿವರ ನೀಡುವುದು)

(ಉ) ಈ ರೀತಿ ನೀರು ಪೋಲಾಗುವುದನ್ನು ತಡೆಯಲು ಮತ್ತು ರೈತರು ಅತಿ ಹೆಚ್ಚು ಪ್ರದೇಶಗಳಲ್ಲಿ ನೀರು ಅಧಿಕವಾಗಿ ಬೇಡುವ ಬೆಳೆಗಳನ್ನು ಬೆಳೆಯುವುದನ್ನು ತಡೆಯಲು ಯಾವ ರೀತಿಯ ಪ್ರಯತ್ನಗಳನ್ನು ಕೈಗೊಳ್ಳಲಾಗಿದೆ ?

## ರಾಜ್ಯದಲ್ಲಿರುವ ಜಲಾಶಯಗಳ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೭೮ (೧೧೫೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಜಲಾಶಯಗಳ ಸಂಖ್ಯೆ ಎಷ್ಟು ; ಇವುಗಳನ್ನು ಯಾವಾಗ ಕಟ್ಟಲಾಯಿತು; (ವಿವರ ನೀಡುವುದು)

(ಆ) ರಾಜ್ಯದ ಜಲಾಶಯಗಳಲ್ಲಿ ಶೇಖರಿಸಬಹುದಾದ ನೀರಿನ ಪ್ರಮಾಣವೆಷ್ಟು ; (ಜಲಾಶಯವಾರು ವಿವರ ನೀಡುವುದು)

(ಇ) ಬಹುತೇಕ ಜಲಾಶಯಗಳಲ್ಲಿ ಹೂಳು ತುಂಬಿ ಶೇಖರಣೆಗೆ ಅಡಚಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಜಲಾಶಯವಾರು ತುಂಬಿರುವ ಹೂಳಿನ ಪ್ರಮಾಣ ಎಷ್ಟು ; (ವಿವರ ನೀಡುವುದು)

(ಈ) ರಾಜ್ಯದ ಜಲಾಶಯಗಳ ಜಲಾನಯನ ಪ್ರದೇಶದಲ್ಲಿ ಯಾವ ಯಾವ ಬೆಳೆಗಳನ್ನು ಬೆಳೆಯಲು ಅನುಮತಿ ನೀಡಲಾಗಿದೆ; ಜಲಾನಯನವಾರು ಬೆಳೆ ವಿಸ್ತೀರ್ಣದ ಬಗೆಗಿನ ಸರ್ಕಾರದ ಆದೇಶದ ಪ್ರತಿ ನೀಡುವುದು?

## ನೇಕಾರರಿಗೆ ಚೈನಾ ದೇಶದಲ್ಲಿ ತರಬೇತಿ ಕೊಡಿಸುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೩೭೯ (೧೧೬೫) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನುರಿತ ನೇಕಾರರಿಗೆ ಆಧುನಿಕ ನೇಕಾರಿಕೆ ತರಬೇತಿ ಪಡೆಯಲು ಚೈನಾ ದೇಶಕ್ಕೆ ಕಳುಹಿಸಲು ನೇಕಾರ ಸಂಘಟನೆಗಳಿಂದ ಬೇಡಿಕೆ ಬಂದಿದೆಯೇ;

(ಆ) ಇತ್ತೀಚಿನ ದಿನಗಳಲ್ಲಿ ಹಳೆ ಪದ್ಧತಿಯಲ್ಲಿ ನೇಕಾರಿಕೆ ಉದ್ಯಮ ಕುಸಿದಿರುವ ಕಾರಣ ಹೊರ ರಾಷ್ಟ್ರದ ನೂತನ ಆಧುನಿಕ ಪದ್ಧತಿ ತಿಳಿಯಲು ಕನಿಷ್ಠ ಜಿಲ್ಲೆಗೆ ಇಬ್ಬರಂತೆ ಕಳುಹಿಸಿ ಕೊಡಲಾಗುವುದೆ;

(ಇ) ಹೊರ ದೇಶಕ್ಕೆ ಕಳುಹಿಸಲು ಇರುವ ಮಾನದಂಡಗಳೇನು; ಹಾಗಿದ್ದಲ್ಲಿ, ಈಗಾಗಲೇ ನುರಿತ ನೇಕಾರರನ್ನು ಗುರುತಿಸಲಾಗಿದೆಯೇ; ಯಾವ್ಯಾವ ತಾಲ್ಲೂಕುಗಳಿಂದ ಗುರುತಿಸಲಾಗಿದೆ? (ವಿವರ ನೀಡುವುದು)

## ಯಾದಗಿರಿಯಲ್ಲಿ ಹೈಟೆಕ್ ಟೆಕ್ಸ್‌ಟೈಲ್ ಟ್ರೈನಿಂಗ್ ಸೆಂಟರ್ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೩೮೦ (೧೧೬೭) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿ ಜಿಲ್ಲೆಯಲ್ಲಿ ಹೈಟೆಕ್ ಟೆಕ್ಸ್‌ಟೈಲ್ ಸೆಂಟರ್ ಸ್ಥಾಪನೆ ಮಾಡುವುದಾಗಿ ಆಯವ್ಯಯದಲ್ಲಿ ಘೋಷಿಸಲಾಗಿತ್ತೇ; ಘೋಷಿಸಿದಲ್ಲಿ, ಜಮೀನನ್ನು ಎಲ್ಲಿ ಗುರುತಿಸಲಾಗಿದೆ; ಜಮೀನನ್ನು ಇಲಾಖೆ ವಶಕ್ಕೆ ತೆಗೆದುಕೊಳ್ಳಲಾಗಿದೆಯೇ;

(ಆ) ಈ ಹೈಟೆಕ್ ಟೆಕ್ಸ್‌ಟೈಲ್ ಸೆಂಟರ್ ಸ್ಥಾಪನೆಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ;

(ಇ) ಇದುವರೆಗೆ ಪ್ರಾರಂಭ ಮಾಡದಿರಲು ಕಾರಣವೇನು ?

## ಮೀನುಗಾರರ ಅಭಿವೃದ್ಧಿ ಯೋಜನೆಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೩೮೧ (೧೧೬೬) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆಯಲ್ಲಿ ಮೀನುಗಾರರ ಅಭಿವೃದ್ಧಿಗೆ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಮೀನುಗಾರರಿಗೆ ವಸತಿ ಸೌಕರ್ಯ ಕಲ್ಪಿಸಲು ರೂಪಸಿರುವ ಯೋಜನೆಗಳಾವುವು ; (ಮಾಹಿತಿ ನೀಡುವುದು)

(ಇ) ಈ ಜಿಲ್ಲೆಯಲ್ಲಿ ಎಷ್ಟು ಮೀನುಗಾರರಿಗೆ ವಸತಿ ಸೌಕರ್ಯಗಳನ್ನು ಕಲ್ಪಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಎಷ್ಟು ಮೀನು ಮಾರಾಟ ಕೇಂದ್ರಗಳನ್ನು ತೆರೆಯಲಾಗಿದೆ; ಹಾಗೂ ಜಿಲ್ಲೆಯಲ್ಲಿ ಯಾವ ಯಾವ ಸ್ಥಳದಲ್ಲಿ ಮೀನು ಸಾಕಾಣಿಕೆ ಮಾಡಲಾಗುತ್ತಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಎಸ್.ಸಿ.ಪಿ. ಯೋಜನೆ ಅಡಿಯಲ್ಲಿ ಪರಿಶಿಷ್ಠ ಜಾತಿ/ಪರಿಶಿಷ್ಠ ವರ್ಗದವರಿಗೆ ಸೌಲಭ್ಯದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೩೮೨ (೧೧೬೮) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜವಳಿ ಇಲಾಖಾ ವತಿಯಿಂದ ಎಸ್.ಸಿ.ಪಿ. ಯೋಜನೆ ಅಡಿಯಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ವರ್ಗದವರಿಗೆ ಯಾವ ಯಾವ ಕಾರ್ಯಕ್ರಮಗಳು ಜಾರಿಯಲ್ಲಿವೆ ;

(ಆ) ಈ ವರ್ಗದವರಿಗೆ (ಎಸ್.ಸಿ.ಪಿ.) ಯೋಜನೆ ಅಡಿಯಲ್ಲಿ ಕಳೆದ ೩ ವರ್ಷಗಳಲ್ಲಿ ಮೀಸಲಿಟ್ಟ ಹಣ ಎಷ್ಟು ; ಖರ್ಚಾಗಿರುವ ಹಣ ಎಷ್ಟು ; ಪ್ರಸಕ್ತ ಸಾಲಿನ ಅಂತ್ಯದವರೆಗೆ ಖರ್ಚಾಗದೆ ಉಳಿದಿರುವ ಹಣ ಎಷ್ಟು ;

(ಇ) ಖರ್ಚಾಗದೆ ಉಳಿದಿರುವ ಹಣವನ್ನು ಮುಂದಿನ ವರ್ಷಕ್ಕೆ ಬಳಸಿಕೊಳ್ಳಲಾಗುವುದೆ?

## ಸಣ್ಣ ನೀರಾವರಿ ಇಲಾಖೆಯಿಂದ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೮೩ (೧೧೪೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ವಿವಿಧ ಲೆಕ್ಕ ಶೀರ್ಷಿಕೆಗಳ ಅಡಿಯಲ್ಲಿ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು; (ವರ್ಷಾವಾರು, ಲೆಕ್ಕ ಶೀರ್ಷಿಕೆಗಳವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಕೈಗೊಳ್ಳಲಾದ ಕಾಮಗಾರಿಗಳಾವುವು; ಸದರಿ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ ; (ವರ್ಷಾವಾರು, ಯೋಜನೆಗಳಾವಾರು, ಕಾಮಗಾರಿವಾರು ಪ್ರಗತಿ ಹಂತದ ವಿವರ ನೀಡುವುದು)

(ಇ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಅಂತರ್ಜಲ ವೃದ್ಧಿಗಾಗಿ ಚೆಕ್ ಡ್ಯಾಂಗಳ ನಿರ್ಮಾಣವನ್ನು ಕೈಗೊಳ್ಳಲಾಗಿದೆಯೇ;

(ಈ) ಹಾಗಿದ್ದಲ್ಲಿ, ಚೆಕ್ ಡ್ಯಾಂಗಳ ನಿರ್ಮಾಣಕ್ಕಾಗಿ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು; ಅವುಗಳ ಪ್ರಗತಿಯ ಸಂಪೂರ್ಣ ವಿವರ ನೀಡುವುದು?

## ಬರ ನಿರ್ವಹಣೆಗೆ ತಾಲ್ಲೂಕುಗಳ ಆಯ್ಕೆ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೮೪ (೧೧೪೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಬರ ಪಟ್ಟಿಯಲ್ಲಿ ಎಷ್ಟು ತಾಲ್ಲೂಕುಗಳು ಇವೆ;

(ಆ) ಈ ಎಲ್ಲಾ ತಾಲ್ಲೂಕುಗಳಲ್ಲಿ ಬರ ನಿರ್ವಹಣೆಗೆ ಸರ್ಕಾರ ಇದುವರೆವಿಗೂ ಬಿಡುಗಡೆ ಮಾಡಿದ ಅನುದಾನವೆಷ್ಟು ; ಖರ್ಚು ಮಾಡಲಾದ ಹಣವೆಷ್ಟು; ಕೈಗೊಳ್ಳಲಾಗಿರುವ ಪರಿಹಾರ ಕಾಮಗಾರಿಗಳು ಯಾವುವು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಕುಡಿಯುವ ನೀರಿನ ತೀವ್ರ ತೊಂದರೆಯಿಂದ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆಯೇ? (ವಿವರ ನೀಡುವುದು)

## ಕೆರೆಗಳ ಅಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೮೫ (೧೧೪೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಸಣ್ಣ ನೀರಾವರಿ ಇಲಾಖೆಗೆ ಸೇರಿದ ಕೆರೆಗಳ ಅಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನವೆಷ್ಟು ; (ವರ್ಷಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಸರ್ಕಾರ ಬಿಡುಗಡೆ ಮಾಡಿದ ಅನುದಾನದಲ್ಲಿ ಇದುವರೆವಿಗೂ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ; (ಕಾಮಗಾರಿಗಳವಾರು, ತಾಲ್ಲೂಕುವಾರು ವಿವರ ಒದಗಿಸುವುದು)

(ಈ) ಈ ಯೋಜನೆಯ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ?

## ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೮೬ (೧೧೫೦) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಅನುದಾನವನ್ನು ಯಾವ ಯಾವ ಕ್ರೀಡಾ ಚಟುವಟಿಕೆಗಳಿಗೆ ಬಳಸಲಾಗಿದೆ; (ವಿವರಗಳನ್ನು ನೀಡುವುದು)

(ಇ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಗ್ರಾಮೀಣ ಪ್ರದೇಶದ ಯುವ ಕ್ರೀಡಾಪಟುಗಳನ್ನು ಕ್ರೀಡೆಗೆ ಉತ್ತೇಜಿಸಲು ಕೈಗೊಂಡಿರುವ ಕ್ರಮಗಳೇನು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಯಲ್ಲಿ ಮೀನುಗಾರರ ಅಭಿವೃದ್ಧಿಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೮೭ (೧೯೯೬) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಮೀನುಗಾರರ ಅಭಿವೃದ್ಧಿಗೆ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಮೀನುಗಾರರ ವಸತಿ ಸೌಕರ್ಯ ಕಲ್ಪಿಸಲು ರೂಪಿಸಿರುವ ಯೋಜನೆಗಳಾವುವು ; (ಮಾಹಿತಿ ಒದಗಿಸುವುದು)

(ಇ) ಈ ಜಿಲ್ಲೆಯಲ್ಲಿ ಎಷ್ಟು ಮೀನುಗಾರರಿಗೆ ವಸತಿ ಸೌಕರ್ಯಗಳನ್ನು ಕಲ್ಪಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಎಷ್ಟು ಮೀನು ಮಾರಾಟ ಕೇಂದ್ರಗಳನ್ನು ತೆರೆಯಲಾಗಿದೆ ಹಾಗೂ ಜಿಲ್ಲೆಯಲ್ಲಿ ಯಾವ ಯಾವ ಸ್ಥಳದಲ್ಲಿ ಮೀನು ಸಾಕಾಣಿಕೆ ಮಾಡಲಾಗುತ್ತಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೮೮ (೧೯೯೭) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖಾ ವ್ಯಾಪ್ತಿಯಲ್ಲಿ ಹಮ್ಮಿಕೊಂಡಿರುವ ನೂತನ ಯೋಜನೆಗಳಾವುವು ; (ಯೋಜನಾವಾರು, ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಜಿಲ್ಲೆಯ ಪಾರಂಪರಿಕ ಕ್ರೀಡೆಗಳನ್ನು ಮುಂದುವರೆಸಲು ಮತ್ತು ಹಿಂದಿನಿಂದಲೂ ಇದ್ದ ಕ್ರೀಡಾ ಮೈದಾನಗಳನ್ನು ಉಳಿಸಿ ಅಭಿವೃದ್ಧಿಪಡಿಸಲು ಇಲಾಖೆಯ ವಿವಿಧ ಕಾರ್ಯಕ್ರಮಗಳೇನು;

(ಇ) ಜಿಲ್ಲೆಯ ವಿವಿಧ ಕ್ರೀಡಾ ಕ್ಷೇತ್ರಗಳನ್ನು ಗ್ರಾಮೀಣ ಪ್ರತಿಭೆಗಳನ್ನು ಗುರುತಿಸಲಾಗಿದೆಯೇ;

(ಈ) ಹಾಗಿದ್ದಲ್ಲಿ, ಚಿಕ್ಕಮಗಳೂರು ಜಿಲ್ಲೆಯಲ್ಲಿ ತರಬೇತಿ ಮತ್ತಿತರೆ ಪ್ರೋತ್ಸಾಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆಯೇ? (ಸಂಪೂರ್ಣ ವಿವರ ನೀಡುವುದು)

## ಮುಜರಾಯಿ ದೇವಾಲಯಗಳ ಮೂಲಭೂತ ಸೌಕರ್ಯ ಕುರಿತು

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೪೯ (೧೧೮೦) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಒಳಪಟ್ಟ ದೇವಾಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ದೇವಾಲಯಗಳಲ್ಲಿ ಎಷ್ಟು ದೇವಾಲಯಗಳಿಗೆ ಮೂಲಭೂತ ಸೌಕರ್ಯಗಳಿವೆ; (ಕುಡಿಯುವ ನೀರು, ವಿದ್ಯುತ್, ಶೌಚಾಲಯ ವ್ಯವಸ್ಥೆ ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ೨೦೧೨–೧೩ ರಿಂದ ಇಲ್ಲಿಯವರೆಗೆ ಎಷ್ಟು ದೇವಾಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ ; (ಕುಡಿಯುವ ನೀರು, ವಿದ್ಯುತ್, ಶೌಚಾಲಯ ವ್ಯವಸ್ಥೆ ಪ್ರತ್ಯೇಕವಾಗಿ ವಿವರ ನೀಡುವುದು)

(ಈ) ಉಳಿದ ದೇವಾಲಯಗಳಿಗೆ ಯಾವ ಕಾಲ ಮಿತಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುವುದು ?

## ಮುಜರಾಯಿ ಇಲಾಖೆಯ ಆದಾಯ ಮತ್ತು ವೆಚ್ಚದ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೫೦ (೧೧೮೧) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೨–೧೩ ರಿಂದ ಇಲ್ಲಿಯವರೆಗೆ ರಾಜ್ಯದ ಮುಜರಾಯಿ ದೇವಾಲಯಗಳಿಂದ ಬಂದ ಆದಾಯವೆಷ್ಟು ; (ವಿವರ ನೀಡುವುದು)

(ಆ) ಸದರಿ ಆದಾಯವನ್ನು ಯಾವ ಉದ್ದೇಶಗಳಿಗಾಗಿ ವೆಚ್ಚ ಮಾಡಲಾಗಿದೆ; (ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಇ) ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಒಳಪಟ್ಟ ದೇವಾಲಯಗಳಲ್ಲಿ ಎಷ್ಟು ದೇವಾಲಯಗಳು ಶಿಥಿಲಾವಸ್ಥೆಯಲ್ಲಿವೆ ;

(ಈ) ೨೦೧೨–೧೩ ರಿಂದ ಇಲ್ಲಿಯವರೆಗೆ ಎಷ್ಟು ದೇವಾಲಯಗಳ ಜೀರ್ಣೋದ್ಧಾರ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಉ) ಉಳಿದ ದೇವಾಲಯಗಳನ್ನು ಯಾವ ಕಾಲಮಿತಿಯಲ್ಲಿ ಜೀರ್ಣೋದ್ಧಾರ ಮಾಡಲಾಗುವುದು ?

## ಒಳಾಂಗಣ ಕ್ರೀಡಾಂಗಣಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೭೧ (೧೨೩೧) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿರುವ ಒಳಾಂಗಣ ಕ್ರೀಡಾಂಗಣಗಳ ಪರಿಸ್ಥಿತಿ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಒಳಾಂಗಣ ಕ್ರೀಡಾಂಗಣಗಳ ವಾಣಿಜ್ಯ ಚಟುವಟಿಕೆಗಳಿಗೆ ಬಾಡಿಗೆಗೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇದರಿಂದ ಬರುವ ಆದಾಯವನ್ನು ಕ್ರೀಡಾಂಗಣಗಳ ಅಭಿವೃದ್ಧಿಗೆ ಉಪಯೋಗಿಸಲಾಗುತ್ತಿದೆಯೇ ?

## ಗಾರ್ಮೆಂಟ್ಸ್ ಕಾರ್ಖಾನೆಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೭೨ (೧೨೩೨) ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿರುವ ಗಾರ್ಮೆಂಟ್ಸ್ ಕಾರ್ಖಾನೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಕಾರ್ಖಾನೆಗಳಲ್ಲಿ ಮಹಿಳೆಯರೇ ಹೆಚ್ಚಿನ ಸಂಖ್ಯೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಹೆಚ್ಚುವರಿ ಅವಧಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳೆಯರ ಆರೋಗ್ಯದ ಬಗ್ಗೆ ಸರ್ಕಾರದ ಮಟ್ಟದಲ್ಲಿ ಪರಿಶೀಲನೆ ಮಾಡಲಾಗಿದೆಯೇ?

## ಬಗರ್ ಹುಕುಂ ಸಾಗುವಳಿಯ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೭೩ (೧೨೨೮) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರ ಬಗರ್ ಹುಕುಂ ಸಾಗುವಳಿಯಂತೆ ಫಾರಂ ೫೦ ರಲ್ಲಿ ಅರ್ಜಿ ಸಲ್ಲಿಸಿದ್ದವರಿಗೆ ಮಂಜೂರಾಗಿರುವ ಜಮೀನುಗಳ ಖಾತೆ ಮತ್ತು ಪೋಡಿ ಮಾಡದಿರಲು ಕಾರಣವೇನು;

(ಆ) ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಡಿಯಲ್ಲಿ ಭೂ ಪರಿವರ್ತನೆ ನಿಯಮಗಳ ಪ್ರಕಾರ ಸಾರ್ವಜನಿಕ ಹಿತದೃಷ್ಟಿಯಿಂದ ಸರಳಿಕರಣ ಮಾಡುವ ಬಗ್ಗೆ ಸರ್ಕಾರವು ಕೈಗೊಂಡಿರುವ ಕಾರ್ಯಕ್ರಮಗಳಾವುವು?

## ತಿರುಪತಿ ದೇವಸ್ಥಾನದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೪ (೧೨೩೦) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಿರುಪತಿ ತಿರುಮಲದಲ್ಲಿರುವ ಕರ್ನಾಟಕ ರಾಜ್ಯದ ಜಾಗ ಎಷ್ಟು;

(ಆ) ಅಲ್ಲಿ ಕಟ್ಟಡ ನಿರ್ಮಿಸಲು ಇರುವ ತೊಂದರೆ ಏನು;

(ಇ) ನ್ಯಾಯಾಲಯದಲ್ಲಿ ತಡೆಯಾಜ್ಞೆ ಇದ್ದರೆ ಅದನ್ನು ತೆರವುಗೊಳಿಸಲಾಗುವುದು ಯಾವಾಗ ? (ಪ್ರಗತಿಯ ವಿವರ ನೀಡುವುದು)

## ಕೃಷ್ಣ ಮೇಲ್ದಂಡೆ ಯೋಜನೆ ವಸತಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯದ ಬಗ್ಗೆ

**ಶ್ರೀ ಹಣಮಂತ ಆರ್. ನಿರಾಣಿ (ಪದವೀಧರರ ಕ್ಷೇತ್ರ):–**

೧೯೫ (೧೧೭೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷ್ಣ ಮೇಲ್ದಂಡೆ ಯೋಜನೆಯ ಪುನರ್ ವಸತಿ ಕೇಂದ್ರಗಳನ್ನು ಗ್ರಾಮ ಪಂಚಾಯತಿಗಳಿಗೆ ಹಸ್ತಾಂತರಿಸಿದ ಮೇಲೆ ಪುನರ್ ವಸತಿ ಕೇಂದ್ರಗಳ ಅಧಿಕಾರಿಗಳು ಸಂಬಂಧಿಸಿದ ಗ್ರಾಮಗಳ ಬಗ್ಗೆ ಯಾವುದೇ ಸಹಕಾರವನ್ನು ತೋರಿಸದೆ ಗ್ರಾಮ ಪಂಚಾಯಿತಿಗಳ ಮೇಲೆ ಎಲ್ಲಾ ಜವಾಬ್ದಾರಿಗಳನ್ನು ಹಾಕಿ ಕುಳಿತುಕೊಂಡಿರುವುದು ಸರಿಯೇ;

(ಆ) ಪುನರ್ ವಸತಿ ಕೇಂದ್ರಗಳು ಎಲ್ಲಾ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿರುವ ಸಂದರ್ಭದಲ್ಲಿ ಗ್ರಾಮ ಪಂಚಾಯತಿಗೆ ವರ್ಗಾವಣೆ ಮಾಡಿರುವ ವಿಷಯದಲ್ಲಿ ಸಂತ್ರಸ್ಥರಿಗೆ ಸಾಕಷ್ಟು

ಅಡಚಣೆ ಆಗುತ್ತಿದ್ದು, ಇದನ್ನು ಸರಿಪಡಿಸಲು ಗ್ರಾಮ ಪಂಚಾಯತಿ ಮತ್ತು ಪುನರ್ ವಸತಿ ಅಧಿಕಾರಿಗಳಲ್ಲಿ ಸಾಮ್ಯತೆ ಹೊಂದಾಣಿಕೆ ಇಲ್ಲದೆ ಸಂತ್ರಸ್ಥರು ಪರದಾಡುವ ಸ್ಥಿತಿ ಬಂದಿರುವ ಬಗ್ಗೆ ಸರ್ಕಾರ ತೆಗೆದುಕೊಂಡ ಸೂಕ್ತ ಕ್ರಮಗಳೇನು ?

## ಕೃಷ್ಣ ಮೇಲ್ದಂಡೆ ಯೋಜನೆಯ ಸಮಿತಿ ರಚಿಸುವ ಬಗ್ಗೆ

**ಶ್ರೀ ಹಣಮಂತ ಆರ್. ನಿರಾಣಿ (ಪದವೀಧರರ ಕ್ಷೇತ್ರ):–**

೧೩೯೬ (೧೧೭೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷ್ಣ ಮೇಲ್ದಂಡೆ ಯೋಜನೆಯಡಿಯಲ್ಲಿ ೫೨೪ ಮೀ. ಎತ್ತರಕ್ಕೆ ಹೆಚ್ಚಿಸುವುದರಿಂದ ಭೂ ಸ್ವಾಧೀನಗೊಂಡ ಜಮೀನುಗಳಿಗೆ ಬೆಲೆ ನಿಗದಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಸಮಿತಿ ರಚಿಸುವುದಾಗಿ ಬೆಳಗಾವಿ ಅಧಿವೇಶನದಲ್ಲಿ ಸರ್ಕಾರ ಭರವಸೆ ನೀಡಿದ್ದರೂ ಇದುವರೆಗೆ ಸಮಿತಿ ರಚನೆ ಆಗದೇ ಇರಲು ಕಾರಣಗಳೇನು ?

## ಜಮೀನುಗಳಿಗೆ ಏಕರೂಪದ ಬೆಲೆ ನಿರ್ಧರಿಸುವ ಬಗ್ಗೆ

**ಶ್ರೀ ಹಣಮಂತ ಆರ್. ನಿರಾಣಿ (ಪದವೀಧರರ ಕ್ಷೇತ್ರ):–**

೧೩೯೭ (೧೧೭೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷ್ಣ ಮೇಲ್ದಂಡೆ ಯೋಜನೆಯಡಿಯಲ್ಲಿ ಭೂ ಸ್ವಾಧೀನಗೊಂಡ ಜಮೀನುಗಳಿಗೆ ಏಕರೂಪದ (ಕಾಂಕ್ರೀಟ್) ಬೆಲೆ ನಿರ್ಧಾರ ಮಾಡಲು ಸರ್ಕಾರ ಉದ್ದೇಶಿಸಿದೆಯೇ: ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಭಾರತ ದೇಶದಲ್ಲಿ ಅತಿ ಹೆಚ್ಚಿನ ಭೂ ಸ್ವಾಧೀನವಾಗುವ ಕ್ಷೇತ್ರ ಕೃಷ್ಣ ಮೇಲ್ದಂಡೆ ಯೋಜನೆಯಡಿಯಲ್ಲಿ ಇರುವುದರಿಂದ ಇಲ್ಲಿ ಮನೆ, ಮಠ ಆಸ್ತಿ ಕಳೆದುಕೊಂಡ ಸಂತ್ರಸ್ಥರಿಗೆ ಏಕರೂಪದ ಬೆಲೆಯನ್ನು ಆದಷ್ಟು ಬೇಗನೆ ವಿತರಿಸಲು ಸರ್ಕಾರಕ್ಕೆ ಇರುವ ಅಡಚಣೆಗಳೇನು ;

(ಇ) ಭೂ ಸ್ವಾಧೀನವಾದ ಸಾಕಷ್ಟು ಜಮೀನುಗಳಿಗೆ ಈಗಾಗಲೇ ಕಲಂ ೧೧(೧) ಮತ್ತು ೧೯(೨)ರ ಅಡಿಯಲ್ಲಿ ಇಲಾಖೆಯಿಂದ ನೋಟಿಸ್ ಜಾರಿಯಾಗಿ ಇನ್ನು ಐತೀರ್ಪು (ಅವಾರ್ಡ್) ಆಗದೆ ೧೯(೨) ನೋಟಿಸ್ ಜಾರಿಯಾದ ೨ ವರ್ಷಗಳಲ್ಲಿ ಕಲಂ ೩೭(೨)ರ ಪ್ರಕಾರ ಐತೀರ್ಪು ಆಗಬೇಕು ಅನ್ನುವ ಕಾನೂನು ಇದ್ದರೂ ಇದುವರೆಗೆ ಆಗದೇ ಇರುವುದು ಸಂತ್ರಸ್ಥರಲ್ಲಿ ಗೊಂದಲ ಸೃಷ್ಟಿಯಾಗಿದ್ದು, ಅಂತಹ ಜಮೀನುಗಳನ್ನು ನೋಟಿಫಿಕೇಷನ್ ರದ್ದು ಮಾಡಿ ಮರು ನೋಟಿಫಿಕೇಷನ್ ಕಲಂ ೧೧(ಸಿ) ರಡಿಯಲ್ಲಿ ಮತ್ತೆ ಅರ್ಜಿ ಸಲ್ಲಿಸುವ ಕುರಿತು ಸರ್ಕಾರದ ಮಟ್ಟದಲ್ಲಿ ಇದೆಯೇ?

## ಅರಣ್ಯ ಇಲಾಖೆಯ ಪ್ರಕೃತಿ ವನಗಳ ಬಗ್ಗೆ

**ಶ್ರೀ ರಿಜ್ವಾನ್ ಹರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೮೮ (೧೨೨೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಜಿಲ್ಲೆಗೆ ಸಂಬಂಧಿಸಿದಂತೆ ಅರಣ್ಯ ಇಲಾಖಾ ವ್ಯಾಪ್ತಿಯ ಪ್ರಕೃತಿ ವನಗಳೆಷ್ಟು ;

(ಆ) ಕಳೆದ ೩ ವರ್ಷಗಳಲ್ಲಿ ಈ ವನಗಳ ಅಭಿವೃದ್ಧಿಗೆ ಸರ್ಕಾರವು ರೂಪಿಸಿರುವ ಹೊಸ ಯೋಜನೆಗಳಾವುವು ; ಈ ಯೋಜನೆಗಳಿಗೆ ಕಳೆದ ೩ ವರ್ಷಗಳಲ್ಲಿ ನಿಗಧಿಪಡಿಸಿದ ಅನುದಾನವೆಷ್ಟು ;

(ಇ) ಅರಣ್ಯ ಇಲಾಖೆಯ ವತಿಯಿಂದ ನಿರ್ವಾಹಣೆ ಮಾಡುತ್ತಿರುವ ಹಾಗೂ ಇತರೆ ಇಲಾಖೆ ವತಿಯಿಂದ ನಿರ್ವಹಣೆ ಮಾಡುತ್ತಿರುವ ಪ್ರಕೃತಿ ವನಗಳೆಷ್ಟು ? (ವಿವರ ನೀಡುವುದು)

## ಕೃಷ್ಣ ಮೇಲ್ದಂಡೆ ಯೋಜನೆಯಲ್ಲಿ ಮುಳುಗಡೆಯಾಗಿರುವ ಗ್ರಾಮಗಳ ಬಗ್ಗೆ

**ಶ್ರೀ ಹಣಮಂತ ಆರ್. ನಿರಾಣಿ (ಪದವೀಧರರ ಕ್ಷೇತ್ರ) :–**

೧೩೪೯ (೧೧೭೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷ್ಣ ಮೇಲ್ದಂಡೆ ಯೋಜನೆಯಲ್ಲಿ ಹೊಸದಾಗಿ ಮುಳುಗಡೆ ಆಗುವ ಗ್ರಾಮಗಳಲ್ಲಿ ಕಟ್ಟಡದ ಮೌಲ್ಯಮಾಪನ ನಡೆಯುತ್ತಿರುವುದಿಲ್ಲವಾದ್ದರಿಂದ, ಆದಷ್ಟು ಬೇಗನೆ ಕಟ್ಟಡಗಳ (ಮನೆಗಳ) ಬೆಲೆ ನಿಗಧಿಪಡಿಸಲು ತೆಗೆದುಕೊಂಡ ಕ್ರಮಗಳೇನು;

(ಆ) ಈ ಗ್ರಾಮಗಳನ್ನು ಸ್ಥಳಾಂತರಿಸಲು ಪುನರ್ ವಸತಿ ಕೇಂದ್ರಗಳನ್ನು ಸ್ಥಾಪಿಸುವಲ್ಲಿ, ಆಗುತ್ತಿರುವ ವಿಳಂಬ ನೀತಿಗೆ ಸಂತ್ರಸ್ಥರು ಪರದಾಡುವಂತಾಗಿದ್ದು, ಇನ್ನು ಅನೇಕ ಗ್ರಾಮಗಳಿಗೆ ಪುನರ್ ವಸತಿ ಕೇಂದ್ರದ ಸ್ಥಳ ಗುರುತಿಸಿದ್ದರೂ, ಭೂ ಸ್ವಾಧೀನದಲ್ಲಿ ಕುಂಠಿತವಾಗುತ್ತಿರುವುದು ಕಂಡು ಬಂದಿದ್ದು, ತಕ್ಷಣ ಪುನರ್ ವಸತಿ ಕೇಂದ್ರಗಳನ್ನು ನಿರ್ಮಿಸಲು ಭೂ ಸ್ವಾಧೀನ ಮಾಡಿಕೊಳ್ಳುವ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಜ್ಯದಲ್ಲಿನ ಕಾರ್ಮಿಕ ಇಲಾಖಾ ಕಛೇರಿ ಹಾಗೂ ಮಂಜೂರಾದ ಹುದ್ದೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೦೦ (೧೦೬೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ಜಿಲ್ಲೆ ಹಾಗೂ ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕ ಇಲಾಖೆಯ ವಿವಿಧ ದರ್ಜೆಯ ಕಛೇರಿಗಳು ಎಷ್ಟು ; ಅವು ಯಾವುವು ; ಇವುಗಳಿಗೆ ಮಂಜೂರಾದ ಹುದ್ದೆಗಳೆಷ್ಟು ; ಕೊರತೆ ಇರುವ ಹುದ್ದೆಗಳೆಷ್ಟು ; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಜಿಲ್ಲಾವಾರು, ತಾಲ್ಲೂಕುವಾರು, ಹುದ್ದೆವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿರುವ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಸಂಘಟಿತ ಹಾಗೂ ಅಸಂಘಟಿತ ಕಾರ್ಮಿಕರುಗಳಿಗೆ ನೀಡಲ್ಪಡುತ್ತಿರುವ ಸವಲತ್ತು ಹಾಗೂ ಸೌಲಭ್ಯಗಳು ಯಾವುವು ;

(ಈ) ಕಳೆದ ಮೂರು ವರ್ಷಗಳಲ್ಲಿ ಉಡುಪಿ ಜಿಲ್ಲೆಯಲ್ಲಿನ ಸಂಘಟಿತ ಹಾಗೂ ಅಸಂಘಟಿತ ಕಾರ್ಮಿಕರಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಬೇರೆ ಬೇರೆ ಯೋಜನೆಯಡಿ ನೀಡಲಾದ ಸವಲತ್ತು ಮತ್ತು ಸೌಲಭ್ಯಗಳು ಯಾವುವು ? (ತಾಲ್ಲೂಕುವಾರು, ವರ್ಷವಾರು, ಸೌಲಭ್ಯ ಹಾಗೂ ಸವಲತ್ತುವಾರು ವಿವರ ನೀಡುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಡೀಮ್ಡ್ ಫಾರೆಸ್ಟ್ ಎಂಬ ಹೆಸರಿನಲ್ಲಿ ಆಗುವ ತೊಂದರೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೦೧ (೧೦೬೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕೆಲವು ಕಂದಾಯ ಭೂಮಿಯನ್ನು ಡೀಮ್ಡ್ (Deemed Forest) ಎಂದು ಹೆಸರಿಸಿರುವುದರಿಂದ ಅಕ್ರಮ–ಸಕ್ರಮ, ೯೪ 'ಸಿ' ಮತ್ತು ೯೪ 'ಸಿಸಿ' ರಡಿ ಫಲಾನುಭವಿಗಳಿಗೆ ಭೂ ಮಂಜೂರಾತಿ ಮಾಡಲು ಅಡಚಣೆಯಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದಲ್ಲಿ, ಇದನ್ನು ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದೇ; ಇಲ್ಲವಾದಲ್ಲಿ, ಕಾರಣವೇನು ;

(ಆ) ಸದರಿ ಜಿಲ್ಲೆಗಳಲ್ಲಿ ಕಂದಾಯ ಇಲಾಖಾ ವ್ಯಾಪ್ತಿಯ ಪ್ರದೇಶದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಗ್ರಾಮೀಣ ರಸ್ತೆ ಯೋಜನೆಗಳಾದ ಪ್ರಧಾನ ಮಂತ್ರಿ ಗ್ರಾಮ ಸಡಕ್ ಮತ್ತು ಮುಖ್ಯಮಂತ್ರಿ ಗ್ರಾಮ ಸಡಕ್ ಯೋಜನೆಯ ಕಾಮಗಾರಿಗಳ ಅನುಷ್ಠಾನಕ್ಕೆ ಡೀಮ್ಡ್ ಫಾರೆಸ್ಟ್‌ನಿಂದ ಅಡಚಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ;

(ಇ) ಸದರಿ ಜಿಲ್ಲೆಗಳಲ್ಲಿ ಶಾಸನಬದ್ಧವಾಗಿ ಕಾರ್ಯನಿರ್ವಹಿಸುತ್ತಿರುವ ಶಿಲೆಕಲ್ಲು ಗಣಿಗಾರಿಕೆ ಹಾಗೂ ಜಲ್ಲಿಕ್ರಶರ್ ಸ್ಥಾವರಗಳಿಗೆ ಕಾರ್ಯನಿರ್ವಹಿಸಲು ಡೀಮ್ಡ್ ಫಾರೆಸ್ಟ್‌ನಿಂದ ತೊಂದರೆ ಯಾಗುತ್ತಿರುವುದು ಸರ್ಕಾರ ಗಮನಿಸಿದೆಯೇ ; ಗಮನಿಸಿದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು;

(ಈ) ಬೃಹತ್ ನೀರಾವರಿ ಯೋಜನಾ ಕಾಮಗಾರಿ ಪ್ರದೇಶಗಳಲ್ಲಿ ಕಂದಾಯ ಇಲಾಖಾ ವ್ಯಾಪ್ತಿಯ ಮರಗಳಿಲ್ಲದ ಪ್ರದೇಶಗಳನ್ನು ಡೀಮ್ಡ್ ಫಾರೆಸ್ಟ್ ಎಂದು ನಮೂದಿಸುವ ಮೂಲಕ ಕಾಮಗಾರಿಗಳ ನಿರ್ವಹಣೆಗೆ ಅನಾವಶ್ಯಕ ವಿಳಂಬ ಮಾಡುತ್ತಿರುವುದು ಸರ್ಕಾರ ಗಮನಿಸಿದೆಯೇ ; ಗಮನಿಸಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು?

## ವರಾಹಿ ನೀರಾವರಿ ಯೋಜನೆಯಲ್ಲಿ ರೈತರು ಮತ್ತು ಖಾಸಗಿ ವಿದ್ಯುತ್ ಉತ್ಪಾದಕರ ನಡುವಿನ ಸಂಘರ್ಷದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೦೨ (೧೦೬೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನೀರಾವರಿ ನಿಗಮದಿಂದ ನಿರ್ವಹಿಸಲ್ಪಡುತ್ತಿರುವ ವರಾಹಿ ನೀರಾವರಿ ಯೋಜನೆಯಲ್ಲಿ ರೈತರ ಕೃಷಿ ಉಪಯೋಗಕ್ಕಾಗಿ ನೀರಾವರಿ ಕಾಲುವೆಯಲ್ಲಿ ನೀರು ಹರಿಸಿದರೆ ಖಾಸಗಿ ಜಲ ವಿದ್ಯುತ್ ಉತ್ಪಾದಕರಿಗೆ ನೀರಿನ ಕೊರತೆಯಾಗುವುದನ್ನು ಹಾಗೂ ಖಾಸಗಿ ಜಲ ವಿದ್ಯುತ್ ಉತ್ಪಾದಕ ಘಟಕಕ್ಕೆ ನೀರನ್ನು ಹರಿಸಿದರೆ ರೈತರ ಹೊಲಗಳಿಗೆ ನೀರಾವರಿ ಕಾಲುವೆಯ ಮೂಲಕ ನೀರು ಹರಿಯದೆ ಇರುವ ಅರಿವು ಇಲಾಖೆಗೆ ಇದೆಯೇ ; ಇದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರೈತರು ಮತ್ತು ಖಾಸಗಿ ವಿದ್ಯುತ್ ಉತ್ಪಾದಕರ ನಡುವೆ ಸಂದೇಹ, ಸಂಘರ್ಷಕ್ಕೆ ಕಾರಣವಾಗದ ರೀತಿಯಲ್ಲಿ ವಿದ್ಯುತ್ ಉತ್ಪಾದನೆಯನ್ನು ಸರ್ಕಾರದ ವೆಚ್ಚದಿಂದ ನಿರ್ಮಿಸಲಾದ ಅಣೆಕಟ್ಟಿನ ನೀರನ್ನು ಬಳಸಿ ಸರ್ಕಾರದ ವತಿಯಿಂದ ಜಲ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ, ಈ ಸಂಘರ್ಷಕ್ಕೆ ಪರಿಹಾರ ಮಾರ್ಗಗಳೇನು?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಕಂದಾಯ ಭೂಮಿಯ ಡೀಮ್ಡ್ ಫಾರೆಸ್ಟ್ ಎಂದು ನಮೂದಿಸಿದರಿಂದ ಆಗುವ ಅನಗತ್ಯ ತೊಂದರೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೦೩ (೧೦೬೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕೆಲವು ಕಂದಾಯ ಭೂಮಿಯನ್ನು ಡೀವ್ಡ್ (Deemed Forest) ಎಂದು ಹೆಸರಿಸಿರುವುದರಿಂದ ಅಕ್ರಮ–ಸಕ್ರಮ, ೯೪ "ಸಿ" ಮತ್ತು ೯೪ 'ಸಿಸಿ' ರಡಿ ಫಲಾನುಭವಿಗಳಿಗೆ ಭೂ ಮಂಜೂರಾತಿ ಮಾಡಲು ಅಡಚಣೆಯಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದಲ್ಲಿ, ಇದನ್ನು ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದೇ; ಇಲ್ಲವಾದಲ್ಲಿ, ಕಾರಣವೇನು ;

(ಆ) ಸದರಿ ಜಿಲ್ಲೆಗಳಲ್ಲಿ ಕಂದಾಯ ಇಲಾಖಾ ವ್ಯಾಪ್ತಿಯ ಪ್ರದೇಶದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಗ್ರಾಮೀಣ ರಸ್ತೆ ಯೋಜನೆಗಳಾದ ಪ್ರಧಾನ ಮಂತ್ರಿ ಗ್ರಾಮ ಸಡಕ್ ಮತ್ತು ಮುಖ್ಯಮಂತ್ರಿ ಗ್ರಾಮ ಸಡಕ್ ಯೋಜನೆಯ ಕಾಮಗಾರಿಗಳ ಅನುಷ್ಠಾನಕ್ಕೆ ಡೀಮ್ಡ್ ಫಾರೆಸ್ಟ್ ನಿಂದ ಅಡಚಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ;

(ಇ) ಸದರಿ ಜಿಲ್ಲೆಗಳಲ್ಲಿ ಶಾಸನಬದ್ಧವಾಗಿ ಕಾರ್ಯನಿರ್ವಹಿಸುತ್ತಿರುವ ಅಲೆಕಲ್ಲು ಗಣಿಗಾರಿಕೆ ಹಾಗೂ ಜಲ್ಲಿಕ್ರಶರ್ ಸ್ಥಾವರಗಳಿಗೆ ಕಾರ್ಯನಿರ್ವಹಿಸಲು ಡೀಮ್ಡ್ ಫಾರೆಸ್ಟ್‌ನಿಂದ ತೊಂದರೆಯಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ;

(ಈ) ಬೃಹತ್ ನೀರಾವರಿ ಯೋಜನಾ ಕಾಮಗಾರಿ ಪ್ರದೇಶಗಳಲ್ಲಿ ಕಂದಾಯ ಇಲಾಖಾ ವ್ಯಾಪ್ತಿಯ ಮರಗಳಿಲ್ಲದ ಪ್ರದೇಶಗಳನ್ನು ಡೀಮ್ಡ್ ಫಾರೆಸ್ಟ್ ಎಂದು ನಮೂದಿಸಿರುವ ಮೂಲಕ ಕಾಮಗಾರಿಗಳ ನಿರ್ವಹಣೆಗೆ ಅನಾವಶ್ಯಕ ವಿಳಂಬ ಮಾಡುತ್ತಿರುವುದು ಸರ್ಕಾರ ಗಮನಿಸಿದೆಯೇ ; ಗಮನಿಸಿದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು?

## ಕಂದಾಯ ಇಲಾಖಾಧಿಕಾರಿಗಳು ಮಾಡುವ ತಪ್ಪಿನಿಂದ ಜನ ಸಾಮಾನ್ಯರಿಗೆ ತೊಂದರೆ ಆಗುತ್ತಿರುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೦೪ (೧೦೬೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಉಡುಪಿ ಜಿಲ್ಲೆಯಲ್ಲಿ ಕಂದಾಯ ದಾಖಲೆಗಳನ್ನು ಸರಿಪಡಿಸುವಂತೆ ಕೋರಿ ಬಂದ ಮೇಲ್ಮನವಿ ಪ್ರಕರಣಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ವರ್ಷವಾರು ವಿವರ ನೀಡುವುದು)

(ಆ) ನಿರ್ಲಕ್ಷ್ಯ ಹಾಗೂ ದುರುದ್ದೇಶಗಳಿಗಾಗಿ ಕೆಲವು ಅಧಿಕಾರಿಗಳು ಮಾಡಿರುವ ತಪ್ಪಿಗೆ ಜನ ಸಾಮಾನ್ಯರು ಮೇಲ್ಮನವಿ ಶಿಕ್ಷೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?

(ಇ) ನಿರ್ಲಕ್ಷ್ಯ ಹಾಗೂ ದುರುದ್ದೇಶಗಳಿಗಾಗಿ ತಪ್ಪನ್ನು ಮಾಡಿದಂತಹ ಕಂದಾಯ ಇಲಾಖೆಯ ಅಧಿಕಾರಿಗಳ ಮೇಲೆ ದೂರು ಸಲ್ಲಿಸಿದರೆ ಅವರ ಮೇಲೆ ತನಿಖೆ ನಡೆಸಿ ಕ್ರಮ ಕೈಗೊಳ್ಳಲಾಗುವುದೇ; ಮತ್ತು ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಇಂತಹ ಎಷ್ಟು ಪ್ರಕರಣಗಳು ದಾಖಲಾಗಿವೆ; ಸದರಿ ಪ್ರಕರಣಗಳಲ್ಲಿ ತಪ್ಪಿತಸ್ಥರ ವಿರುದ್ಧ ತೆಗೆದುಕೊಂಡ ಇಲಾಖಾ ಕ್ರಮಗಳೇನು? (ವರ್ಷವಾರು, ಪ್ರಕರಣವಾರು ವಿವರ ನೀಡುವುದು)

## ಭೀಕರ ಬರಗಾಲದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೦೫ (೧೧೩೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಭೀಕರ ಬರಗಾಲವಿರುವುದು ನಿಜವೇ ;

(ಆ) ಹಾಗಿದ್ದರೆ, ಒಟ್ಟು ಎಷ್ಟು ತಾಲ್ಲೂಕುಗಳಲ್ಲಿ ಬರಗಾಲವಿದೆ ; ಬರ ನಿರ್ವಹಣೆಗೆ ರಾಜ್ಯ ಸರ್ಕಾರ ತೆಗೆದುಕೊಂಡಿರುವ ಮುಂಜಾಗ್ರತಾ ಕ್ರಮಗಳೇನು ; ಬರ ನಿರ್ವಹಣೆಗೆ ಖರ್ಚು ಮಾಡಿದ ಹಣದ ಮೊತ್ತ ಎಷ್ಟು ? (ವಿವರ ನೀಡುವುದು)

## ರಾಜ್ಯದ ನೀರಾವರಿಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೦೬ (೧೧೩೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೀರಾವರಿ ಯೋಜನೆಗೆ ೨೦೧೩–೧೪ ರಿಂದ ೨೦೧೬–೧೭ ರವರೆಗೆ ಸರ್ಕಾರ ಖರ್ಚು ಮಾಡಿದ ಒಟ್ಟು ಹಣ ಎಷ್ಟು ;

(ಆ) ಹಾಗಿದ್ದರೆ, ಕಾವೇರಿ ಮತ್ತು ಕೃಷ್ಣ ಹಾಗೂ ಇತರೆ ನೀರಾವರಿ ಯೋಜನೆಗಳಿಗೆ ಸರ್ಕಾರ ಕಳೆದ ೪ ವರ್ಷಗಳಲ್ಲಿ ಅಂದರೆ ೨೦೧೩–೧೪ ರಿಂದ ೨೦೧೬–೧೭ ರವರೆಗೆ ಖರ್ಚು ಮಾಡಿದ ಹಣದ ಮೊತ್ತ ಎಷ್ಟು ; ಹೊಸದಾಗಿ ನಿರ್ಮಿಸಿದ ನೀರಾವರಿ ಪ್ರದೇಶಗಳು ಯಾವುವು ? (ವರ್ಷಾವಾರು ಮತ್ತು ಯೋಜನೆವಾರು ವಿವರ ನೀಡುವುದು)

## ಕಾರ್ಮಿಕರ ಸೌಲಭ್ಯಗಳ ಹಾಗೂ ಕಾರ್ಮಿಕ ನಿಧಿಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೦೭ (೧೧೩೮) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರ್ಮಿಕ ಇಲಾಖೆಯಿಂದ ಕಾರ್ಮಿಕರಿಗೆ ಹಲವಾರು ಸೌಲಭ್ಯಗಳು ನೀಡುತ್ತಿರುವುದು ನಿಜವೇ ; ಆ ಸೌಲಭ್ಯಗಳ ವಿವರಗಳೇನು ;

(ಆ) ಕಾರ್ಮಿಕರು ಸೌಲಭ್ಯ ಪಡೆಯಲು ಅನುಸರಿಸಬೇಕಾದ ವಿಧಾನಗಳೇನು ; (ವಿವರ ನೀಡುವುದು)

(ಇ) ಕಾರ್ಮಿಕ ನಿಧಿಗೆ ವಿವಿಧ ರೀತಿಯಲ್ಲಿ ಇದುವರೆವಿಗೆ ಸಂಗ್ರಹವಾಗಿರುವ ಹಣದ ಮೊತ್ತ ಎಷ್ಟು ; ಖರ್ಚಾದ ಹಣದ ಮೊತ್ತ ಎಷ್ಟು ; ಬಾಕಿ ಉಳಿಕೆ ಹಣದ ಮೊತ್ತ ಎಷ್ಟು ; ಯಾವ ಯಾವ ಕಾರ್ಯಕ್ರಮಗಳಿಗೆ ಹಣವನ್ನು ಖರ್ಚುಮಾಡಲಾಗಿದೆ? (ಕಳೆದ ೪ ವರ್ಷಗಳ ಅಂದರೆ ೨೦೧೩-೧೪ ರಿಂದ ೨೦೧೬-೧೭ ರವರೆಗೆ ವರ್ಷವಾರು, ಸೌಲಭ್ಯಗಳ ಸಹಿತ ಫಲಾನುಭವಿಗಳ ಸಂಖ್ಯೆ ಮತ್ತು ಹಣದ ವಿವರ ನೀಡುವುದು)

## ಬರ ಪೀಡಿತ ತಾಲ್ಲೂಕುಗಳ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೦೮(೧೧೦೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬-೧೭ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆಯ ಎಷ್ಟು ತಾಲ್ಲೂಕುಗಳನ್ನು ಬರ ಪೀಡಿತ ಪ್ರದೇಶವೆಂದು ಘೋಷಣೆ ಮಾಡಲಾಗಿದೆ ;

(ಆ) ಸರ್ಕಾರದ ಆದೇಶ ಸಂಖ್ಯೆ ಆರ್.ಡಿ. ೨೫೫/ಟಿಎನ್‌ಆರ್/೨೦೧೬ ದಿನಾಂಕ: ೦೬.೧೦.೨೦೧೬ರ ಪ್ರಕಾರ ಜಿಲ್ಲೆಯಲ್ಲಿ ಎಷ್ಟು ತಾಲ್ಲೂಕುಗಳನ್ನು ಬರ ಪೀಡಿತ ಪ್ರದೇಶವೆಂದು ಘೋಷಣೆ ಮಾಡಲಾಗಿದೆ ; (ವಿವರಣೆ ನೀಡುವುದು)

(ಇ) ಹಿಂಗಾರು ಬೆಳೆ ವೈಫಲ್ಯದ ಹಿನ್ನಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಆರ್.ಡಿ.೧೮/ಟಿಎನ್ಆರ್/೨೦೧೭ ದಿನಾಂಕ: ೨೪.೧೧.೨೦೧೭ ರಂದು ಹೊರಡಿಸಿದ ಆದೇಶದ ಪ್ರಕಾರ ಜಿಲ್ಲೆಯಲ್ಲಿ ಎಷ್ಟು ತಾಲ್ಲೂಕುಗಳನ್ನು ಬರ ಪೀಡಿತ ಪ್ರದೇಶವೆಂದು ಘೋಷಣೆ ಮಾಡಲಾಗಿದೆ ; (ವಿವರಣೆ ನೀಡುವುದು)

(ಈ) ದಿನಾಂಕ: ೨೪.೦೨.೨೦೧೭ರ ಆದೇಶದಲ್ಲಿ ಮೂಡಿಗೆರೆ ತಾಲ್ಲೂಕು ಬರ ಪೀಡಿತ ಪ್ರದೇಶದ ಪಟ್ಟಿಯಿಂದ ಬಿಟ್ಟುಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಈ ಕುರಿತು ಯಾವ ಕ್ರಮ ಕೈಗೊಂಡಿದೆ? (ವಿವರಣೆ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಕೆರೆ ಹೂಳು ತೆಗೆಯುವ ಮತ್ತು ಜೀರ್ಣೋದ್ಧಾರದ ಬಗ್ಗೆ

**ಶ್ರೀ ಬಿ.ಜಿ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೮೯ (೧೨೧೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ಕೆರೆಗಳಿವೆ;

(ಆ) ಮಂಡ್ಯ ಜಿಲ್ಲೆಗಳಲ್ಲಿ ನೀರಿಲ್ಲದೆ ಬತ್ತಿ ಹೋಗುತ್ತಿರುವ ಕೆರೆಗಳನ್ನು ಗುರುತಿಸಿ ಹೆಚ್ಚಿನ ಪ್ರಮಾಣದ ನೀರು ಸಂಗ್ರಹವಾಗುವ ಉದ್ದೇಶದಿಂದ ಕೆರೆಗಳಲ್ಲಿ ತುಂಬಿರುವ "ಹೂಳು" ತೆಗೆದು ಜೀರ್ಣೋದ್ಧಾರ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಯಾವ ಯಾವ ಕೆರೆಗಳನ್ನು "ಹೂಳು" ತೆಗೆದು ಜೀರ್ಣೋದ್ಧಾರ ಮಾಡಲು ಆಯ್ಕೆ ಮಾಡಲಾಗಿದೆಯೇ ? (ಆಯ್ಕೆ ಮಾಡಲಾದ ಕೆರೆಗಳ ಹೆಸರು, ವಿಳಾಸ ಮತ್ತು ಅನುದಾನದ ವಿವರ ನೀಡುವುದು)

## ಕಾಡು ಪ್ರಾಣಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೧೦ (೧೧೦೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯ ಅರಣ್ಯ ಪ್ರದೇಶದಲ್ಲಿ ಕಾಡು ಪ್ರಾಣಿಗಳಿಗೆ ಯಾವ ರೀತಿ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ ; (ವಿವರ ನೀಡುವುದು)

(ಆ) ೨೦೧೬–೧೭ ನೇ ಸಾಲಿನಲ್ಲಿ ಕಾಡು ಪ್ರಾಣಿಗಳಿಗೆ ಕುಡಿಯುವ ನಿರಿನ ವ್ಯವಸ್ಥೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು)

(ಇ) ಜಿಲ್ಲೆಯ ಅರಣ್ಯ ಪ್ರದೇಶದಲ್ಲಿ ಕಾಡ್ಗಿಚ್ಚನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರಣೆ ನೀಡುವುದು)

## ಕಪ್ಪತ್ತಗುಡ್ಡ ಅರಣ್ಯ ಪ್ರದೇಶದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೧೧ (೧೧೦೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗದಗ ಜಿಲ್ಲೆಯ ಕಪ್ಪತ್ತಗುಡ್ಡದಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಪ್ಪತ್ತಗುಡ್ಡದಲ್ಲಿ ಗಣಿಗಾರಿಕೆ ನಡೆಸಲು ಸರ್ಕಾರ ಅನುಮತಿ ನೀಡಿದೆಯೇ ; ನೀಡಿದ್ದಲ್ಲಿ, ಯಾವ ಯಾವ ಕಂಪನಿಗಳಿಗೆ ಎಷ್ಟು ವರ್ಷಕ್ಕೆ ನೀಡಿದೆ ;

(ಇ) ಕಪ್ಪತ್ತಗುಡ್ಡವನ್ನು ಸಂರಕ್ಷಿತ ಅರಣ್ಯ ಪ್ರದೇಶವೆಂದು ಸರ್ಕಾರ ಘೋಷಣೆ ಮಾಡಿದ್ದು, ಈ ಆದೇಶವನ್ನು ಹಿಂಪಡೆಯಲು ಕಾರಣವೇನು ;

(ಈ) ಕಪ್ಪತ್ತಗುಡ್ಡದಲ್ಲಿ ಔಷಧಿಯ ಸಸಿ/ಗಿಡ/ಮರಗಳನ್ನು ಸರ್ಕಾರವು ಗುರುತಿಸಿದೆಯೇ ; ಇದ್ದಲ್ಲಿ, ಇದನ್ನು ರಕ್ಷಿಸಲು ಕೈಗೊಂಡಿರುವ ಕ್ರಮಗಳೇನು ?

## ರಾಜ್ಯ ಒಲಿಂಪಿಕ್ ಕ್ರೀಡಾಕೂಟದಲ್ಲಿ ಮೃತಪಟ್ಟ ಕ್ರೀಡಾಪಟು ಕುಟುಂಬಕ್ಕೆ ಪರಿಹಾರ ನೀಡಿರುವ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೧೨ (೧೧೦೫) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಧಾರವಾಡದಲ್ಲಿ ಇತ್ತೀಚೆಗೆ ನಡೆದ ರಾಜ್ಯ ಒಲಿಂಪಿಕ್ ಕ್ರೀಡಾಕೂಟದಲ್ಲಿ ಕಾಲುಮೂಳೆ ಮುರಿತಕ್ಕೊಳಗಾಗಿ ಚಿಕಿತ್ಸೆ ಫಲಕಾರಿಯಾಗದೆ ಮರಣ ಹೊಂದಿದ ಧಾರವಾಡದ

ಚಿಕ್ಕಮಲ್ಲಿಗವಾಡ ಗ್ರಾಮದ ಯುವ ಕ್ರೀಡಾಪಟು ಅವರ ಕುಟುಂಬಕ್ಕೆ ಸರ್ಕಾರ ಈವರೆಗೆ ನೀಡಿರುವ ಪರಿಹಾರ ಮತ್ತು ನೆರವುಗಳು ಯಾವುವು ? (ಸಂಪೂರ್ಣ ವಿವರ ನೀಡುವುದು)

## ಪುರಾತನ ಕಾಲದ ದೇವಸ್ಥಾನಗಳ ಜೀರ್ಣೋದ್ಧಾರ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೧೩ (೧೧೦೮) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಪುರಾತನ ಕಾಲದ ದೇವಾಲಯಗಳ ಸರ್ವೆ ಮಾಡಲಾಗಿದೆಯೇ ;

(ಆ) ಈ ಪುರಾತನ ದೇವಸ್ಥಾನಗಳಲ್ಲಿ ಎಷ್ಟು ಶಿಥಿಲಾವಸ್ಥೆಯಲ್ಲಿವೆ; (ಜಿಲ್ಲಾವಾರು, ದೇವಸ್ಥಾನವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ದೇವಸ್ಥಾನಗಳ ದುರಸ್ಥಿ ಹಾಗೂ ಜೀರ್ಣೋದ್ಧಾರಕ್ಕೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ಜಿಲ್ಲಾವಾರು, ದೇವಸ್ಥಾನವಾರು ಸಂಪೂರ್ಣ ವಿವರ ನೀಡುವುದು)

(ಈ) ಈ ಕಾರ್ಯಕ್ಕಾಗಿ ಎಷ್ಟು ಅನುದಾನವನ್ನು ಮೀಸಲಿಡಲಾಗಿದೆ ? (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

## ಅರಣ್ಯ ಇಲಾಖೆಯಿಂದ ಕೈಗೊಂಡಿರುವ ಕಾರ್ಯಕ್ರಮಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೧೪ (೧೧೦೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ, ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಅರಣ್ಯ ಇಲಾಖಾ ವತಿಯಿಂದ ಕಳೆದ ಮೂರು ವರ್ಷಗಳಿಂದ ಈವರೆಗೆ ಕೈಗೊಂಡಿರುವ ಕಾಮಗಾರಿಗಳು ಯಾವುವು ; (ವರ್ಷಾವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳಿಗೆ ಕಳೆದ ೩ ವರ್ಷಗಳಿಂದ ಈವರೆಗೆ ಈ ೩ ಜಿಲ್ಲೆಗಳಿಗೆ ನಿಗಧಿಪಡಿಸಿರುವ ಅನುದಾನ ಎಷ್ಟು ; ಖರ್ಚಾಗಿರುವ ಹಣ ಎಷ್ಟು ; ಉಳಿಕೆಯಾದ ಹಣ ಎಷ್ಟು ; (ಕಾಮಗಾರಿವಾರು, ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಕಾಮಗಾರಿಗಳಲ್ಲಿ ಈವರೆಗೆ ಮುಕ್ತಾಯಗೊಂಡ ಕಾಮಗಾರಿಗಳು ಯಾವುವು ; ಬಾಕಿ ಉಳಿದ ಕಾಮಗಾರಿಗಳು ಯಾವುವು ; ಪ್ರಗತಿಯಲ್ಲಿರುವ ಕಾಮಗಾರಿಗಳಾವುವು ; ಬಾಕಿ ಉಳಿದ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಮುಕ್ತಾಯಗೊಳಿಸಲಾಗುವುದು? (ಕಾಮಗಾರಿವಾರು, ತಾಲ್ಲೂಕುವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು)

## ಕರ್ನಾಟಕ ಸಹಕಾರ ಮೀನುಗಾರಿಕೆ ಮಹಾಮಂಡಳಿ ಮೈಸೂರು ವತಿಯಿಂದ ಮೀನು ಮಾರಾಟ ಮಳಿಗೆ ಮಂಜೂರಾತಿ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೧೫ (೧೧೧೯) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೦೧–೨೦೦೭ ರವರೆಗೆ ಕರ್ನಾಟಕ ಸಹಕಾರ ಮೀನುಗಾರಿಕೆ ಮಹಾಮಂಡಳಿ, ಮೈಸೂರು, ವತಿಯಿಂದ ಮೀನು ಮಾರಾಟ ಮಳಿಗೆಯನ್ನು ಮಂಜೂರಾತಿ ಮಾಡಿರುವ ವ್ಯಕ್ತಿಗಳ ಸಂಖ್ಯೆ ಎಷ್ಟು ; (ಹೆಸರಿನೊಂದಿಗೆ ಜಿಲ್ಲಾವಾರು ವಿವರ ನೀಡುವುದು)

(ಆ) ೧೯೯೧–೨೦೧೭ ರವರೆಗೆ ಕರ್ನಾಟಕ ಸಹಕಾರ ಮೀನುಗಾರಿಕೆ ಮಹಾಮಂಡಳಿ ವತಿಯಿಂದ ಮೈಸೂರಿಗೆ ಸರ್ಕಾರ ನೀಡಲಾಗಿರುವ ಅನುದಾನ ಎಷ್ಟು ; (ವಿವರ ಒದಗಿಸುವುದು)

(ಇ) ೨೦೧೧–೨೦೧೭ ರವರೆಗೆ ಮೀನು ಮಾರಾಟಕ್ಕೆ ಮೀನುಗಳನ್ನು ಒದಗಿಸುತ್ತಿರುವ ಬಗ್ಗೆ ಹಾಗೂ ಇದರಿಂದ ಮಹಾಮಂಡಳಿಗೆ ಬಂದಿರುವ ಆದಾಯ ಎಷ್ಟು ; (ವಿವರ ನೀಡುವುದು)

(ಈ) ೧೯೯೧–೨೦೧೭ ರವರೆಗೆ ಮಹಾಮಂಡಳಿಯ ಖರೀದಿಸಿರುವ ವಾಹನಗಳ ಸಂಖ್ಯೆ ಎಷ್ಟು ? (ಖರೀದಿಸಿದ, ಇಂಧನದ ವಿವರ, ಹರಾಜಾದ ವಾಹನ ವಿವರ ಹರಾಜಿನಲ್ಲಿ ಖರೀದಿಸಿದ ವ್ಯಕ್ತಿಗಳ ವಿವರ ನೀಡುವುದು)

## ರಾಜ್ಯದಲ್ಲಿ ಮೀನುಗಾರಿಕೆಗೆ ಸಂಬಂಧಿಸಿದಂತೆ, ಮೀನುಗಾರಿಕೆ ವಿಶ್ವವಿದ್ಯಾಲಯಗಳು ಎಷ್ಟು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೧೬ (೧೧೨೦) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮೀನುಗಾರಿಕೆ ಸಂಬಂಧಿಸಿದಂತೆ ಮೀನುಗಾರಿಕೆ ವಿಶ್ವವಿದ್ಯಾಲಯು ಮತ್ತು ಮೀನುಗಾರಿಕೆ ಇಲಾಖೆಯಲ್ಲಿ ಮೀನುಗಾರಿಕೆ B.F.Sc, M.F.Sc ಮತ್ತು ಮೀನುಗಾರಿಕೆ P.hd ಮಾಡಿರುವ ಸಾಕಷ್ಟು ಅಧಿಕಾರಿಗಳಿದ್ದು ಹೊಸ ಸಂಶೋಧನೆಗಳನ್ನು ಕೈಗೊಂಡು ಸಮಗ್ರ ಮೀನುಗಾರಿಕೆ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳ ಬಗ್ಗೆ ಹಾಗೂ ರಾಜ್ಯದ ಹವಾಮಾನ ಮತ್ತು ಸ್ಥಳೀಯ ವಾತಾವರಣಕ್ಕೆ ಒಗ್ಗುವಂತೆ ಯಾವುದಾದರೂ ತಳಿಗಳನ್ನು ಇಲಾಖಾ ಪ್ರಾರಂಭವಾದಾಗಿನಿಂದ ಕಂಡು ಹಿಡಿಯಲಾಗಿರುತ್ತದೆಯೇ ; (ವಿವರ ನೀಡುವುದು)

(ಆ) ಸದರಿ ಇಲಾಖಾ ತಾಂತ್ರಿಕ ಅಧಿಕಾರಿಗಳು ಇಲಾಖೆಯ ಸಾಮಾನ್ಯ ಕಾರ್ಯಕ್ರಮಗಳನ್ನು ಹೊರತುಪಡಿಸಿ ಇತರೇ ರಾಜ್ಯಗಳಾದ ಆಂಧ್ರಪ್ರದೇಶ, ತೆಲಂಗಾಣ, ತಮಿಳುನಾಡು, ಕೇರಳಾ ಮತ್ತು ಪಶ್ಚಿಮ ಬಂಗಾಳದಲ್ಲಿ ಅಭಿವೃದ್ಧಿಪಡಿಸಿರುವಂತೆ ನಮ್ಮ ರಾಜ್ಯದಲ್ಲಿ ಹೆಚ್ಚಿನ ಜಲಸಂಪನ್ಮೂಲದ ಸೌಲಭ್ಯವಿದ್ದರೂ ಸಹ ಅಭಿವೃದ್ಧಿ ಹೊಂದದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮೀನು ಒಂದು ಪೌಷ್ಠಿಕ ಆಹಾರವಾಗಿರುವುದರಿಂದ ಜನರಿಗೆ ಕೈಗೆಟಕುವ ದರದಲ್ಲಿ ದೊರೆಯುವಂತೆ ಇಲಾಖಾ ಅಧಿಕಾರಿಗಳು ಹೆಚ್ಚು ಒತ್ತು ನೀಡದೆ ಇಂದಿಗೂ ಅವೈಜ್ಞಾನಿಕ ರೀತಿಯಲ್ಲಿ ಮೀನು ಕೃಷಿಯನ್ನು ಕೈಗೊಳ್ಳುತ್ತಿರುವುದರಿಂದ ರಾಜ್ಯದ ಆದಾಯ ನಷ್ಟವಾಗುತ್ತಿರುವುದು ತಿಳಿದು ಬಂದಿರುವುದಿಲ್ಲವೇ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮ ಏನು ? (ವಿವರ ಒದಗಿಸುವುದು)

## ರಾಜ್ಯದಲ್ಲಿರುವ ಮುಜರಾಯಿ ದೇವಸ್ಥಾನಗಳ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೧೭ (೧೧೨೨) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೧ ರಿಂದ ೨೦೧೭ ರವರೆಗೆ ರಾಜ್ಯದಲ್ಲಿರುವ ಮುಜರಾಯಿ ಇಲಾಖಾ ವ್ಯಾಪ್ತಿಗೆ ಒಳಪಟ್ಟಿರುವ ದೇವಸ್ಥಾನಗಳಲ್ಲಿ ವಿವಿಧ ಸೇವಾ ಕೈಂಕರ್ಯದಿಂದ ಬಂದಿರುವ ಆದಾಯ ಎಷ್ಟು ಹಾಗೂ ಹುಂಡಿಯಿಂದ ಬಂದಿರುವ ಆದಾಯ ಎಷ್ಟು ; (ವಿವರವನ್ನು ಒದಗಿಸುವುದು)

(ಆ) ೨೦೧೧–೨೦೧೭ ರವರೆಗೆ ಮುಜರಾಯಿ ಇಲಾಖೆಗೆ ಸೇರಿರುವ ದೇವಸ್ಥಾನದ ಸಿಬ್ಬಂದಿಗಳ ವೇತನಕ್ಕೆ ಮತ್ತು ಅಭಿವೃದ್ಧಿಗೆ ಬಿಡುಗಡೆ ಮಾಡಲಾದ ಅನುದಾನದ ವಿವರ ನೀಡುವುದು ;

(ಇ) ೨೦೧೧–೨೦೧೭ ರವರೆಗೆ ಮುಜರಾಯಿ ಇಲಾಖೆ ವ್ಯಾಪ್ತಿಗೆ ಸೇರಿರುವ ದೇವಸ್ಥಾನಗಳಿಗೆ ಸಿ.ಸಿ.ಟಿ.ವಿ ಅಳವಡಿಸಲಾಗಿದೆಯೇ; ಹಾಗಿದ್ದಲ್ಲಿ, ಅಳವಡಿಸಿರುವ ದೇವಸ್ಥಾನದ ವಿವರ ನೀಡುವುದು?

## ವಿವಿಧ ಯೋಜನೆಗಳಿಗಾಗಿ ಭೂ ಹಂಚಿಕೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೧೮ (೧೦೮೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಇಲಾಖೆಯಲ್ಲಿ ಯಾವ ಯಾವ ಯೋಜನೆಗಳಿಗಾಗಿ ಭೂಮಿ ಹಂಚಿಕೆ ಮಾಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಭೂಮಿ ಹಂಚಿಕೆ ಮಾಡಲು ಸರ್ಕಾರವು ಅನುಸರಿಸುವ ಮಾನದಂಡಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಯೋಜನೆಗಳ ಜವಾಬ್ದಾರಿಯನ್ನು ನಿರ್ವಹಿಸುವ ಅಧಿಕಾರಿಯ ಕಾರ್ಯವ್ಯಾಪ್ತಿಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಜಾತಿ ಪ್ರಮಾಣ ಪತ್ರ ನೀಡಲೂ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೯೯ (೧೦೮೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಪರಿಶಿಷ್ಟ ಪಂಗಡದವರ ಜಾತಿ ಪ್ರಮಾಣ ಪತ್ರ ಮತ್ತು ಆದಾಯ ಪ್ರಮಾಣ ಪತ್ರ ನೀಡುವಲ್ಲಿ ಅನೈತಿಕ ಸಂಭಾವನೆ ನಿರೀಕ್ಷಿಸಿ ವಿಳಂಬ ಧೋರಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದರಲ್ಲಿ ಭಾಗಿಯಾಗಿರುವವರ ವಿರುದ್ಧ ಈವರೆಗೆ ಯಾವ ಕ್ರಮಕೈಗೊಳ್ಳಲಾಗಿದೆ ;

(ಇ) ಈ ವಿಳಂಬ ಧೋರಣೆಯಿಂದಾಗಿ ಮಕ್ಕಳ ವಿದ್ಯಾಭ್ಯಾಸಕ್ಕೆ ಹಾಗೂ ಕೆಲಸಕ್ಕೆ ತುಂಬಾ ತೊಂದರೆಯಾಗುತ್ತಿದ್ದು, ಇದನ್ನು ತಡೆಗಟ್ಟಲು ಸರ್ಕಾರವು ಕೈಗೊಂಡಿರುವ ತುರ್ತು ಕ್ರಮಗಳೇನು ;

(ಈ) ಪರಿಶಿಷ್ಟ ಪಂಗಡದವರ ಜಾತಿ ಪ್ರಮಾಣ ಪತ್ರ ನೀಡಲು ಇರುವ ಮಾನದಂಡಗಳೇನು ? (ವಿವರವಾದ ಮಾಹಿತಿ ನೀಡುವುದು)

## ಅಕ್ರಮ–ಸಕ್ರಮ ಯೋಜನೆ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೨೦ (೧೯೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಪ್ರತಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಅಕ್ರಮ–ಸಕ್ರಮ ಯೋಜನೆಯನ್ನು ಎಂದಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ ; ಈ ಯೋಜನೆಯಡಿಯಲ್ಲಿ ಇಲ್ಲಿಯವರೆಗೆ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಅಕ್ರಮ–ಸಕ್ರಮಕ್ಕಾಗಿ) ಅರ್ಜಿ ಸಲ್ಲಿಸಿರುವ ವ್ಯಕ್ತಿಗಳು ಮತ್ತು ಸಂಸ್ಥೆಗಳ ಹೆಸರು ಇತ್ಯಾದಿ ವಿವರಗಳ ಪೂರ್ಣ ಮಾಹಿತಿಯನ್ನು ಅಂಕಿ ಅಂಶಗಳಲ್ಲಿ ವಿಧಾನಸಭಾ ಕ್ಷೇತ್ರವಾರು ಒದಗಿಸುವುದು)

(ಆ) ಈ ಪೈಕಿ ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ; ಇದರಿಂದ ಇಲಾಖೆಗೆ ಬಂದಿರುವ ಹಣವೆಷ್ಟು ;

(ಇ) ಈ ಯೋಜನೆಯು ಮಂದಗತಿಯಲ್ಲಿ ಸಾಗುತ್ತಿರುವುದಕ್ಕೆ ಕಾರಣಗಳೇನು; ಈ ಯೋಜನೆಯನ್ನು ಚುರುಕುಗೊಳಿಸಲು ಸರ್ಕಾರದ ಮುಂದಿರುವ ಕ್ರಮಗಳೇನು ?

## ಅರಣ್ಯ ಅಭಿವೃದ್ಧಿ ನಿಗಮದ ಕಾರ್ಯಕ್ರಮಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೨೧ ( ೧೯೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮದಿಂದ ಕೈಗೊಳ್ಳುತ್ತಿರುವ ಕಾರ್ಯಕ್ರಮಗಳು ಯಾವುವು ; (ಸೌಲಭ್ಯಗಳು ಹಾಗೂ ಯೋಜನೆವಾರು ಸಂಪೂರ್ಣವಾರು ವಿವರ ನೀಡುವುದು)

(ಆ) ಹೈದ್ರಾಬಾದ್–ಕರ್ನಾಟಕ ವ್ಯಾಪ್ತಿಯ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಿಂದ ಯಾವ ಯೋಜನೆಗಳನ್ನು ಕೈಗೊಳ್ಳಲಾಗಿದೆ ? (ಜಿಲ್ಲಾವಾರು, ಯೋಜನೆವಾರು ಸಂಪೂರ್ಣ ವಿವರ ನೀಡುವುದು)

## ಹಸಿರು ಗ್ರಾಮ ಯೋಜನೆಯಡಿ ಆಯ್ಕೆಯಾದ ಗ್ರಾಮಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೨೨ (೧೦೮೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ವ್ಯಾಪ್ತಿಯ ಜಿಲ್ಲೆಗಳಲ್ಲಿ ೨೦೧೫–೧೬ನೇ ಸಾಲಿನಲ್ಲಿ ತಾಲ್ಲೂಕಿಗೊಂದು ಹಸಿರು ಗ್ರಾಮ ಯೋಜನೆಯಡಿ ಯಾವ ಯಾವ ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ ; (ಗ್ರಾಮಗಳ, ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

(ಆ) ಈ ಯೋಜನೆಯಡಿಯಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುವುದು ; ಇದಕ್ಕೆ ಇರುವ ಮಾನದಂಡವೇನು; (ವಿವರ ನೀಡುವುದು)

(ಇ) ಈ ಯೋಜನೆ ಅನುಷ್ಠಾನಕ್ಕೆ ಮಂಜೂರು ಮಾಡಲಾಗಿರುವ ಅನುದಾನವೆಷ್ಟು ; ಖರ್ಚಾಗಿರುವ ಮೊತ್ತವೆಷ್ಟು ; ಬಾಕಿ ಉಳಿದಿರುವ ಮೊತ್ತ ಎಷ್ಟು ? (ಸಂಪೂರ್ಣ ವಿವರ ನೀಡುವುದು)

# ಬಂಡೀಪುರ ರಾಷ್ಟ್ರೀಯ ಉದ್ಯಾನದಲ್ಲಿ ಬೆಂಕಿ ಪಹರೆ ಗೋಪುರಗಳನ್ನು ಹೊಸದಾಗಿ ನಿರ್ಮಿಸುವ ಹಾಗೂ ಹೆಚ್ಚುವರಿ ಸಿಬ್ಬಂದಿ ನೇಮಿಸುವ ಹಾಗೂ ಬೆಂಕಿ ನಂದಿಸಲು ಸಮರ್ಪಕ ವ್ಯವಸ್ಥೆ ಮಾಡಿಕೊಳ್ಳುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೪೨೩ (೧೧೪೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಂಡೀಪುರ ರಾಷ್ಟ್ರೀಯ ಉದ್ಯಾನವನದಲ್ಲಿ ಬೆಂಕಿ ಪಹರೆ ಗೋಪುರಗಳು ಎಷ್ಟಿವೆ ; ಈ ರೀತಿಯ ಪಹರೆ ಗೋಪುರಗಳು ಹಾಳಾಗಿರುವುದು ನಿಜವೇ ;

(ಆ) ಈ ರೀತಿಯ ಪಹರೆ ಕಾಯಲು ಎಷ್ಟು ಸಿಬ್ಬಂದಿಗಳನ್ನು ಎಷ್ಟು ಪಾಳಿಯ ರೀತಿ ನೇಮಿಸಲಾಗಿದೆ ; (ವಿವರ ನೀಡುವುದು)

(ಇ) ಬೇಸಿಗೆಯಲ್ಲಿ ಕಾಡಿನಲ್ಲಿ ಬೆಂಕಿ ಕಾಣಿಸಿಕೊಳ್ಳುತ್ತಿರುವುದರಿಂದ, ಅದನ್ನು ಆರಿಸಲು ಯಾವ ರೀತಿಯ ವ್ಯವಸ್ಥೆಯಿದೆ ;

(ಈ) ಬೆಂಕಿ ರೇಖೆ ಎಂದರೇನು ; ಇದು ಕಾಡ್ಗಿಚ್ಚಿನಿಂದಾಗಿ ಹೆಚ್ಚು ಅರಣ್ಯ ನಾಶವಾಗುವುದನ್ನು ತಡೆಗಟ್ಟಲು ಸಹಕಾರಿ ಎನ್ನುವುದು ನಿಜವೇ ;

(ಉ) ಕಳೆದ ೮ ವರ್ಷಗಳಿಂದ ಬೆಂಕಿ ರೇಖೆಯನ್ನು ಸ್ಥಗಿತಗೊಳಿಸಿರುವುದು ನಿಜವೇ ; ಕಾರಣವೇನು ಹಾಗೂ ಮತ್ತೊಮ್ಮೆ ಬೆಂಕಿ ರೇಖೆ ಅನುಷ್ಠಾನದ ಬಗ್ಗೆ ಸರ್ಕಾರದ ನಿಲುವೇನು ?

## ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಪುರ ಎಂಬಲ್ಲಿನ ಕೋಟಿ ಲಿಂಗದೇವಾಲಯವನ್ನು ಅಭಿವೃದ್ಧಿಪಡಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೪೨೪ (೧೧೪೩) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನಲ್ಲಿ ಪುರ ಎಂಬಲ್ಲಿ ಕೋಟಿ ಲಿಂಗದೇವಾಲಯವು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸದರಿ ದೇವಾಲಯಕ್ಕೆ ಸಾವಿರಾರು ಭಕ್ತಾದಿಗಳು ಬಹುದೂರದಿಂದ ಬರುತ್ತಿದ್ದು, ದೇವಾಲಯಕ್ಕೆ ಬರುವವರಿಗೆ ವಸತಿ ಸೌಕರ್ಯ, ಶೌಚಾಲಯ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಮೊದಲಾದ ಮೂಲ ಸೌಕರ್ಯಗಳು ಸಮರ್ಪಕವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಸಂಬಂಧ ಮೂಲ ಸೌಕರ್ಯ ಕಲ್ಪಿಸಲು ವಿಶೇಷ ಹಣ ಬಿಡುಗಡೆ ಮಾಡಲು ಸರ್ಕಾರ ಮುಂದಾಗುವುದೇ ? (ವಿವರ ನೀಡುವುದು)

## ಚಿಕ್ಕಮಗಳೂರು ಮತ್ತು ಕೊಪ್ಪ ವಿಭಾಗದ ಅರಣ್ಯ ವ್ಯಾಪ್ತಿಯಲ್ಲಿ ಥಿನ್ನಿಂಗ್ ಹೆಸರಿನಲ್ಲಿ ಸಾವಿರಾರು ಮರಗಳನ್ನು ಕಡಿದಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೪೨೫ (೧೨೧೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅರಣ್ಯಗಳಲ್ಲಿ ಕೈಗೊಳ್ಳಲಾಗುವ ಥಿನ್ನಿಂಗ್ ಯೋಜನೆ ಎಂದರೇನು ; ಥಿನ್ನಿಂಗ್ ಕಾರಣದಿಂದಾಗಿ ಮರಗಳನ್ನು ಕಡಿಯುಲು ಕಾರಣವೇನು ;

(ಆ) ಥಿನ್ನಿಂಗ್‌ನಿಂದಾಗುವ ಅನುಕೂಲಗಳೇನು ಥಿನ್ನಿಂಗ್ ಹಾಗೂ ಅನಾನುಕೂಲಗಳೇನು ;

(ಇ) ಚಿಕ್ಕಮಗಳೂರು ಮತ್ತು ಕೊಪ್ಪ ವಿಭಾಗದ ಮೀಸಲು ಅರಣ್ಯ ಮತ್ತು ಸಾಗುವಾನಿ ನೆಡುತೋಪುಗಳಲ್ಲಿ ಬಾಳೆಹೊನ್ನೂರು ವಲಯದ ದೇವದಾಸ ಮೀಸಲು ಅರಣ್ಯ ಮತ್ತು ಇನ್ನಿತರ ಕಡೆಗಳಲ್ಲಿ ಥಿನ್ನಿಂಗ್ ಹೆಸರಿನಲ್ಲಿ ಸಾವಿರಾರು ಮರಗಳನ್ನು ಸರ್ಕಾರವು ಇತ್ತೀಚೆಗೆ ಕಡಿಯಲು ಪ್ರಾರಂಭಿಸಿರುವುದು ನಿಜವೇ ; ಸದರಿ ಅರಣ್ಯಗಳಲ್ಲಿ ಥಿನ್ನಿಂಗ್‌ಗಾಗಿ ಮರ ಕಡಿಯುಲು ಪ್ರಾರಂಭಿಸಿದ್ದು ಯಾವಾಗ ;

(ಈ) ಸದರಿ ಅರಣ್ಯಗಳಲ್ಲಿ ಎಷ್ಟು ಎಕರೆ ಜಾಗದಲ್ಲಿ ಎಷ್ಟು ಮರಗಳು ಬೆಳೆದಿವೆ ;

(ಉ) ಸದರಿ ಅರಣ್ಯಗಳಲ್ಲಿ ಎಷ್ಟು ಮರಗಳನ್ನು ಕಡಿಯಲಾಗಿದೆ ; ಯಾವ ಯಾವ ಮರಗಳನ್ನು ಕಡಿಯಲಾಗಿದೆ ;

(ಊ) ಸದರಿ ಅರಣ್ಯಗಳಲ್ಲಿ ಈಗ ಉಳಿದಿರುವ ಮರಗಳ ಸಂಖ್ಯೆ ಎಷ್ಟು ?

## ಮುಜರಾಯಿ ಇಲಾಖೆಗೆ ಸೇರಿದ ದೇವಸ್ಥಾನಗಳಿಂದ ಬಂದ ಹಣವನ್ನು ಮುಜರಾಯಿ ದೇವಸ್ಥಾನಗಳ ಅಭಿವೃದ್ಧಿಗೆ ವಿನಿಯೋಗಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೪೨೬ (೧೧೪೪) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಮುಜರಾಯಿ ಇಲಾಖೆಗೆ ಸೇರಿದ ದೇವಸ್ಥಾನಗಳಲ್ಲಿ ಎಷ್ಟು ಹಣ ಸಂಗ್ರಹವಾಗಿರುತ್ತದೆ ; (ವಿವರ ನೀಡುವುದು)

(ಆ) ಸಂಗ್ರಹವಾದ ಹಣವನ್ನು ಯಾವ ರೀತಿಯಲ್ಲಿ ಖರ್ಚು ಮಾಡಲಾಗಿದೆ ; ಸಂಕ್ಷಿಪ್ತ ವಿವರ ನೀಡುವುದು ;

(ಇ) ಮುಜರಾಯಿಗೆ ಸೇರಿದ ದೇವಾಲಯಗಳ ಅಭಿವೃದ್ಧಿಯನ್ನು ಬಿಟ್ಟು ಬೇರೆ ವಿಚಾರಗಳಿಗೆ ಸದರಿ ಹಣವನ್ನು ವ್ಯಯಿಸಲಾಗಿದೆಯೇ ; (ವಿವರ ನೀಡುವುದು)

(ಈ) ಈ ರೀತಿಯಲ್ಲಿ ಸಂಗ್ರಹವಾದ ಹಣವನ್ನು ಮುಜರಾಯಿ ದೇವಾಲಯಗಳಿಗೆ ಮಾತ್ರ ಉಪಯೋಗಿಸಲು ಸರ್ಕಾರದ ಅಭಿಪ್ರಾಯವೇನು ?

## ಚಿತ್ರದುರ್ಗ ತಾಲ್ಲೂಕಿನಲ್ಲಿ ವಿವಿಧ ಪಿಂಚಣಿ ಮಾಸಾಶನಗಳ ಬಗ್ಗೆ

**ಶ್ರೀ ಜಿ.ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೨೭ (೧೧೩೦) ಮಾನ್ಯ ಕಂದಾಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಚಿತ್ರದುರ್ಗ ಪಟ್ಟಣ ಹಾಗೂ ತಾಲ್ಲೂಕಿನಲ್ಲಿ ಸರ್ಕಾರದ ವಿವಿಧ ಪಿಂಚಣಿ ಯೋಜನೆಗಳಾದ ವೃದ್ದಾಪ್ಯ ವೇತನ, ವಿಧವಾ ವೇತನ, ಅಂಗವಿಕಲರ ವೇತನ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ?(ಮೂರು ವರ್ಷಗಳ ವರ್ಷಾವಾರು ವಿವರ ನೀಡುವುದು)

## ರಾಜ್ಯದಲ್ಲಿ ಕಂದಾಯ ಅದಾಲತ್ ನಡೆಸುತ್ತಿರುವ ಬಗ್ಗೆ

**ಶ್ರೀ ಹೆಚ್.ಎಂ.ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೨೮ (೧೧೪೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಂದಾಯ ಅದಾಲತ್‌ನ್ನು ನಡೆಸಲಾಗುತ್ತಿದೆಯೇ ;

(ಆ) ಕಂದಾಯ ಅದಾಲತ್ ನಡೆಸುವುದರಿಂದ ಸಾರ್ವಜನಿಕರಿಗೆ ಅನುಕೂಲವಾಗುತ್ತಿದೆಯೇ ;

(ಇ) ಹಾಗಿದ್ದಲ್ಲಿ, ತಾಲ್ಲೂಕುವಾರು ಕಂದಾಯ ಅದಾಲತ್‌ಗಳಿಗೆ ಬಂದಿರುವ ಅರ್ಜಿ ಎಷ್ಟು ;

(ಈ) ಅದರಲ್ಲಿ ವಿಲೇವಾರಿ ಮತ್ತು ವಿಲೇವಾರಿಯಾಗದ ಅರ್ಜಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ವಿವರ ಒದಗಿಸುವುದು)

(ಉ) ವಿಲೇವಾರಿಯಾಗದೆ ಉಳಿದಿರುವ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಸರಕಾರದಿಂದ ವಿಕಲಚೇತನರು, ವಿಧವೆಯರ ಮತ್ತು ವೃದ್ದಾಪ್ಯ ವೇತನದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೨೯ (೧೧೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರದಿಂದ ಎಷ್ಟು ವಿಕಲಚೇತನರು, ವಿಧವೆಯರು, ವೃದ್ಧಾಪ್ಯರು ಎಷ್ಟು ವೇತನ ಪಡೆಯುತ್ತಿದ್ದಾರೆ, ಇದಕ್ಕೆ ತಗಲುವ ವೆಚ್ಚವೆಷ್ಟು ; (ಒಂದು ವರ್ಷದ ಮಾಹಿತಿ ನೀಡುವುದು)

(ಆ) ಹಾವೇರಿ ಜಿಲ್ಲೆಯಲ್ಲಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು ; ಇದರಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ವೇತನ ನೀಡಲಾಗುತ್ತಿದೆ ; ಬಾಕಿ ಉಳಿದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಇ) ಅರ್ಜಿ ಕೊಟ್ಟು ಎಷ್ಟು ದಿನದೊಳಗೆ ವೇತನ ಮಂಜೂರು ಮಾಡಲಾಗುವುದು ಫಲಾನುಭವಿಗಳ ಆಯ್ಕೆಗೆ ಅನುಸರಿಸಲಾಗುತ್ತಿರುವ ಮಾನದಂಡಗಳೇನು ?

## ೨೦೧೫-೧೬ ಮತ್ತು ೨೦೧೬-೧೭ ರವರೆಗೆ ಹಾವೇರಿ ಜಿಲ್ಲೆಯಲ್ಲಿ ರೈತರ ಆತ್ಮಹತ್ಯೆ ವಿವರದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೩೦ (೧೧೧೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫-೧೬ ಮತ್ತು ೨೦೧೬-೧೭ ಫೆಬ್ರವರಿ-೨೮ ರವರೆಗೆ ಹಾವೇರಿ ಜಿಲ್ಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ವರ್ಷವಾರು ಮಾಹಿತಿ ನೀಡುವುದು)

(ಆ) ಆತ್ಮಹತ್ಯೆ ಮಾಡಿಕೊಂಡ ರೈತ ಕುಟುಂಬಗಳಿಗೆ ಎಷ್ಟು ಪರಿಹಾರ ಒದಗಿಸಲಾಗಿದೆ ; ಇನ್ನು ಎಷ್ಟು ಕುಟುಂಬಗಳಿಗೆ ಕೊಡಬೇಕಾಗಿದೆ ;

(ಇ) ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಕ್ಕೆ ಯಾವ ಯಾವ ಸವಲತ್ತುಗಳನ್ನು ಸರ್ಕಾರ ಕೊಡುತ್ತದೆ ; ಎಷ್ಟು ಕುಟುಂಬಕ್ಕೆ ಸವಲತ್ತು ನೀಡಲಾಗಿದೆ ? (ತಾಲ್ಲೂಕುವಾರು, ವರ್ಷವಾರು ಮಾಹಿತಿ ನೀಡುವುದು)

## ಹಾವೇರಿ ಜಿಲ್ಲೆಯಲ್ಲಿ ಭೂಮಾಪಕರಿಂದ ತೊಂದರೆಯಾಗುತ್ತಿರುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೩೧ (೧೧೧೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿ ಭೂಮಾಪಕರಿಂದ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಭೂಮಾಪನ (ಭೂ ಅಳತೆ) ಮಾಡಲು ಇರುವ ಮಾನ–ದಂಡಗಳೇನು ; ಮತ್ತು ಎಷ್ಟು ದಿನದೊಳಗೆ ಅಳತೆಗಳಾಗಬೇಕು ;

(ಇ) ರೈತರಿಗೆ ಅಳತೆಯಲ್ಲಿ ವ್ಯತ್ಯಾಸವಿದ್ದಾಗ ಆ ರೈತ ಏನು ಮಾಡಬೇಕು ?

## ರಾಜ್ಯದಲ್ಲಿ ಗೋಮಾಳ ಇರುವ ಜಮೀನು ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೩೨ (೧೧೫೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದ್ಯಂತ ಗೋಮಾಳ ಇರುವ ಜಮೀನು ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಈಗಾಗಲೇ ಜಾನುವಾರುಗಳಿಗೆ ಮೇಯಿಸಲಿಕ್ಕೆ ಯಾವ ಗ್ರಾಮದಲ್ಲಿ ಗೋಮಾಳ ಇರುವುದಿಲ್ಲ ; ಅಂತಹ ಗ್ರಾಮದಲ್ಲಿ ಗೋಮಾಳ ಸಲುವಾಗಿ ಜಮೀನು ಕಾಯ್ದಿರಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಇ) ಈಗಾಗಲೇ ಗೋಮಾಳಕ್ಕೆ ಮೀಸಲಾಗಿಟ್ಟಿದ ಗೋಮಾಳ ಜಮೀನನ್ನು ಒತ್ತುವರಿ ಮಾಡಿರುವುದನ್ನು ತೆರವುಗೊಳಿಸುವ ವಿಚಾರ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಯಾವಾಗ ಕ್ರಮ ಕೈಗೊಂಡು ಒತ್ತುವರಿ ತೆರವುಗೊಳಿಸಲಾಗುವುದು ? (ವಿವರ ನೀಡುವುದು)

## ಅರಣ್ಯಕ್ಕೆ ಹಾಕುತ್ತಿರುವ ಬೆಂಕಿ ಮತ್ತು ಸಮಸ್ಯೆಗೊಳಗಾದವರಿಗೆ ಪರಿಹಾರ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೩೩ (೧೦೭೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ರಾಜ್ಯದಲ್ಲಿ ಕಾಡಿಗೆ ಬೆಂಕಿ ಹಾಕುವ ಪ್ರವೃತ್ತಿ ಜಾಸ್ತಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಾಡಿನ ಬೆಂಕಿ ಆರಿಸಲು ಅನುಸರಿಸುವ ಮಾರ್ಗಸೂಚಿ ಕ್ರಮಗಳೇನು ; ಇದಕ್ಕೆ ಬೇಕಾದ ಆಧುನಿಕ ಯಂತ್ರೋಪಕರಣ ಸಲಕರಣೆ, ವಾಹನ ಸಾಮಾಗ್ರಿಗಳು ಅರಣ್ಯ ಇಲಾಖೆಯ ವ್ಯಾಪ್ತಿಯಲ್ಲಿವೆಯೇ ;

(ಇ) ಇಲ್ಲದಿದ್ದಲ್ಲಿ, ಕೇವಲ ಮಾನವ ಬಳಕೆಯಿಂದಲೇ ಬೆಂಕಿ ಆರಿಸಲು ಸಾಧ್ಯವಿದೆಯೇ ; ಇಂತಹ ಬೆಂಕಿ ಆರಿಸುವ ಸಂದರ್ಭದಲ್ಲಿ ಸಾವು–ನೋವು ಉಂಟಾಗಿರುವ ಪ್ರಕರಣ ಬೆಳಕಿಗೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಅವರಿಗೆ ಯಾವ ಪರಿಹಾರಗಳನ್ನು ನೀಡಲಾಗಿದೆ ; ಇಂತಹ ಕಾಡ್ಗಿಚ್ಚು ಸಮಸ್ಯೆಯನ್ನು ಶಾಶ್ವತವಾಗಿ ತಡೆಯಲು ಸರ್ಕಾರದ ಕ್ರಮಗಳೇನು ; (ವಿವರ ನೀಡುವುದು)

(ಉ) ಇಲ್ಲದಿದ್ದಲ್ಲಿ, ಕಾರಣಗಳೇನು ; ಇಂತಹ ಪ್ರಕರಣಗಳು ರಾಜ್ಯದಲ್ಲಿ ಈ ಹಿಂದೆ ಮತ್ತೆಲ್ಲಾದರೂ ಜರುಗಿರುವುದು ನಿಜವೇ ?

## ನೀರಾವರಿ ಯೋಜನೆಗಳ ಆಧುನೀಕರಣ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೩೪ (೧೦೬೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನ ಅಂದಾಜು ವೆಚ್ಚದಲ್ಲಿ ಘೋಷಿಸಿದಂತೆ (ಸಂಖ್ಯೆ ೭೯) ಯಾವ ಯಾವ ಕಾಲುವೆಗಳು, ನಾಲೆಗಳು, ಸೇತುವೆಗಳು, ಬ್ರಿಡ್ಜ್ ಕಂ ಬ್ಯಾರೇಜ್ ಹಾಗೂ ನೀರಾವರಿ ಯೋಜನೆಗಳ ಕಾರ್ಯಕ್ರಮಗಳನ್ನು ಆಧುನೀಕರಿಸಲಾಗಿದೆ ; ಅಥವಾ ಅನುಷ್ಠಾನಗೊಳಿಸಲಾಗಿದೆ ;

(ಆ) ವಿಶೇಷವಾಗಿ ನುಗು ಯೋಜನೆಯ ಮೇಲ್ಮಟ್ಟದ ನಾಲೆಯ ಆಧುನೀಕರಣ, ತಾರಕ ಎಡದಂಡೆ ನಾಲೆಯ ಆಧುನೀಕರಣ ಮತ್ತು ತಾರಕ ಬಲದಂಡೆ ನಾಲೆಯ ಅಭಿವೃದ್ಧಿಗೆ ಸಂಬಂಧಿಸಿದಂತೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ;

(ಇ) ಕಬಿನಿ ಬಲದಂಡೆ ವಿತರಣಾ ನಾಲೆಗಳ ಅಭಿವೃದ್ಧಿಗೆ ಸರ್ಕಾರ ಕಾರ್ಯಕ್ರಮಗಳನ್ನು ರೂಪಿಸಲಾಗಿದೆಯೇ ;

(ಈ) ಕಬಿನಿ, ನುಗು, ತಾರಕ ಅಭಿವೃದ್ಧಿಗೆ ಯೋಜನೆಯನ್ನು ರೂಪಿಸಲಾಗಿದೆಯೇ ; ರೂಪಿಸಿದ್ದರೆ ಅದರ ರೂಪುರೇಷೆಗಳೇನು ? (ಪ್ರತಿಯೊಂದು ಯೋಜನೆಗಳಿಗೆ ಮೀಸಲಿಟ್ಟ ಅನುದಾನ ಮತ್ತು ಬಳಕೆಯ ಸಂಪೂರ್ಣ ಮಾಹಿತಿಯ ವಿವರ ನೀಡುವುದು)

## ಆನೆ ಕಾರಿಡಾರ್‌ಗಳ ಪುನರ್ ಸ್ಥಾಪನೆ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)** :–

೧೪೩೫ (೧೦೭೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆನೆ ಕಾರಿಡಾರ್‌ಗಳನ್ನು ಪುನರ್ ಸ್ಥಾಪಿಸುವ ದೃಷ್ಟಿಯಿಂದ ಸರ್ಕಾರದ ವತಿಯಿಂದ ಅರಣ್ಯದಂಚಿನಲ್ಲಿರುವ ಎಷ್ಟು ಜಾಗವನ್ನು ಖರೀದಿಸಲಾಗಿದೆ ; ಖರೀದಿಸಲು ಆದ ವೆಚ್ಚ ಎಷ್ಟು ; ಎಲ್ಲೆಲ್ಲಿ ಖರೀದಿಸಲಾಗಿದೆ ;

(ಆ) ರಾಜ್ಯದಲ್ಲಿ ಆನೆ ಕಾರಿಡಾರ್‌ಗಳನ್ನು ಈಗಾಗಲೇ ಎಲ್ಲೆಲ್ಲಿ ಸ್ಥಾಪಿಸಲಾಗಿದೆ ;

(ಇ) ವಿಶೇಷವಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕನಕಪುರ ಸೇರಿದಂತೆ ಮೈಸೂರು ಜಿಲ್ಲೆ ಹಾಗೂ ಚಾಮರಾಜನಗರ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಯಾವ ಯಾವ ಕಾಡಂಚಿನಲ್ಲಿ ಆನೆ ಕಾರಿಡಾರ್‌ಗಳನ್ನು ಸ್ಥಾಪಿಸಲಾಗಿದೆ ;

(ಈ) ೨೦೧೬-೧೭ನೇ ಸಾಲಿನಲ್ಲಿ ರಾಜ್ಯಾದ್ಯಂತ ಕಾಡಾನೆ ಹಾಗೂ ಕಾಡು ಪ್ರಾಣಿಗಳ ದಾಳಿಯಿಂದ ನಾಶವಾದ ಬೆಳೆಯ ಪ್ರಮಾಣ ಮತ್ತು ಮೌಲ್ಯ ಎಷ್ಟು ?

## ತೀವ್ರತರದ ಬರ ಮತ್ತು ಪರಿಹಾರೋಪಾಯ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)** :-

೧೪೩೬ (೧೦೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ತೀವ್ರತರದ ಬರಗಾಲವು ಎದುರಾಗಿದ್ದು ಇದನ್ನು ನಿಭಾಯಿಸಲು ಸರ್ಕಾರ ಕೈಗೊಂಡ ಕಾರ್ಯಕ್ರಮ ಮತ್ತು ಯೋಜನೆಗಳೇನು :

(ಆ) ಬರಗಾಲದ ತೀವ್ರತೆಯಿಂದ ಜನ-ಜಾನುವಾರುಗಳಿಗೆ ಕುಡಿಯಲು ನೀರು ಮೇವಿಲ್ಲದೆ ಅನುಭವಿಸುತ್ತಿರುವ ಸಂಕಷ್ಟಕ್ಕೆ ಪರಿಹಾರ ಕ್ರಮಗಳೇನು ;

(ಇ) ಹಾಲಿ ರಾಜ್ಯದಲ್ಲಿರುವ ಮೇವಿನ ಪ್ರಮಾಣವೆಷ್ಟು ; ಈ ಮೇವು ರಾಜ್ಯದ ಜಾನುವಾರುಗಳಿಗೆ ಸಾಕಾಗುವುದೇ ; ಇಲ್ಲದಿದ್ದಲ್ಲಿ, ಯಾವ ಕ್ರಮಕ್ಕೆ ಸರ್ಕಾರ ಮುಂದಾಗುತ್ತದೆ ;

(ಈ) ರೈತರಿಗೆ ಅನುಕೂಲವಾಗಲು ಮೇವಿನ ದರವನ್ನು ಕಡಿಮೆ ಮಾಡಲು ನಿರ್ಧರಿಸಿದೆಯೇ ; ಈಗಿರುವ ಮೇವಿನ ದರವೆಷ್ಟು ; ಯಾವ ಪ್ರಮಾಣದ ದರವನ್ನು ಕಡಿಮೆಗೊಳಿಸಲಾಗುತ್ತದೆ ;

(ಉ) ಮೇವು ವಿತರಣೆಗೆ ಯಾವ ಕ್ರಮ ಜರುಗಿಸಿದೆ ಹಾಗೂ ರಾಜ್ಯಕ್ಕೆ ಬೇಕಾಗುವ ಮೇವಿನ ಪ್ರಮಾಣವೆಷ್ಟು ; (ಜಿಲ್ಲಾವಾರು ವಿವರಗಳನ್ನು ಒದಗಿಸುವುದು)

(ಊ) ಗೋಶಾಲೆಗಳ ನಿರ್ಮಾಣಕ್ಕೆ ಸರ್ಕಾರ ಮುಂದಾಗಿದೆಯೇ ?

## ಕೇಂದ್ರ ಸರ್ಕಾರದ ಅನುದಾನದ ಬಳಕೆ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೩೭ (೧೦೭೧) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಕಾರ್ಮಿಕ ಇಲಾಖೆಯಲ್ಲಿ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ;

(ಆ) ಯಾವ ಯಾವ ಯೋಜನೆಯಡಿ ಅಥವಾ ಯಾವ ಯಾವ ಕಾರ್ಯಕ್ರಮದಡಿ ಖರ್ಚು ಮಾಡಲಾಗಿದೆ ;

(ಇ) ೨೦೧೬–೧೭ನೇ ಸಾಲಿನಲ್ಲಿ ಕೇಂದ್ರ ಸರ್ಕಾರ ರಾಜ್ಯ ಕಾರ್ಮಿಕ ಇಲಾಖೆಗೆ ಬಿಡುಗಡೆ ಮಾಡಿರುವ ಹಣವೆಷ್ಟು ; ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಹಣವನ್ನು ಯಾವ ಯಾವ ಕಾರ್ಯಕ್ರಮಗಳಡಿ ಖರ್ಚು ಮಾಡಲಾಗಿದೆ ?

## ರುದ್ರಭೂಮಿಯಲ್ಲಿ ಶವಸಂಸ್ಕಾರಕ್ಕೆ ಇರುವ ಸಿಬ್ಬಂದಿಗಳಿಗೆ ಉತ್ತಮ ಸೌಲಭ್ಯಗಳನ್ನು ನೀಡುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೩೮ (೧೮೨೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ರುದ್ರಭೂಮಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯತಿವಾರು ವಿವರ ನೀಡುವುದು ;

(ಆ) ರಾಜ್ಯದ ರುದ್ರಭೂಮಿಗಳಲ್ಲಿ ಶವಸಂಸ್ಕಾರದ ಕೆಲಸಕ್ಕಾಗಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಖಾಯಂ ಮತ್ತು ಗುತ್ತಿಗೆ ನೌಕರರ ವಿವರ ನೀಡುವುದು ; ಇವರುಗಳಿಗೆ ನೀಡುತ್ತಿರುವ ವೇತನವೆಷ್ಟು ; (ವಿವರಗಳನ್ನು ನೀಡುವುದು) (ಕೊಡಗು ಜಿಲ್ಲೆಗೆ ಪ್ರತ್ಯೇಕ ವಿವರ ನೀಡುವುದು)

(ಇ) ಇವರನ್ನು ಡಿ ದರ್ಜೆ ನೌಕರರಂತೆ ಪರಿಗಣಿಸುವ ಸಾಧ್ಯವಿದ್ದಲ್ಲಿ ಈ ಕುರಿತಂತೆ ಸರ್ಕಾರದ ನಿಲುವೇನು ?

## ಕರ್ನಾಟಕ ಭೂ ಸುಧಾರಣಾ ಕಾಯ್ದೆ ೧೯೬೧ರಲ್ಲಿನ ಭೂ ಮಂಜೂರಾತಿ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೩೯ (೧೮೭೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಹತ್ತು ವರ್ಷಗಳಲ್ಲಿ ಕರ್ನಾಟಕ ಭೂಸುಧಾರಣಾ ಕಾಯ್ದೆ ೧೯೬೧ರಲ್ಲಿ ಮಂಜೂರು ಮಾಡಿರುವ ಭೂಮಿ ಎಷ್ಟು ; (ಕೊಡಗು ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಕಾಯ್ದೆಯಡಿ ಮಂಜೂರು ಮಾಡಲಾದ ಜಮೀನುಗಳು ಆದಿಭೋಗದಾರರ ಹೆಸರಿಗೆ ವರ್ಗಾವಣೆ ಮಾಡಿರುವ ಪ್ರಕರಣಗಳೆಷ್ಟು ; ವರ್ಗಾವಣೆ ಮಾಡದಿರುವ ಪ್ರಕರಣಗಳೆಷ್ಟು ; (ಮಾಹಿತಿ ನೀಡುವುದು)

(ಇ) ಸರ್ಕಾರಕ್ಕೆ ಶುಲ್ಕ ಪಾವತಿಸಿ, ಸರ್ವೆ ಕಾರ್ಯ ಮುಗಿಸಿದ್ದರೂ ಆರ್.ಟಿ.ಸಿಯಲ್ಲಿ "ಸರ್ಕಾರ" ಎಂಬ ಹೆಸರು ರದ್ದುಪಡಿಸಿ ಆದಿಭೋಗದಾರರ ಹೆಸರು ಸೇರ್ಪಡೆಗೊಳ್ಳದ ಪ್ರಕರಣಗಳು ಕೊಡಗು ಜಿಲ್ಲೆಯಲ್ಲಿ ಎಷ್ಟಿವೆ ; (ವಿವರ ನೀಡುವುದು) ಈ ರೀತಿ ವಿಳಂಬಕ್ಕೆ ಕಾರಣಗಳೇನು ; ಎಷ್ಟು ಸಮಯದಲ್ಲಿ ಇತ್ಯರ್ಥ ಪಡಿಸಲಾಗುವುದು ?

## ಸಾಮಾನ್ಯ ವರ್ಗದ ಕೆಲವು ಜಾತಿಗಳಿಗೆ ಜಾತಿ ದೃಢೀಕರಣ ಪತ್ರ ನೀಡದಿರುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೪೦ (೧೦೯೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನಾಯರ್, ಬ್ರಾಹ್ಮಣ, ಮೊದಲಿಯಾರ್,ತಮಿಳರ್, ಪದಾರ್ಥಿ, ನಂಬಿಯಾರ್ ಹಾಗೂ ಕೆಂಬಟ್ಟಿ ಜನಾಂಗದವರಿಗೆ ಜಾತಿ ದೃಢೀಕರಣ ಪತ್ರವನ್ನು ಎಲ್ಲಾ ತಹಶೀಲ್ದಾರರ ಕಛೇರಿಯಲ್ಲಿ ನೀಡದಿರಲು ಕಾರಣವೇನು ;

(ಆ) ಸಕಾಲ ಕೇಂದ್ರದ ಸಾಫ್ಟ್‌ವೇರ್‌ನಲ್ಲಿ ಈ ಜಾತಿಗಳ ಹೆಸರು ನಮೂದಾಗದಿರಲು ಕಾರಣಗಳೇನು ; ನಮೂದು ಮಾಡಲು ಇರುವ ತೊಡಕುಗಳೇನು ; (ಮಾಹಿತಿ ನೀಡುವುದು)

(ಇ) ಜಾತಿ ದೃಢೀಕರಣ ಪತ್ರ ನೀಡದೇ ಇರುವುದರಿಂದ ಇವರುಗಳು ಸರ್ಕಾರದ ಸೌಲಭ್ಯಗಳಿಂದ ವಂಚಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಿಪಡಿಸಲು ಯಾವ ಕ್ರಮ ವಹಿಸಲಾಗುವುದು ?

## ಕಾವೇರಿ ನದಿ ನೀರಿಗೆ ನಗರ ಪಟ್ಟಣಗಳ ಕಲುಷಿತ ನೀರು ಸೇರಿ ಹಾಳಾಗದಂತೆ ತಡೆಯುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೪೧ (೧೮೦೫) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾವೇರಿ ನದಿ ಉಗಮ ಸ್ಥಾನದಿಂದ ನಮ್ಮ ರಾಜ್ಯದಲ್ಲಿ ಹರಿಯುವ ಒಟ್ಟು ಉದ್ದ ಎಷ್ಟು ; ಕಾವೇರಿ ನದಿ ಹರಿಯುವ ದಂಡೆಯಲ್ಲಿರುವ ಪಟ್ಟಣ, ನಗರಗಳೆಷ್ಟು ; (ಹೆಸರುಗಳೊಂದಿಗೆ ವಿವರ ನೀಡುವುದು)

(ಆ) ಈ ಪಟ್ಟಣ, ನಗರಗಳಿಂದ ಕಲುಷಿತ ನೀರು ಕಾವೇರಿ ನದಿಗೆ ಹರಿಯದಂತೆ ತಡೆಯಲು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಕಾವೇರಿ ನದಿಯ ಪುನಃಶ್ಚೇತನ ಮಾಡಿ ಹೆಚ್ಚಿನ ನೀರು ಹರಿಯುವಂತೆ ಮಾಡಲು, ನದಿ ಪಾತ್ರದಲ್ಲಿ ಒತ್ತುವರಿಯನ್ನು ತೆರವುಗೊಳಿಸುವುದು ಹಾಗೂ ಈ ಪ್ರದೇಶದಲ್ಲಿ ಗಿಡಗಳನ್ನು ನೆಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಇದಕ್ಕಾಗಿ ಮೀಸಲಿಟ್ಟಿರುವ ಅನುದಾನ ಎಷ್ಟು ; ಕಾವೇರಿ ನದಿ ಪುನಃಶ್ಚೇತನದ ಕುರಿತು ಸರ್ಕಾರದ ನಿಲುವೇನು ?

## ಅರಣ್ಯದಲ್ಲಿನ ವನ್ಯ ಜೀವಿಗಳಿಗೆ ಮೇವು ಹಾಗೂ ನೀರಿನ ಅಭಾವ ಉಂಟಾಗಿರುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೪೨ (೧೧೦೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಚಾಮರಾಜನಗರ ಜಿಲ್ಲೆಗಳಲ್ಲಿ ಬರುವ ಮಹದೇಶ್ವರ, ಬಿ.ಆರ್.ಟಿ., ನಾಗರಹೊಳೆ ಮತ್ತು ಬಂಡೀಪುರ ರಾ. ಉದ್ಯಾನವನಗಳ ಅರಣ್ಯಗಳಲ್ಲಿ ವನ್ಯ ಜೀವಿಗಳಿಗೆ ಕುಡಿಯುವ ನೀರಿನ ಅಭಾವ, ಆನೆಗಳಿಗೆ ಹಸಿರು ಮೇವಿನ ಅಭಾವ ತಲೆದೋರಿದ್ದು, ಅವು ಕಾಡಂಚಿನ ಗ್ರಾಮಗಳತ್ತ ಹೆಚ್ಚಿನ ಸಂಖ್ಯೆಯಲ್ಲಿ ವಲಸೆ ಬರುತ್ತಿದ್ದು, ಇದರಿಂದ ವನ್ಯ ಜೀವಿ ಮತ್ತು ಮಾನವ ಸಂಘರ್ಷ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳೆದ ಮೂರು ತಿಂಗಳಲ್ಲಿ ಇಂತಹ ಎಷ್ಟು ಪ್ರಕರಣಗಳು ವರದಿಯಾಗಿವೆ ;

(ಆ) ವನ್ಯ ಜೀವಿಗಳಿಗೆ ಪ್ರಮುಖವಾಗಿ ನೀರನ್ನು ಒದಗಿಸಲು, ಅರಣ್ಯದೊಳಗಿನ ಕೆರೆಕಟ್ಟೆ ಬಾಂದಾರಗಳಿಗೆ ನೀರನ್ನು ತುಂಬಿಸಲು ಮಾಡಿರುವ ವ್ಯವಸ್ಥೆಗಳೇನು ; ಎಷ್ಟು ಬೋರ್‌ವೆಲ್‌ಗಳನ್ನು ತೋಡಿ ಸೋಲಾರ್ ಪಂಪ್ ಮೂಲಕ ನೀರನ್ನು ಒದಗಿಸುವ ವ್ಯವಸ್ಥೆ ಮಾಡಲಾಗಿದೆ. ಇನ್ನೂ ಎಷ್ಟು ಅಗತ್ಯ ಇದೆ, ನೀರಿಗಾಗಿ ಬೇರೆ ಯಾವ ರೀತಿ ವ್ಯವಸ್ಥೆ ಮಾಡಲಾಗಿದೆ ; (ವಿವರ ಒದಗಿಸುವುದು) ಇದಕ್ಕಾಗಿ ಮಾಡಿರುವ ವೆಚ್ಚ ಎಷ್ಟು ; ಈ ಕಾರ್ಯದಲ್ಲಿ ಸಾರ್ವಜನಿಕರು ಮತ್ತು ಸಂಘ ಸಂಸ್ಥೆಗಳ ನೆರವನ್ನು ಪಡೆದುಕೊಳ್ಳಲಾಗಿದೆಯೇ ? (ವಿವರ ಒದಗಿಸುವುದು)

## ಅರಣ್ಯಕ್ಕೆ ಮೇಯಲು ಜಾನುವಾರುಗಳನ್ನು ಬಿಡುವ ಬಗ್ಗೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೪೩ (೧೧೦೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅರಣ್ಯಗಳಿಗೆ ಮೇಯಲು ಕಾಡಂಚಿನ ಗ್ರಾಮಗಳಲ್ಲಿ ವಾಸಿಸುವವರ ಜಾನುವಾರುಗಳನ್ನು ಬಿಡಬೇಕೆಂದು ಈಚೆಗೆ ಒಂದು ಭಾರೀ ಸಾರ್ವಜನಿಕ ಅಭಿಯಾನವು ನಡೆದಿರುವುದು, ಈ ಮೂಲಕ ಸರ್ಕಾರಕ್ಕೆ ಮನವಿ ಮಾಡಿರುವುದು, ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಷ್ಟ್ರೀಯ ಉದ್ಯಾನವನಗಳಿಗೆ ಮಾತ್ರ ಜಾನುವಾರುಗಳನ್ನು ಬಿಡಬಾರದೆಂದು, ಉಳಿದಂತೆ ಸಾಮಾನ್ಯ ಅರಣ್ಯಗಳಿಗೆ ಜಾನುವಾರುಗಳನ್ನು ಬಿಡಬಹುದೆಂದು ೨೦೦೬ರ ಅರಣ್ಯ ಕಾಯಿದೆಯಲ್ಲಿ ಅವಕಾಶ ಇದೆಯೇ ; (ಕಾಯಿದೆಯ ನಿಯಮಗಳ ಪ್ರಕಾರ ವಿವರ ಒದಗಿಸುವುದು)

(ಇ) ಮೇವಿನ ತೀವ್ರ ಅಭಾವ ತಲೆದೋರಿರುವ ಹಿನ್ನಲೆಯಲ್ಲಿ, ಕಾಡಂಚಿನ ಗ್ರಾಮಗಳ ಜನರು, ಅರಣ್ಯವಾಸಿಗಳು, ತಮ್ಮ ಜಾನುವಾರುಗಳನ್ನು ಅರಣ್ಯದಲ್ಲಿ ಮೇಯಿಸಲು ಅವಕಾಶ ಕಲ್ಪಿಸಲಾಗುವುದೇ ; ಜಾನುವಾರುಗಳು ಮೇಯುವುದರಿಂದ ಕಾಡು ನಾಶವಾಗುತ್ತದೆಯೇ ? (ವಿವರ ಒದಗಿಸುವುದು)

## ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಯ ಕಾಮಗಾರಿಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೪೪ (೧೨೧೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಯಲ್ಲಿ ಕಳೆದ ೩ ವರ್ಷಗಳಿಂದ ನಡೆಸಿದ ಕಾಮಗಾರಿಗಳು ಯಾವುವು ; (ವಿವರ ನೀಡುವುದು)

(ಆ) ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಯಲ್ಲಿ, ಅರ್ಕಾವತಿ ಪುನಃಶ್ಚೇತನ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆಯೇ ; (ವಿವರ ನೀಡುವುದು)

(ಇ) ಈ ಕಾಮಗಾರಿಯನ್ನು ಎಷ್ಟು ಹಂತದಲ್ಲಿ ವರ್ಗೀಕರಿಸಲಾಗಿದೆ ;

(ಈ) ಈ ಕಾಮಗಾರಿಗೆ ಬಿಡುಗಡೆಯಾದ ಹಣವೆಷ್ಟು ; ಅದರಲ್ಲಿ ಉಪಯೋಗಿಸಿದ ಹಣವೆಷ್ಟು ; (ವಿವರ ನೀಡುವುದು)

(ಉ) ಅರ್ಕಾವತಿ ಪುನಃಶ್ಚೇತನ ಕಾಮಗಾರಿಗೆ ಟೆಂಡರ್‌ನ್ನು ಯಾವಾಗ ನೀಡಲಾಗಿದೆ ; ಕಾಮಗಾರಿಯ ಆರಂಭದಿಂದ ಅಂತ್ಯದವರೆಗೆ ಖರ್ಚಾದ ಹಣವೆಷ್ಟು ; (ವಿವರ ನೀಡುವುದು)

(ಊ) ಆರ್ಕಾವತಿ ಪುನಶ್ಚೇತನ ಉದ್ದೇಶವೇನು ; ಇದರಿಂದಾಗುವ ಅನುಕೂಲಗಳೇನು ?

## ಕೆರೆ ಸಂಜೀವಿನಿ–೨ ಯೋಜನೆಯ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೪೫ (೧೨೧೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) "ಕೆರೆ ಸಂಜೀವಿನಿ–೨" ಯೋಜನೆಯಲ್ಲಿ ರಾಜ್ಯ ಸರ್ಕಾರ ಎಷ್ಟು ತಾಲ್ಲೂಕುಗಳ ಕೆರೆ ಹೂಳೆತ್ತಲು ನಿರ್ಧರಿಸಿದೆ ;

(ಆ) ಪ್ರತಿ ಕೆರೆ ಹೂಳೆತ್ತಲು ತಗುಲುವ ವೆಚ್ಚವೆಷ್ಟು ;

(ಇ) ಮೊದಲು ಹಂತದ ಕೆರೆ ಸಂಜೀವಿನಿ–೧ ಯೋಜನೆಯಲ್ಲಿ ಒಟ್ಟು ಎಷ್ಟು ಕೆರೆಗಳನ್ನು ಅಭಿವೃದ್ಧಿಪಡಿಸಲಾಗಿದೆ ; ಅವುಗಳಲ್ಲಿ ಎಷ್ಟು ಕೆರೆಗಳ ಕಾಮಗಾರಿ ಪ್ರತಿಯಲ್ಲಿದೆ ; ಎಷ್ಟು ಕೆರೆಗಳ ಪುನಶ್ಚೇತನ ಕಾರ್ಯ ಆರಂಭವಾಗಿಲ್ಲ ; (ಜಿಲ್ಲಾವಾರು ವಿವರ ನೀಡುವುದು)

(ಈ) ಕೆರೆಗಳ ಪುನಶ್ಚೇತನ ಕಾರ್ಯ ಆರಂಭವಾಗಿದೆ ಇರುವ ಎಲ್ಲಾ ಕಾಮಗಾರಿಗಳನ್ನು ಆರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಮೇವು ನೀರಿಲ್ಲದೆ ದನಕರುಗಳು ಸಂಕಷ್ಟಕ್ಕೆ ಸಿಲುಕಿರುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೪೬ (೧೦೫೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಆವರಿಸಿರುವ ಬರಗಾಲದಿಂದಾಗಿ ಮೇವು, ನೀರಿಲ್ಲದೆ ದನಕರುಗಳು ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ದನಕರುಗಳಿಗೆ ಮೇವು ಒದಗಿಸಲು ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ ; ಮೇವನ್ನು ಯಾವ ಯಾವ ಮೂಲದಿಂದ ಒದಗಿಸಲಾಗಿದೆ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಎಷ್ಟು ಮೇವು ಬ್ಯಾಂಕ್ ಗೋಶಾಲೆ ಆರಂಭಿಸಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಮೇವಿಲ್ಲದೆ ರಾಸುಗಳು ಸಾಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಮುಜರಾಯಿ ದೇವಾಲಯಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೪೭ (೧೨೧೫) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಮುಜರಾಯಿ ದೇವಾಲಯಗಳ ಸಂಖ್ಯೆ ಎಷ್ಟು ; ಎಲ್ಲೆಲ್ಲಿ ; (ವಿಳಾಸ ಮತ್ತು ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ದೂರವಾಣಿ ಸಂಖ್ಯೆಗಳ ವಿವರ ನೀಡುವುದು)

(ಆ) ಈ ದೇವಾಲಯಗಳಿಂದ ವಾರ್ಷಿಕವಾಗಿ ಬರುತ್ತಿರುವ ಆದಾಯವೆಷ್ಟು ;

(ಇ) ಈ ಆದಾಯವನ್ನು ಯಾವುದಕ್ಕಾಗಿ ಉಪಯೋಗಿಸಲಾಗುತ್ತದೆ ? (ವಿವರ ನೀಡುವುದು)

## ಬಸವನಗುಡಿ ಕಾರಂಜಿ ಆಂಜನೇಯ ಸ್ವಾಮಿ ದೇವಾಲಯದ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೪೮ (೧೨೧೨) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಬಸವನಗುಡಿ ವಿಧಾನಸಭಾ ಕ್ಷೇತ್ರದ ಪ್ರಸಿದ್ಧ ಶ್ರೀ ಕಾರಂಜಿ ಆಂಜನೇಯ ಸ್ವಾಮಿ ದೇವಾಲಯದಲ್ಲಿ ಸಮುದಾಯ ಭವನ ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಸಮುದಾಯ ಭವನ ನಿರ್ಮಿಸಲು ತಗಲುವ ವೆಚ್ಚವೆಷ್ಟು ;

(ಇ) ಈ ಸಮುದಾಯ ಭವನವು ಪೂರ್ಣಗೊಳ್ಳುವುದು ಯಾವಾಗ ?

(ಈ) ಈ ದೇವಾಲಯದಲ್ಲಿ ಎಷ್ಟು ಜನ ಅರ್ಚಕರು ಮತ್ತು ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ; ಅರ್ಚಕರು ಮತ್ತು ಸಿಬ್ಬಂದಿಗಳ ವೇತನ ಮತ್ತು ಇತರೆ ವಿವರಗಳನ್ನು ಸಂಪೂರ್ಣವಾಗಿ ತಿಳಿಸುವುದು ;

(ಉ) ಈ ಕ್ಷೇತ್ರದಲ್ಲಿ ಕಾರಂಜಿಯನ್ನು ನಿರ್ಮಾಣ ಮಾಡುವ ಕಲ್ಪನೆ ಇದೆಯೇ ?

## ಮಂಡ್ಯದಲ್ಲಿ ನಿರ್ಮಾಣವಾಗುತ್ತಿರುವ ಒಳಾಂಗಣ ಕ್ರೀಡಾಂಗಣದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೪೪೯ (೧೦೮೫) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ನಗರದಲ್ಲಿ ನಿರ್ಮಾಣವಾಗುತ್ತಿರುವ ಒಳಾಂಗಣ ಕ್ರೀಡಾಂಗಣದ ಅಂದಾಜು ಮೊತ್ತ ಎಷ್ಟು ;

(ಆ) ಟೆಂಡರ್‌ನ್ನು ಯಾವಾಗ ಕರೆಯಲಾಗಿದೆ ; ಟೆಂಡರ್ ಪಡೆದ ಗುತ್ತಿಗೆದಾರರು ಯಾರು ;

(ಇ) ಈ ಕಾಮಗಾರಿ ಆರಂಭವಾದ ದಿನಾಂಕ ಯಾವುದು ;

(ಈ) ಈ ಕ್ರೀಡಾಂಗಣದ ಕಾಮಗಾರಿಯು ಮಂದಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ತ್ವರಿತವಾಗಿ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ಯಾವಾಗ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ?

## ಕೆ.ಆರ್.ಎಸ್. ನ ವಿ.ಸಿ. ನಾಲಾಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೧೪೫೦ (೧೦೮೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆ.ಆರ್.ಎಸ್. ಅಚ್ಚುಕಟ್ಟಿನ ವಿ.ಸಿ. ನಾಲಾ–ಕಡೆಯ ಅಚ್ಚುಕಟ್ಟು ಪ್ರದೇಶದ ನಾಲೆ ಮತ್ತು ಉಪನಾಲೆಗಳ ಆಧುನೀಕರಣ ಆಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಕಾಮಗಾರಿಗಳನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು?

## ಅಸಂಘಟಿತ ಕಾರ್ಮಿಕರ ಸವಲತ್ತುಗಳ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೪೫೧ (೧೦೮೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಸಂಘಟಿತ ಕಾರ್ಮಿಕರ ವಿವಿಧ ಸವಲತ್ತುಗಳ ಪರಿಹಾರ ವಿತರಣೆಗೆ ಆನ್‌ಲೈನ್ ಸ್ಪರ್ಶ ನೀಡಲು ಸರ್ಕಾರ ಉದ್ದೇಶಿಸಿದೆಯೇ;

(ಆ) ಇದಕ್ಕಾಗಿ 'ಕಾರ್ಮಿಕ' ಎಂಬ ಸಾಫ್ಟ್‌ವೇರ್ ಅಭಿವೃದ್ಧಿಪಡಿಸಲಾಗಿದೆಯೇ; ಇದರ ಸಂಪೂರ್ಣ ವಿವರಗಳನ್ನು ನೀಡುವುದು;

(ಇ) ಇದರಿಂದ ಕಾರ್ಮಿಕರಿಗೆ ಆಗುವ ಅನುಕೂಲಗಳೇನು; ಈ ಯೋಜನೆಯನ್ನು ಯಾವಾಗಿನಿಂದ ಜಾರಿಗೆ ತರಲಾಗುತ್ತದೆ?

## ಚಿತ್ರದುರ್ಗ ತಾಲ್ಲೂಕು ಗೋನೂರು ಕೆರೆಯಲ್ಲಿ ಸಾವಿರಾರು ಮೀನುಗಳು ಸಾವನ್ನಪ್ಪಿರುವ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೪೫೨ (೧೦೮೧) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ತಾಲ್ಲೂಕಿನ ಗೋನೂರು ಕೆರೆಯಲ್ಲಿ ಸಾವಿರಾರು ಮೀನಿನ ಮರಿಗಳು ಸಾವನ್ನಪ್ಪಿರುವುದು ನಿಜವೇ;

(ಆ) ಈ ರೀತಿ ಮೀನಿನ ಮರಿಗಳು ಸಾವನ್ನಪ್ಪಲು ಕಾರಣಗಳೇನು;

(ಇ) ಈ ರೀತಿ ಮೀನಿನ ಮರಿಗಳು ಮುಂದಿನ ದಿನಗಳಲ್ಲಿ ಸಾವನ್ನಪ್ಪದಿರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಮೀನಿನ ಮರಿಗಳು ಸಾವನ್ನಪ್ಪಿರುವುದರಿಂದ ಪರಿಸರದ ಮೇಲಾಗಿರುವ ಪ್ರತಿಕೂಲ ಪರಿಣಾಮಗಳೇನು?

## ಸೊರಬ ತಾಲ್ಲೂಕಿನ ರೇಣುಕಾಂಬ ದೇವಸ್ಥಾನದ ಆದಾಯ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೪೫೩ (೧೨೨೭) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೧೫ ವರ್ಷಗಳಿಂದ ಶಿವಮೊಗ್ಗ ಜಿಲ್ಲೆ ಸೊರಬ ತಾಲ್ಲೂಕಿನ ಚಂದ್ರಗುತ್ತಿಯಲ್ಲಿರುವ ಶ್ರೀ ರೇಣುಕಾಂಬ ದೇವಸ್ಥಾನದಿಂದ ಬಂದಿರುವ ಆದಾಯ ಎಷ್ಟು;

(ಆ) ಕಳೆದ ೧೫ ವರ್ಷಗಳಿಂದ ಈ ದೇವಸ್ಥಾನದಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳು ಯಾವುವು; ಇದಕ್ಕಾಗಿ ವೆಚ್ಚ ಮಾಡಿರುವ ವೆಚ್ಚ ಎಷ್ಟು; (ವರ್ಷವಾರು ವಿವರ ನೀಡುವುದು)

(ಇ) ದೇವಸ್ಥಾನಕ್ಕೆ ಭಕ್ತಾದಿಗಳು ಅರ್ಪಿಸುವ ಕಾಣಿಕೆ (ಬೆಲ್ಲ, ಅಕ್ಕಿ ಇತ್ಯಾದಿ)ಗಳನ್ನು ಹರಾಜು ಹಾಕದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಹರಾಜು ಹಾಕಲು ಕೈಗೊಂಡಿರುವ ಕ್ರಮಗಳೇನು;

(ಈ) ದೇವಸ್ಥಾನಕ್ಕೆ ಬರುವ ಭಕ್ತಾದಿಗಳಿಗೆ ತಂಗಲು ಛತ್ರ, ಊಟದ ಹಾಲ್ ಹಾಗೂ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ?

## ಮಹಾದಾಯಿ ನ್ಯಾಯಮಂಡಳಿ ಮತ್ತು ಪರಿಹಾರ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು):–**

೧೪೫೪ (೧೦೭೩) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಾದಾಯಿ ನ್ಯಾಯಮಂಡಳಿಯ ಅಸ್ತಿತ್ವಗೊಂಡಿದ್ದು ಯಾವಾಗ; ಅದರ ಕಾರ್ಯವ್ಯಾಪ್ತಿ ಏನು; (ವಿವರ ನೀಡುವುದು)

(ಆ) ನ್ಯಾಯಮಂಡಳಿ ಮುಂದೆ ಈ ನದಿ ನೀರಿನ ವ್ಯಾಜ್ಯ ಯಾವ ಹಂತದಲ್ಲಿದೆ; ಮಂಡಳಿಯಿಂದ ನ್ಯಾಯ ಪಡೆಯಲು ಸರ್ಕಾರ ಇದುವರೆಗೂ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ಮಹಾದಾಯಿ ಅಂತರರಾಜ್ಯ ಜಲ ವಿವಾದವನ್ನು ನ್ಯಾಯಾಧೀಕರಣದ ಹೊರಗೆ ಮೂರು ರಾಜ್ಯಗಳ ಮುಖ್ಯ ಮಂತ್ರಿಗಳು ಮಾತುಕತೆ ಮೂಲಕ ಪರಿಹರಿಸಿಕೊಳ್ಳಲು ನಡೆದಿರುವ ಪ್ರಯತ್ನಗಳು ಯಾವ ಹಂತದಲ್ಲಿವೆ;

(ಈ) ಈ ಸಮಸ್ಯೆಯನ್ನು ಪರಿಹರಿಸಲ್ಪಡುವುದು ಯಾವಾಗ? (ವಿವರ ನೀಡುವುದು)

## ಮಹಾದಾಯಿ ನದಿ ಪಾತ್ರ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು):–**

೧೪೫೫ (೧೦೭೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಾದಾಯಿ ನದಿ ಪಾತ್ರದ ವಿಸ್ತೀರ್ಣವೆಷ್ಟು; ಅದರಲ್ಲಿ ಕರ್ನಾಟಕ, ಮಹಾರಾಷ್ಟ್ರ ಹಾಗೂ ಗೋವಾ ರಾಜ್ಯಗಳಿಗೆ ಸೇರಿದ ವಿಸ್ತೀರ್ಣ ಪ್ರದೇಶವೆಷ್ಟು; (ರಾಜ್ಯವಾರು ವಿವರ ನೀಡುವುದು)

(ಆ) ಈ ರಾಜ್ಯವಾರು ಪ್ರದೇಶಗಳಲ್ಲಿ ವಾಡಿಕೆ ಮಳೆಯಂತೆ ಪ್ರತಿ ವರ್ಷ ಲಭ್ಯವಾಗುವ ನೀರಿನ ಪ್ರಮಾಣ ಎಷ್ಟು;

(ಇ) ಕಳಸಾ ಬಂಡೂರಿಯ ಎಷ್ಟು ಪ್ರಮಾಣದ ನೀರನ್ನು ಕುಡಿಯುವ ನೀರಿನ ಉದ್ದೇಶಕ್ಕಾಗಿ ಹಾಗೂ ಕೃಷಿ ಮತ್ತು ಇನ್ನಿತರೆ ಬಾಬ್ತುಗಳಿಗೆ ಉಪಯೋಗಿಸಿಕೊಳ್ಳಲು ಸರ್ಕಾರ ಉದ್ದೇಶಿಸಿದೆಯೇ; (ವಿವರ ನೀಡುವುದು)

(ಈ) ಈ ಉದ್ದೇಶವನ್ನು ಕಾರ್ಯಗತಗೊಳಿಸಲು ಸರ್ಕಾರ ಇಲ್ಲಿಯವರೆಗೂ ಕೈಗೊಂಡಿರುವ ಯೋಜನೆಗಳು ಮತ್ತು ಪ್ರಯತ್ನಗಳು ಯಾವುವು; (ವಿವರ ನೀಡುವುದು)

(ಉ) ಆ ಪ್ರಯತ್ನಗಳು ಮತ್ತು ಉದ್ದೇಶಗಳು ಕಾರ್ಯರೂಪಕ್ಕೆ ಬರದಿರಲು ಕಾರಣಗಳೇನು?

## ಸ.ನಂ. ೯೭ ಮತ್ತು ೯೮ ಜಮೀನಿನ ಭೂ ಸ್ವಾಧೀನದ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು):–**

೧೪೫೬ (೧೦೭೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ (ಜಿ), ಮುದ್ದೇಬಿಹಾಳ ತಾಲ್ಲೂಕಿನ ಮುದ್ದೇಬಿಹಾಳ ಸ.ನಂ. ೯೭ ಮತ್ತು ೯೮ ರಲ್ಲಿ ಇರುವ ಒಟ್ಟು ಜಮೀನಿನ ವಿಸ್ತೀರ್ಣವೆಷ್ಟು; ಸದರಿ ಸರ್ವೆ ನಂಬರ್‌ನ ಪಹಣಿಯಲ್ಲಿ ನಮೂದಿಸಿರುವ ಮಾಲೀಕರ್‍ಯಾರು; (ಪೂರ್ಣ ವಿವರ ನೀಡುವುದು)

(ಆ) ಈ ಎರಡು ಸರ್ವೆ ನಂಬರ್‌ಗಳಲ್ಲಿ ಜಮೀನನ್ನು ಸಾರ್ವಜನಿಕ ಉಪಯೋಗಕ್ಕಾಗಿ ಭೂಸ್ವಾಧೀನ ಪ್ರಕ್ರಿಯೆ ಮೂಲಕ ತೆಗೆದುಕೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಭೂಸ್ವಾಧೀನ ಮಾಡಿಕೊಂಡಿರುವ ಜಮೀನಿನ ವಿಸ್ತೀರ್ಣವೆಷ್ಟು; ಮತ್ತು ಭೂಸ್ವಾಧೀನ ಮಾಡಿಕೊಂಡಿದ್ದು ಯಾವಾಗ;

(ಇ) ಮೇಲಿನ ರೀತಿ ಭೂಸ್ವಾಧೀನ ಪ್ರಕ್ರಿಯೆ ಮೂಲಕ ಸ.ನಂ. ೯೭, ೯೮ ರಲ್ಲಿ ವಶಪಡಿಸಿಕೊಂಡಂತೆ ಸಾರ್ವಜನಿಕ ಉಪಯೋಗಕ್ಕೆ ಬಳಸಿಕೊಳ್ಳಲಾದ ಜಮೀನಿನ ವಿಸ್ತೀರ್ಣ ಎಷ್ಟು; ಬಳಸಿಕೊಂಡಿದ್ದರೆ, ಅದರ ಉದ್ದೇಶವೇನು; (ಪೂರ್ಣ ವಿವರ ನೀಡುವುದು)

(ಈ) ಭೂಸ್ವಾಧೀನಪಡಿಸಿಕೊಂಡು ಆ ಪೈಕಿ ಬಳಸಿಕೊಳ್ಳದೆ ಇರುವ ಜಮೀನಿನ ವಿಸ್ತೀರ್ಣವೆಷ್ಟು; ಅದನ್ನು ಭೂಮಾಲೀಕರಿಗೆ ಹಿಂದಿರುಗಿಸಲಾಗಿದೆಯೇ ಹಿಂದಿರುಗಿಸದಿದ್ದರೆ, ಅದಕ್ಕೆ ಕಾರಣಗಳೇನು?

## ಮುಜರಾಯಿ ದೇವಸ್ಥಾನಗಳ ಅಭಿವೃದ್ಧಿ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೫೭ (೧೧೯೩) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ದೇವಸ್ಥಾನಗಳ ಸಂಖ್ಯೆ ಎಷ್ಟು; ಅಭಿವೃದ್ಧಿಗೊಳಿಸುತ್ತಿರುವ ದೇವಸ್ಥಾನಗಳ ಕಾಮಗಾರಿ ಮಂಜೂರು ಆಗಿದ್ದು ಯಾವಾಗ; (ತಾಲ್ಲೂಕುವಾರು ವಿವರ ನೀಡುವುದು)

(ಆ) ದೇವಸ್ಥಾನಗಳ ಕಾಮಗಾರಿಗಳಿಗೆ ನೀಡಿರುವ ಅನುದಾನ ಎಷ್ಟು; ಇಲ್ಲಿಯವರೆಗೆ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿದೆ; ಉಳಿದ ದೇವಸ್ಥಾನಗಳ ಕಾಮಗಾರಿಗಳು ಪೂರ್ಣಗೊಳ್ಳುವುದು ಯಾವಾಗ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೫೮ (೧೧೯೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಇರುವ ಸಿಬ್ಬಂದಿಗಳ ನೇಮಕಾತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಬೀದರ್ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಅಧಿಕಾರಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ಶೌಚಾಲಯದ ವ್ಯವಸ್ಥೆ ಇದೆಯೇ; (ಮಾಹಿತಿ ನೀಡುವುದು) ಇಲ್ಲದಿದ್ದರೆ, ಶೌಚಾಲಯದ ನಿರ್ಮಾಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಶೌಚಾಲಯದ ಜಾಗೃತಿಗಾಗಿ ತಾಲ್ಲೂಕು ಆಡಳಿತ ಹಾಗೂ ಜಿಲ್ಲಾಡಳಿತದಿಂದ ಖರ್ಚಾದ ಅನುದಾನ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಕಾರ್ಮಿಕ ಇಲಾಖೆಗೆ ಉದ್ಯೋಗಕ್ಕಾಗಿ ಅರ್ಜಿ ಬಂದ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೫೯ (೧೧೯೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ನಿರುದ್ಯೋಗ ಕಾರ್ಮಿಕರು ಉದ್ಯೋಗಕ್ಕಾಗಿ ಕಾರ್ಮಿಕ ಇಲಾಖೆಗೆ ಅರ್ಜಿ ಸಲ್ಲಿಸಿದ್ದಾರೆ; ಆ ಪೈಕಿ ಅರ್ಜಿಗಳನ್ನು ಪರಿಶೀಲಿಸಿ ಎಷ್ಟು ಕಾರ್ಮಿಕರಿಗೆ ಉದ್ಯೋಗ ನೀಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಾರ್ಮಿಕರ ಕೆಲಸ ಮಾಡುತ್ತಿರುವ ವೇಳೆ ಸಾವನ್ನಪ್ಪಿದ ಹಾಗೂ ಅಪಘಾತಕ್ಕೀಡಾದ ಪ್ರಕರಣಗಳ ಸಂಖ್ಯೆ ಎಷ್ಟು;

(ಇ) ಸಾವನ್ನಪ್ಪಿದ ಹಾಗೂ ಅಪಘಾತಕ್ಕೀಡಾದ ಪ್ರಕರಣಗಳಿಗೆ ಸರ್ಕಾರದಿಂದ ಪರಿಹಾರ ನೀಡಲಾಗಿದೆಯೇ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ರೆಸಾರ್ಟ್‌ಗಳಿಗಾಗಿ ಭೂಪರಿವರ್ತಸಿ ಮಾಡಿರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೬೦ (೧೨೨೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ/ಉದ್ದಿಮೆ ನಡೆಸುತ್ತಿರುವ ಹಾಗೂ ನಿರ್ಮಾಣ ಹಂತದಲ್ಲಿರುವ ರೆಸಾರ್ಟ್‌ಗಳ ಕಟ್ಟಡವನ್ನು ಸರ್ಕಾರಿ ಜಾಗ/ಭೂಮಿಯಲ್ಲಿ ಕಟ್ಟಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು)

(ಆ) ಕಟ್ಟಿದ್ದಲ್ಲಿ, ಸರ್ಕಾರಿ ಜಾಗವನ್ನು/ಭೂಮಿಯನ್ನು ವಾಣಿಜ್ಯ ಉದ್ದೇಶಕ್ಕಾಗಿ ಖಾಸಗಿಯುವರಿಗೆ ಭೂಪರಿವರ್ತನೆ ಮಾಡಿಕೊಡಬಹುದೇ; (ನಿಯಮಾವಳಿಗಳ ಪ್ರತಿ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ/ಉದ್ದಿಮೆ ನಡೆಸುತ್ತಿರುವ ಹಾಗೂ ನಿರ್ಮಾಣ ಹಂತದಲ್ಲಿರುವ ರೆಸಾರ್ಟ್‌ಗಳಿಗೆ ಇಲಾಖೆಯಿಂದ ಭೂಪರಿವರ್ತನೆ ಮಾಡಿಕೊಡಲಾಗಿದೆಯೇ? (ದಾಖಲೆಯ ಪ್ರತಿಯನ್ನು ನೀಡುವುದು)

## ಕೊಡಗು ಜಿಲ್ಲೆಯ ರೆಸಾರ್ಟ್‌ಗಳಿಗೆ ಜಿಲ್ಲಾಡಳಿತ ನೀಡಿರುವ ಅನುಮತಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೬೧ (೧೨೨೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ/ಉದ್ದಿಮೆ ನಡೆಸುತ್ತಿರುವ/ನಿರ್ಮಾಣ ಹಂತದಲ್ಲಿರುವ ರೆಸಾರ್ಟ್‌ಗಳ ಸಂಖ್ಯೆ ಎಷ್ಟು; (ಪಟ್ಟಿ ನೀಡುವುದು) (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ರೆಸಾರ್ಟ್‌ಗಳು, ಉದ್ದಿಮೆ ನಡೆಸಲು ಜಿಲ್ಲಾಡಳಿತದಿಂದ ಅನುಮತಿ/ಲೈಸನ್ಸ್ ಪಡೆಯಲಾಗಿದೆಯೇ; ಪಡೆದಿದ್ದಲ್ಲಿ, ದಾಖಲಾತಿಗಳನ್ನು ನೀಡುವುದು;

(ಇ) ಇದುವರೆಗೆ ಸರ್ಕಾರ ರೂಪಿಸಿರುವ ನಿಯಮ/ಮಾನದಂಡಗಳನ್ನು ಪಾಲಿಸದೆ ಇರುವ ಕಾರಣಕ್ಕೆ ರೆಸಾರ್ಟ್‌ಗಳ ಪರವಾನಗಿಯನ್ನು ರದ್ದುಗೊಳಿಸಿರುವ ಪ್ರಕರಣಗಳು ಎಷ್ಟು? (ಕಳೆದ ೧೦ ವರ್ಷಗಳ ವಿವರ ನೀಡುವುದು)

## ಕೊಡಗು ಜಿಲ್ಲೆಯ ಪಹಣಿಯಲ್ಲಿರುವ ಟನ್ಯೂರ್‌ಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೬೨ (೧೧೮೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯ ಪಹಣಿಗಳಲ್ಲಿರುವ ಟನ್ಯೂರ್‌ಗಳೆಷ್ಟು; (ಸಂಪೂರ್ಣ ಪಟ್ಟಿ ನೀಡುವುದು) ಸದರಿ ಟನ್ಯೂರ್‌ಗಳಿಗೆ ಸಂಬಂಧಿಸಿದಂತೆ ಕಂದಾಯ ನಿಗಧಿಯಲ್ಲಿ ವ್ಯತ್ಯಾಸಗಳಿವೆಯೇ; ಇದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು ಹಾಗೂ ಸದರಿ ಪಹಣಿಗಳಲ್ಲಿರುವ ಟನ್ಯೂರ್‌ಗಳನ್ನು ಕಡಿಮೆ ಮಾಡಲು ಈವರೆಗೆ ಏನು ಕ್ರಮ ಕೈಗೊಳ್ಳಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಆ) ಕರ್ನಾಟಕ ಲ್ಯಾಂಡ್ ಆಕ್ಟ್‌ಗೆ ಕೂರ್ಗ್ ರೆವೆನ್ಯೂ ಆಕ್ಟ್ ಸಂಪೂರ್ಣ ವಿಲೀನವಾಗಿದೆಯೇ; ಇಲ್ಲದಿದ್ದಲ್ಲಿ, ಮಾಹಿತಿ ನೀಡುವುದು;

(ಇ) ಕೂರ್ಗ್ ರೆವೆನ್ಯೂ ಆಕ್ಟ್‌ನ ಅಂಶಗಳು ಈಗಲೂ ಜಾರಿಯಲ್ಲಿದೆಯೇ; ಇದ್ದಲ್ಲಿ, ಸದರಿ ಅಂಶಗಳನ್ನು ಮುಂದುವರೆಸಲು ಇರುವ ಕಾರಣಗಳೇನು?

## ಕೊಡಗು ಜಿಲ್ಲೆಯಲ್ಲಿರುವ ಕಂದಾಯ ಗ್ರಾಮಗಳು/ಉಪಗ್ರಾಮಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೬೩ (೧೧೮೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿರುವ ಒಟ್ಟು ಕಂದಾಯ ಗ್ರಾಮಗಳು ಮತ್ತು ಉಪ ಗ್ರಾಮಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಗ್ರಾಮಗಳ ಹೆಸರಿನೊಂದಿಗೆ ವಿವರ ನೀಡುವುದು)

(ಆ) ಗುರುತಿಸಿರುವ ಉಪ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡಲು ಜಿಲ್ಲಾಡಳಿತ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಕಂದಾಯ ಗ್ರಾಮಗಳಿಗೂ ಹಾಗೂ ಉಪಗ್ರಾಮಗಳಿಗೂ ಇರುವ ವ್ಯತ್ಯಾಸಗಳೇನು ಹಾಗೂ ಉಪಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಿಸಲು ಇರುವ ಮಾನದಂಡಗಳು ಹಾಗೂ ಪ್ರಕ್ರಿಯೆಗಳೇನು? (ವಿವರ ನೀಡುವುದು)

## ಭೂಮಾಪಕರ ಹುದ್ದೆಗಳ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೬೪ (೧೧೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿ ಮಂಜೂರಾಗಿರುವ ಭೂ ಮಾಪಕರ ಹುದ್ದೆಗಳೆಷ್ಟು; ಅದರ ಪೈಕಿ ಭರ್ತಿಯಾಗಿರುವ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಬೆಳಗಾವಿ ಜಿಲ್ಲೆಯಲ್ಲಿ ಭೂ ಮಾಪಕರ ಕೊರತೆಯಿಂದ ಸಾರ್ವಜನಿಕರಿಗೆ ಅದರಲ್ಲೂ ರೈತರಿಗೆ ತುಂಬಾ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬೆಳಗಾವಿ ಜಿಲ್ಲೆಯಲ್ಲಿ ತಾಲ್ಲೂಕುವಾರು ಸರ್ವೆಗಾಗಿ ಬಾಕಿ ಇರುವ ಪ್ರಕರಣಗಳೆಷ್ಟು; ಸರ್ವೆಗಾಗಿ ಬಾಕಿ ಇರುವ ಪ್ರತಿ ತಾಲ್ಲೂಕಿನ ಅರ್ಜಿದಾರರ ವಿವರ ನೀಡುವುದು;

(ಈ) ಸರ್ವೆ ಬಾಕಿ ಇರುವ ಪ್ರಕರಣಗಳನ್ನು ಎಷ್ಟು ದಿನಗಳಲ್ಲಿ ಪೂರ್ಣಗೊಳಿಸಲಾಗುವುದು? (ವಿವರ ನೀಡುವುದು)

## ಅರಣ್ಯಗಳಲ್ಲಿ ಸಸಿ ನೆಡುವ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೬೫ (೧೧೧೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿ ಅರಣ್ಯ ನಶಿಸಿ ಹೋಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆಳಗಾವಿ ಜಿಲ್ಲೆಯ ಅರಣ್ಯವನ್ನು ಮರು ಬೆಳೆಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಬೆಳಗಾವಿ ಜಿಲ್ಲೆಗೆ ತಾಲ್ಲೂಕುವಾರು ಮೀಸಲಿಟ್ಟ ಅನುದಾನವೆಷ್ಟು; ಆ ಪೈಕಿ ಖರ್ಚಾದ ಅನುದಾನವೆಷ್ಟು; ಯಾವ ಉದ್ದೇಶಕ್ಕಾಗಿ ಖರ್ಚು ಮಾಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಪ್ರತಿ ತಾಲ್ಲೂಕಿನಲ್ಲಿ ನೆಡಲಾದ ಸಸಿಗಳೆಷ್ಟು; ಅವುಗಳಲ್ಲಿ ಎಷ್ಟು ಸಸಿಗಳು ಉಳಿದಿರುತ್ತವೆ? (ವಿವರ ನೀಡುವುದು)

# ಬೆಳಗಾವಿಯ ಕಿತ್ತೂರು ರಾಣಿ ಚೆನ್ನಮ್ಮ ವನ್ಯಧಾಮವನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೬೬ (೧೧೧೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ಬೆಳಗಾವಿ ತಾಲ್ಲೂಕಿನ ಭೂತರಾಮನಹಟ್ಟಿ ಕಿತ್ತೂರು ರಾಣಿ ಚೆನ್ನಮ್ಮ ವನ್ಯಧಾಮದಲ್ಲಿ ಮೃಗಾಲಯವಿದ್ದು, ಈ ಮೃಗಾಲಯದಲ್ಲಿ ಯಾವುದೇ ಪ್ರಾಣಿ ಪಕ್ಷಿಗಳು ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕರ್ನಾಟಕ ರಾಜ್ಯ ಮೈಸೂರು ಮೃಗಾಲಯದ ಮಾದರಿಯಲ್ಲಿ ಉತ್ತರ ಕರ್ನಾಟಕದ ಸಾರ್ವಜನಿಕರಿಗೆ ವಿದ್ಯಾರ್ಥಿಗಳ ವ್ಯಾಸಂಗಕ್ಕಾಗಿ ಅನುಕೂಲವಾಗಲು ಬೆಳಗಾವಿ ತಾಲ್ಲೂಕಿನ ಭೂತರಾಮನಹಟ್ಟಿ ಕಿತ್ತೂರು ರಾಣಿ ಚೆನ್ನಮ್ಮ ವನ್ಯಧಾಮವನ್ನು ಮೇಲ್ದರ್ಜೆಗೇರಿಸಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಕಳೆದ ೨೦೧೨–೧೩ನೇ ಸಾಲಿನಿಂದ ಇಲ್ಲಿಯವರೆಗೆ ಸದರಿ ವನ್ಯಧಾಮದ ಮೃಗಾಲಯಕ್ಕೆ ಎಷ್ಟು ಅನುದಾನ ಮಂಜೂರು ಮಾಡಲಾಗಿರುತ್ತದೆ; ಯಾವ ಉದ್ದೇಶಕ್ಕಾಗಿ ಮಂಜೂರು ಮಾಡಲಾಗಿರುತ್ತದೆ; ಈ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳಾವುವು? (ಸಂಪೂರ್ಣ ವಿವರವನ್ನು ಕಾಮಗಾರಿವಾರು, ವರ್ಷವಾರು, ಅನುದಾನವಾರು ನೀಡುವುದು)

## ಜಲಸಂಪನ್ಮೂಲ ಇಲಾಖೆಯಿಂದ ಬಿಡುಗಡೆಯಾದ ಹಣದ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೬೭ (೧೧೨೩) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಜಲಸಂಪನ್ಮೂಲ ಇಲಾಖೆಯಿಂದ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಈ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; (ವಿವರಗಳನ್ನು ನೀಡುವುದು)

(ಇ) ಸರ್ಕಾರ ಬಿಡುಗಡೆ ಮಾಡಿದ ಅನುದಾನದಲ್ಲಿ ಇದುವರೆವಿಗೂ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು; (ಕಾಮಗಾರಿಗಳವಾರು, ತಾಲ್ಲೂಕುವಾರು ಸಂಪೂರ್ಣ ವಿವರಗಳನ್ನು ಒದಗಿಸುವುದು)

(ಈ) ಈ ಯೋಜನೆಯ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

## ಸಣ್ಣ ನೀರಾವರಿ ಇಲಾಖೆಯಿಂದ ಕೆರೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೬೮ (೧೧೨೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ರಾಮನಗರ ಹಾಗೂ ಚಾಮರಾಜನಗರ ಜಿಲ್ಲೆಗಳಿಗೆ ಸಣ್ಣ ನೀರಾವರಿ ಇಲಾಖೆಗೆ ಸೇರಿದ ಕೆರೆಗಳ ಅಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನವೆಷ್ಟು; (ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; (ವಿವರಗಳನ್ನು ನೀಡುವುದು)

(ಇ) ಸರ್ಕಾರ ಬಿಡುಗಡೆ ಮಾಡಿದ ಅನುದಾನದಲ್ಲಿ ಇದುವರೆವಿಗೂ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು; (ಕಾಮಗಾರಿಗಳವಾರು, ತಾಲ್ಲೂಕುವಾರು ಸಂಪೂರ್ಣ ವಿವರಗಳನ್ನು ಒದಗಿಸುವುದು)

(ಈ) ಈ ಯೋಜನೆಯ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

## ಅರಣ್ಯ ಭೂಮಿಯಲ್ಲಿ ಸಾಗುವಳಿ ಮಾಡುತ್ತಿರುವವರಿಗೆ ಸಾಗುವಳಿ ಚೀಟಿ ನೀಡುವ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೪೯ (೧೧೨೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆಯಲ್ಲಿರುವ ಒಟ್ಟು ಅರಣ್ಯ ಭೂಮಿಯ ವಿಸ್ತೀರ್ಣವೆಷ್ಟು; ಅದರಲ್ಲಿ ರೈತರು ಸಾಗುವಳಿ ಮಾಡುತ್ತಿರುವ ಅರಣ್ಯ ಭೂರ್ಮಿಯ ವಿಸ್ತೀರ್ಣವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೫೦ ವರ್ಷಗಳಿಂದ ಅರಣ್ಯ ಭೂಮಿಯಲ್ಲಿ ಸಾಗುವಳಿ ಮಾಡುತ್ತಿರುವ ರೈತರನ್ನು ಒಕ್ಕಲೆಬ್ಬಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಎಷ್ಟು ರೈತರನ್ನು ಒಕ್ಕಲೆಬ್ಬಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಅರಣ್ಯ ಭೂಮಿಯಲ್ಲಿ ಸಾಗುವಳಿ ಮಾಡುತ್ತಿರುವ ರೈತರು ಸಾಗುವಳಿ ಚೀಟಿಗಾಗಿ ಅರ್ಜಿ ಸಲ್ಲಿಸಿದ್ದರೂ ಸಹ ಸಾಗುವಳಿ ಚೀಟಿ ನೀಡುವಲ್ಲಿ ವಿಳಂಬವಾಗುತ್ತಿದ್ದು, ಸರ್ಕಾರ ಈಗಲಾದರೂ ಸಾಗುವಳಿ ಚೀಟಿ ನೀಡಲು ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)

## ರಾಮನಗರ ಹಾಗೂ ಚಾಮರಾಜನಗರ ಜಿಲ್ಲೆಗಳ ಬರದ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೭೦ (೧೧೨೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಹಾಗೂ ಚಾಮರಾಜನಗರ ಜಿಲ್ಲೆಗಳ ಎಷ್ಟು ತಾಲ್ಲೂಕುಗಳನ್ನು ಬರಪಟ್ಟಿಯಲ್ಲಿ ಸೇರಿಸಲಾಗಿದೆ;

(ಆ) ಈ ಬರಪೀಡಿತ ತಾಲ್ಲೂಕುಗಳಲ್ಲಿ ಬರ ನಿರ್ವಹಣೆಗೆ ಕ್ರಮ ಕೈಗೊಂಡಿದೆಯೇ;

(ಇ) ಹಾಗಿದ್ದಲ್ಲಿ, ಸರ್ಕಾರ ಇದುವರೆಗೂ ಬಿಡುಗಡೆ ಮಾಡಿದ ಅನುದಾನವೆಷ್ಟು; ಖರ್ಚು ಮಾಡಲಾದ ಹಣವೆಷ್ಟು; ಕೈಗೊಳ್ಳಲಾಗಿರುವ ಪರಿಹಾರ ಕಾಮಗಾರಿಗಳು ಯಾವುವು? (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

## ಅರಣ್ಯ ಪ್ರದೇಶದ ಕಾಡ್ಗಿಚ್ಚಿನ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೭೧ (೧೧೨೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ, ಚಾಮರಾಜನಗರ ಹಾಗೂ ಮೈಸೂರು ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಅರಣ್ಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವೃಂದವಾರು ಮಾಹಿತಿ ನೀಡುವುದು)

(ಆ) ಈ ಅಧಿಕಾರಿ/ಸಿಬ್ಬಂದಿಗಳ ಕಾರ್ಯಭಾರದ ಸಂಪೂರ್ಣ ಮಾಹಿತಿ ನೀಡುವುದು;

(ಇ) ಚಾಮರಾಜನಗರ ಜಿಲ್ಲೆಯ ಬಂಡೀಪುರ ಅರಣ್ಯ ಪ್ರದೇಶದಲ್ಲಿ ಇತ್ತೀಚೆಗೆ ಉಂಟಾದ ಕಾಡ್ಗಿಚ್ಚಿನಿಂದ ಉಂಟಾದ ನಷ್ಟವೆಷ್ಟು; (ಜೀವಹಾನಿ, ಪ್ರಾಣಿಹಾನಿ ಹಾಗೂ ಅರಣ್ಯ ಸಂಪತ್ತಿನ ಹಾನಿ ಪ್ರತ್ಯೇಕ ಮಾಹಿತಿ ನೀಡುವುದು)

(ಈ) ಅರಣ್ಯ ಪ್ರದೇಶದಲ್ಲಿ ಕಾಡ್ಗಿಚ್ಚು ಉಂಟಾಗಲು ಕಾರಣಗಳೇನು; ಬೇಸಿಗೆ ಸಮೀಪಿಸುತ್ತಿರುವುದರಿಂದ ಅರಣ್ಯ ಇಲಾಖೆಯವರು ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳೇನು? (ವಿವರ ನೀಡುವುದು)

## ರಾಜ್ಯದಲ್ಲಿ ಬೀಡಿ ಕಾರ್ಮಿಕರಿಗೆ ನೀಡುತ್ತಿರುವ ಸಂಬಳ ಮತ್ತು ಭತ್ಯೆಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೪೭೨ (೧೯೯೮) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬೀಡಿ ಕಾರ್ಮಿಕರಿಗೆ ನೀಡುತ್ತಿರುವ ಸಂಬಳ ಮತ್ತು ಭತ್ಯೆಗಳನ್ನು ಬ್ಯಾಂಕ್‌ಗಳಲ್ಲಿ ಜಮೆ ಮಾಡುವುದರಿಂದ ಗ್ರಾಮೀಣ ಪ್ರದೇಶದ ಮಹಿಳಾ ಬೀಡಿ ಕಾರ್ಮಿಕರಿಗೆ ಉಂಟಾಗುವ ತೊಂದರೆಗಳು ಇಲಾಖೆಯ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇಲಾಖೆ ಕೈಗೊಂಡ ಕ್ರಮಗಳೇನು;

(ಆ) ರಾಜ್ಯದಲ್ಲಿರುವ ಒಟ್ಟು ಬೀಡಿ ಕಾರ್ಮಿಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಬೀಡಿ ಕಾರ್ಮಿಕರಿಗೆ ಬೀಡಿ ಉದ್ದಿಮೆ ಬಂದ್ ಆಗುವುದರಿಂದ ಕಾರ್ಮಿಕರು ಕೆಲಸಗಳನ್ನು ಕಳೆದುಕೊಳ್ಳುತ್ತಿದ್ದು, ಬೀಡಿ ಕಾರ್ಮಿಕರಿಗೆ ಪುನರ್‌ವಸತಿ ಕಲ್ಪಿಸುವ ಯೋಜನೆ ಇಲಾಖೆ ಮುಂದಿದೆಯೇ; (ವಿವರ ನೀಡುವುದು)

(ಈ) ಬೀಡಿ ಕಾರ್ಮಿಕರಿಗೆ ಅನೇಕ ಸವಲತ್ತುಗಳು ಸಿಗದೇ ವಂಚಿತರಾಗಿರುವ ಬಗ್ಗೆ ಇಲಾಖೆ ವತಿಯಿಂದ ಕಾರ್ಮಿಕರ ಸಮಸ್ಯೆಗಳನ್ನು ಕೇಳಲು ಸಭೆಯನ್ನು ಕರೆಯಲಾಗುವುದೇ?

## ಕಸ್ತೂರಿ ರಂಗನ್ ವರದಿಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೪೭೩ (೧೧೯೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಸ್ತೂರಿ ರಂಗನ್ ವರದಿಗೆ ರಾಜ್ಯ ಸರ್ಕಾರ ಸಲ್ಲಿಸಿದ ಆಕ್ಷೇಪಣೆಯನ್ನು ಕೇಂದ್ರ ಸರ್ಕಾರ ಪರಿಗಣಿಸಿದೆಯೇ; (ವಿವರ ನೀಡುವುದು)

(ಆ) ಕಸ್ತೂರಿ ರಂಗನ್ ವರದಿಯಿಂದ ರಾಜ್ಯದ ಅರಣ್ಯ ಪ್ರದೇಶದಲ್ಲಿ ವಾಸಿಸುತ್ತಿರುವ ಜನರ ಮೇಲೆ ಬೀರುವ ಪರಿಣಾಮ ಯಾವುವು;

(ಇ) ಕಸ್ತೂರಿ ರಂಗನ್ ವರದಿಗೆ ಕೇರಳ ರಾಜ್ಯ ಸಲ್ಲಿಸಿರುವ ಆಕ್ಷೇಪಣೆಗಳೇನು; ಈ ಬಗ್ಗೆ ರಾಜ್ಯ ಸರ್ಕಾರದ ನಿಲುವೇನು;

(ಈ) ಕಸ್ತೂರಿ ರಂಗನ್ ವರದಿಯಿಂದ ತೊಂದರೆಗೊಳಗಾದ ರಾಜ್ಯದ ಅರಣ್ಯ ಪ್ರದೇಶದಲ್ಲಿ ವಾಸಿಸುವ ಕುಟುಂಬಗಳಿಗೆ ನೀಡಲು ಉದ್ದೇಶಿಸಿರುವ ಪರಿಹಾರವೇನು? (ವಿವರ ನೀಡುವುದು)

## ಮೂಲ ಗೇಣಿದಾರರ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೪೭೪ (೧೨೦೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೂಲ ಗೇಣಿದಾರರ ಕಾನೂನನ್ನು ಸರ್ಕಾರ ಜಾರಿಗೊಳಿಸಿದ್ದರೂ, ಅರ್ಜಿಗಳನ್ನು ಸಲ್ಲಿಸುವುದನ್ನು ನಿಲ್ಲಿಸಿರುವುದಕ್ಕೆ ಕಾರಣಗಳೇನು;

(ಆ) ಮೂಲ ಗೇಣಿದಾರರಿಗೆ ಮಾಲಿ ಹಕ್ಕನ್ನು ನೀಡುವ ಬಗ್ಗೆ ಕಾನೂನಿನಲ್ಲಿ ಸ್ಪಷ್ಟವಾಗಿದ್ದರೂ, ನ್ಯಾಯಾಲಯದಲ್ಲಿ ರಾಜ್ಯದ ಪರವಾಗಿ ಸಮರ್ಥವಾಗಿ ವಾದ ಮಂಡಿಸಲಾಗಿದೆಯೇ;

(ಇ) ಮೂಲ ಗೇಣಿ ಅಥವಾ ಒಳ ಮೂಲ ಗೇಣಿ ಕಾನೂನನ್ನು ಸರ್ಕಾರ ಜಾರಿಗೆ ತರಲು ಮತ್ತು ಮಾಲಿ ಹಕ್ಕನ್ನು ಜಾರಿಗೆ ತರುವ ಬಗ್ಗೆ ಇಲಾಖೆಯ ಮುಂದಿರುವ ಯೋಜನೆಗಳಾವುವು;

(ಈ) ಮಾಲಿ ಹಕ್ಕು ಅರ್ಜಿಗಳನ್ನು ಇತ್ಯರ್ಥಪಡಿಸಲು ಇಲಾಖೆ ಪ್ರತ್ಯೇಕ ವಿಭಾಗವನ್ನು ತೆರೆಯಲಾಗುವುದೇ?

## ಅಕ್ರಮ–ಸಕ್ರಮ ೯೪ಸಿ ಮತ್ತು ೯೪ ಸಿ.ಸಿ ಮೂಲಿ ಹಕ್ಕುಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೪೭೫ (೧೨೦೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಕ್ರಮ–ಸಕ್ರಮ, ೯೪ಸಿ ಮತ್ತು ೯೪ಸಿ.ಸಿ ಮೂಲಿಹಕ್ಕು ಕಾಯ್ದೆಗಳ ಪ್ರಕಾರ ಅರ್ಜಿದಾರರಿಗೆ ಹಕ್ಕನ್ನು ನೀಡಲು ವಿಶೇಷ ಅಧಿಕಾರಿಗಳನ್ನು ನೇಮಕ ಮಾಡಿ ಅರ್ಜಿಗಳನ್ನು ಇತ್ಯರ್ಥಪಡಿಸಲು ಇಲಾಖೆ ಕೈಗೊಂಡ ಕ್ರಮಗಳೇನು;

(ಆ) ರಾಜ್ಯದಲ್ಲಿ ೯೪ಸಿ ಮತ್ತು ೯೪ ಸಿ.ಸಿ ಅನ್ವಯ ಸಲ್ಲಿಸಲಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಇ) ರಾಜ್ಯದಲ್ಲಿ ಮೂಲ ಗೇಣಿ ಮತ್ತು ಒಳ ಮೂಲ ಗೇಣಿ ಕಾಯ್ದೆ–೨೦೧೧ ಅನ್ವಯ ಸ್ವೀಕೃತಗೊಂಡ ಅರ್ಜಿಗಳೆಷ್ಟು; ಈ ಅರ್ಜಿಗಳನ್ನು ಯಾವಾಗ ಇತ್ಯರ್ಥಪಡಿಸಲಾಗುವುದು; (ವಿವರ ನೀಡುವುದು)

(ಈ) ಮೇಲಿನ ಕಾನೂನಿನ ಅನ್ವಯ ಅರ್ಜಿಗಳನ್ನು ಇತ್ಯರ್ಥಪಡಿಸಲು ವಿಶೇಷ ತಹಶೀಲ್ದಾರ್‌ರನ್ನು ನೇಮಿಸಲಾಗುವುದೇ?

## ರಾಜ್ಯದಲ್ಲಿರುವ ಗಾರ್ಮೆಂಟ್ಸ್‌ಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೭೫ಎ (೧೦೫೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಗಾರ್ಮೆಂಟ್ಸ್ ಫ್ಯಾಕ್ಟರಿಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಕೆಲಸ ಮಾಡುತ್ತಿರುವ ನೌಕರರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ತುಮಕೂರು ಜಿಲ್ಲೆಯಲ್ಲಿರುವ ಗಾರ್ಮೆಂಟ್ಸ್‌ಗಳ ಸಂಖ್ಯೆ ಎಷ್ಟು; ಅವು ಯಾವ ಯಾವ ತಾಲ್ಲೂಕಿನಲ್ಲಿವೆ; (ಮಾಲೀಕರ/ಸಂಸ್ಥೆಯ ಹೆಸರು ವಿಳಾಸ, ದೂರವಾಣಿ ಸಂಖ್ಯೆಯೊಂದಿಗೆ ಮಾಹಿತಿ ನೀಡುವುದು)

(ಇ) ಅಲ್ಲಿ ಕೆಲಸ ಮಾಡುತ್ತಿರುವ ನೌಕರರ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು) ಗಾರ್ಮೆಂಟ್ಸ್‌ಗಳಲ್ಲಿ ಕೆಲಸ ಮಾಡುತ್ತಿರುವ ನೌಕರರಿಗೆ ಇಂದಿನ ಮಾರುಕಟ್ಟೆ ಧಾರಣೆಯ ಅನುಸಾರ ಮತ್ತು ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ವೇತನವನ್ನು ನೀಡಲಾಗುತ್ತಿದೆಯೇ; (ಮಾಹಿತಿ ನೀಡುವುದು)

(ಈ) ಗಾರ್ಮೆಂಟ್ಸ್‌ಗಳಲ್ಲಿ ಕೆಲಸ ಮಾಡುವ ನೌಕರರಿಗೆ ನೀಡಿರುವ ಮೂಲಭೂತ ಸೌಲಭ್ಯಗಳು ಯಾವುವು; (ವಿವರ ನೀಡುವುದು)

(ಉ) ಗಾರ್ಮೆಂಟ್ಸ್‌ಗಳಲ್ಲಿ ಕೆಲಸ ಮಾಡುವ ಮಹಿಳಾ ನೌಕರರಿಗೆ ವಿಶೇಷವಾಗಿ ನೀಡಿರುವ ಸೌಲಭ್ಯಗಳು ಮತ್ತು ಸವಲತ್ತುಗಳು ಯಾವುವು; (ವಿವರ ನೀಡುವುದು)

(ಊ) ಸರ್ಕಾರದ ಮಾರ್ಗಸೂಚಿಯಂತೆ ವೇತನ ಮತ್ತು ಇತರೆ ಸೌಲಭ್ಯಗಳನ್ನು ನೀಡದಿರುವ ಗಾರ್ಮೆಂಟ್ಸ್‌ಗಳ ಮಾಲೀಕರ ಮೇಲೆ ತೆಗೆದುಕೊಂಡಿರುವ ಕ್ರಮಗಳಾವುವು?

**ಶ್ರೀನಿವಾಸ**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0301/900 ಪ್ರತಿಗಳು/13–03–2017